ಸಂಪುಟ : 13 Volume ಸಂಚಿಕೆ : 189 Issue ಪುಟಗಳು : 08 Pages ಮಂಗಳವಾರ 09 ಸಪ್ಟೆಂಬರ್ 2025 ₹2 RNINO:KARKAN/2011/48371 BDR/054/2026-20274 mallammanudi@gmail.com www.mallammanudi.in 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

ಬೆಳಗು
' ತೆರೆದ ಮನಸ್ಸಿನಿಂದ ಎಲ್ಲವನ್ನೂ ಕೇಳಿಸಿಕೊಳ್ಳಬೇಕು , ನಮಗೆ ಅಗತ್ಯವೆನಿಸಿದ್ದನ್ನು ಮಾತ್ರ ಉಳಿಸಿಕೊಳ್ಳಬೇಕು
–ಜೆ.ಜೆ. ಗ್ರೀನ್ .

ಬೆಳೆ ಹಾನಿ ಜಂಟಿ ಸಮೀಕ್ಷೆ 2
ವಿಶ್ವ ರೇಬೀಸ್ ದಿನ ಆಚರಣೆ 4
ಶಿಕ್ಷಣದಿಂದಲೇ ಪ್ರಗತಿ : ಖಂಡ್ರೆ 8

## ದಾಖಲೆ ಸ್ಥಾಪಿಸಿದ ಶಕ್ತಿ ಯೋಜನೆ: ಸಂಭ್ರಮ ಹಂಚಿಕೊಂಡ ಸಿಎಂ, ಸಾರಿಗೆ ಸಚಿವರು



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಸೆ.8: ರಾಜ್ಯದಲ್ಲಿ ಜಾರಿಯಲ್ಲಿರುವ ಶಕ್ತಿ ಯೋಜನೆಯಡಿ 500 ಕೋಟಿಗೂ ಹೆಚ್ಚು ಮಹಿಳಾ ಪ್ರಯಾಣಿಕರು ಉಚಿತವಾಗಿ ಸರ್ಕಾರಿ ಬಸ್ ಗಳಲ್ಲಿ ಪ್ರಯಾಣಿಸಿದ್ದಾರೆ. ಇದೊಂದು ವಿಶ್ವ ದಾಖಲೆಯಾಗಿದ್ದು ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ನಲ್ಲಿದಾಖಲಾಗಿದೆ.ಈ ಸಂತಸದ ಕ್ಷಣವನ್ನು ಮುಖ್ಯಮಂತ್ರಿಸಿದ್ದರಾಮಯ್ಯ ಅವರೊಂದಿಗೆ ಆಚರಿಸಿಕೊಂಡ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ನ ಪ್ರಮಾಣ ಪತ್ರವನ್ನು ತೋರಿಸಿ ಸಂಭ್ರಮದ ಕ್ಷಣವನ್ನು ಹಂಚಿಕೊಂಡರು.ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಅವರು ಸಚಿವರಿಗೆ ಗೋಲ್ಡನ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ನೀಡಿರುವ ಮೆಡಲ್ ಅನ್ನು ಸಚಿವರಿಗೆ ತೊಡಿಸಿ, ಸಂಭ್ರಮವನ್ನುಹಂಚಿಕೊಂಡರು.

## ಕುಡುಕ ಮಗನನ್ನು ಸುಟ್ಟು ಹಾಕಿದ ಹೆತ್ತವರು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.8–ಕುಡುಕ ಪುತ್ರನ ಕಿರುಕುಳಕ್ಕೆ ಬೇಸತ್ತ ತಂದೆ, ತಾಯಿ ಆತನನ್ನು ಸುಟ್ಟು ಹಾಕಿದ ಘಟನೆ ಜಿಲ್ಲೆಯ ಜಮಖಂಡಿ ತಾಲೂಕಿನ ಬಿದರಿ ಗ್ರಾಮದಲ್ಲಿ ನಡೆದಿದೆ. ಅನಿಲ ಕಾನಟ್ಟಿ(32)ಮೃತ ಪಟ್ಟ ಯುವಕನಾಗಿದ್ದು, ಆತನ ತಂದೆ ಪರಪ್ಪ, ತಾಯಿ ಶಾಂತಾ ಹಾಗೂ ಆತನ ಸಹೋದರ ಬಸವರಾಜ ಅವರುಗಳು ನಿತ್ಯ ಕುಡಿದು ಬಂದು ಜಗಳ ಮಾಡುತ್ತಿದ್ದ ಅನಿಲನ ಕಾಟಕ್ಕೆ ಬೇಸತ್ತು ಕೈ, ಕಾಲು ಕಟ್ಟಿ ಹಾಕಿ ಡಿಸೆಲ್ ಸುರಿದು ಬೆಂಕಿ ಹಚ್ಚಿ ದಹಿಸಿದ್ದಾರೆಂದು ಹೇಳಲಾಗಿದೆ. ಈ ಕುರಿತಂತೆ ಮೃತನ ತಂದೆ, ತಾಯಿ, ಸಹೋದರನನ್ನು ಕೊಲೆ ಆರೋಪದ ಮೇಲೆ ಸಾವಳಗಿ ಪೋಲಿಸರು ಬಂಧಿಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪ್ರಕರಣದ ತನಿಖೆ ನಡೆಸಲಾಗುತ್ತಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯೆಲ್ ತಿಳಿಸಿದ್ದಾರೆ.


## ೩ ದಿನ ರಾಜ್ಯಾದ್ಯಂತ ವರ್ಷಧಾರೆ, ಯೆಲ್ಲೋ ಅಲರ್ಟ್ ಘೋಷಣೆ

ಮಲ್ಲಮ್ಮ ನುಡಿ ವಾರ್ತೆಬೆಂಗಳೂರು:ಸೆ.8: ಇತ್ತೀಚೆಗೆ ತಣ್ಣಗಾಗಿದ್ದ ಮಳೆರಾಯ ಮತ್ತೆ ಅಬ್ಬರಿಸಲು ಸಜ್ಜಾಗಿದ್ದು ಮುಂದಿನ 3 ದಿನಗಳ ಕಾಲ ರಾಜ್ಯಾದ್ಯಂತ ಮಳೆ ಚುರುಕು ಪಡೆಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.ಕರ್ನಾಟಕದಲ್ಲಿ ಮುಂದಿನ ಮೂರು ದಿನದ ಬಳಿಕ ಮತ್ತೆ ಮಳೆ ಹೆಚ್ಚಾಗಲಿದ್ದು, ಕರಾವಳಿಯಲ್ಲಿ ಸಾಧಾರಣ ಮಳೆಯಾಗಲಿದ್ದು, ಉತ್ತರ ಹಾಗೂ ದಕ್ಷಿಣ ಒಳನಾಡಿನ ಸಾಕಷ್ಟು ಕಡೆ ಭಾರಿ ಮಳೆಯಾಗಲಿದ್ದು, ಯೆಲ್ಲೋ ಅಲರ್ಟ್? ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಸೆಪ್ಟೆಂಬರ್ 8 ರಿಂದ 10ರವರೆಗೂ ರಾಜ್ಯದ ಸಾಕಷ್ಟು ಕಡೆಗಳಲ್ಲಿ ಮತ್ತೆ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದ್ದು, ರಾಜ್ಯದ ವಿಜಯನಗರ,




ಶಿವಮೊಗ್ಗ, ಮೈಸೂರು, ಮಂಡ್ಯ, ಕೊಡಗು, ಹಾಸನ, ದಾವಣಗೆರೆ, ಚಿತ್ರದುರ್ಗ, ಚಿಕ್ಕಮಗಳೂರು, ಚಾಮರಾಜನಗರ, ಯಾದಗಿರಿ, ರಾಯಚೂರು, ಕೊಪ್ಪಳ, ಗದಗ, ಧಾರವಾಡ, ಬೆಳಗಾವಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿಯಲ್ಲಿ ಸಾಧಾರಣ ಮಳೆಯಾಗಲಿದೆ.

## ಸೆಲ್ಫಿ ಗೀಳಿಗೆ ಮತ್ತಿಬ್ಬರು ಬಲಿ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು:ಸೆ.8: ಸೆಲ್ಫಿ ಗೀಳಿಗೆ ಮತ್ತೆರಡು ಬಲಿಯಾಗಿದ್ದು, ಕೆರೆಯಲ್ಲಿಫೋಟೋತೆಗೆದುಕೊಳ್ಳುತ್ತಿದ್ದಾಗಕಾಲು ಜಾರಿ ಇಬ್ಬರು ಸಾವನ್ನಪ್ಪಿದ್ದಾರೆ.ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಅವೆರಹಳ್ಳಿಯ ಹೊಸ್ಕೆರೆ ಕೆರೆಯಲ್ಲಿ ಭಾನುವಾರ ಸಂಜೆ ಈ ದುರ್ಘಟನೆ ಸಂಭವಿಸಿದ್ದು, ಸೆಲ್ಫಿ ಹುಚ್ಚುತನದಿಂದ ಇಬ್ಬರು ಬಿಬಿಎ ವಿದ್ಯಾರ್ಥಿಗಳು ಮುಳುಗಿ ಸಾವನ್ನಪ್ಪಿದ್ದಾರೆ. ಮೃತರನ್ನು ಸಿದ್ಧಾರ್ಥ್ (20) ಮತ್ತು ನಿಶಾಂತ್ (21) ಎಂದು ಗುರುತಿಸಲಾಗಿದೆ, ಇಬ್ಬರೂ ಖಾಸಗಿ ಕಾಲೇಜಿನ ವಿದ್ಯಾರ್ಥಿಗಳು ಎಂದು ತಿಳಿದುಬಂದಿದೆ.ಪೊಲೀಸ್ ಮೂಲಗಳ ಪ್ರಕಾರ, 'ಆರು ಸ್ನೇಹಿತರು ರಾಮನಗರದ ರೆಸಾರ್ಟ್‌ಗೆ ಹೋಗಿ ನಂತರ ಅವೆರಹಳ್ಳಿಯ ಕೆರೆಗೆ ಭೇಟಿ ನೀಡಿದ್ದರು. ಸಂಜೆ 4.30 ರ ಸುಮಾರಿಗೆ ಕೆರೆಯಲ್ಲಿ ಇಳಿದು ಸೆಲ್ಫಿ ತೆಗೆದುಕೊಳ್ಳುವಾಗ, ಇಬ್ಬರೂ ಕಾಲು ಜಾರಿ ಬಿದ್ದು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದರು. ಅವರ ಸ್ನೇಹಿತರು ಸಹಾಯಕ್ಕಾಗಿ ಸ್ಥಳೀಯರಿಗೆ ಮಾಹಿತಿ ನೀಡಿದರು.

## ಬೀದರ್ ಬ್ರಿಮ್ಸ್ ಆಸ್ಪತ್ರೆಯ ಅವರಣಲ್ಲಿ ಕಸದ ರಾಶಿ ಕ್ಯಾರೆ ಎನ್ನದ ಅಧಿಕಾರಿಗಳು



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಬೀದರ್ ಬ್ರಿಮ್ಸ್ ಆಸ್ಪತ್ರೆ ಯಲ್ಲಿ ಕಸದ ರಾಶಿ ಹಾಕಲಾಗುತ್ತಿದೆ. ಈ ಬಗ್ಗೆ ಸಾಕಷ್ಟು ಬಾರಿ ಬೆಳಕು ಚಲ್ಲುತ್ತಿದ್ದರೊ ಕೂಡ ಅಧಿಕಾರಿಗಳು ಮಾತ್ರ ಗಾಢನಿದ್ರೆಯಲ್ಲಿದ್ದಾರೆ ಎಂಬ ಆರೋಪ ಸಾರ್ವಜನಿಕ ರದ್ದಾಗಿದೆ.

ಜಿಲ್ಲೆಗೆ ಇಬ್ಬರು ಸಚಿವರು, ಓರ್ವ ಸಂಸದ, ನಾಲ್ಕು ಜನ ಶಾಸಕರು, ಮೂವರು ಎಂಎಲ್ ಸಿ ಗಳಿದ್ದರು ಕೊಡಾ ಬೀದರ್ ಬ್ರಿಮ್ಸ್ ಅವ್ಯವಸ್ಥೆಯ ಕಡೆ ನೊಡುವರು ಯಾರು ಇಲ್ಲ ಎಂಬ ಮಾತು ಕೇಳಿಬರುತ್ತಿದೆ. ಕಸದ ರಾಶಿ ಹಾಕುತ್ತಿರುವ ಜಾಗದ ಪಕ್ಕದಲ್ಲಿ ಇಂದಿರಾ ಕ್ಯಾಂಟಿನ್ ಇದೆ. ಕಸದ ಪಕ್ಕದಲ್ಲಿ ಕುಳಿತು ಜನ ಹೇಗೆ ಊಟ ಮಾಡಬೇಕು ಎಂಬ ಪ್ರಶ್ನೆ ಜನರದ್ದಾಗಿದೆ. ಈಗಲಾದರೊ ಸಂಬಂಧ ಪಟ್ಟವರು ಈ ಬಗ್ಗೆ ಕ್ರಮ ಕೈಗೊಳ್ಳುತ್ತಾರೆಯೇ ಎಂಬುವದು ಕಾದು ನೋಡಬೇಕು.

ಸಚಿವ ರಹೀಮ ಖಾನ್ ಅವರು ಈ ಕಡೆ ಗಮನಹರಿಸಿ ಕ್ರಮಕ್ಕೆ ಮುಂದಾಗಬೇಕೆಂಬುದು ಜನರ ಆಶಯವಾಗಿದೆ.

# ಮಳೆಗೆ 111 ಸಾವು: ಸಿಎಂ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಸೆ.8: ಏಪ್ರಿಲ್ 1 ರಿಂದ ರಾಜ್ಯದಲ್ಲಿ ಮಳೆ ಸಂಬಂಧಿತ ಘಟನೆಗಳಲ್ಲಿ 111 ಜನರು ಸಾವನ್ನಪ್ಪಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ.

"ಈ ವರ್ಷ ಏಪ್ರಿಲ್ 1 ರಿಂದ ಸೆಪ್ಟೆಂಬರ್ 7 ರವರೆಗೆ ಮಳೆ ಸಂಬಂಧಿತ ಘಟನೆಗಳಿಂದ 111 ಮಾನವ ಜೀವಗಳು ಬಲಿಯಾಗಿವೆ. ಮೃತರ ಕುಟುಂಬಗಳಿಗೆ ತಲಾ 5 ಲಕ್ಷ ರೂ. ಪರಿಹಾರವನ್ನು ನೀಡಲಾಗಿದೆ, ಒಟ್ಟು ಸುಮಾರು 5.5 ಕೋಟಿ ರೂಪಾಯಿಗಳನ್ನು ಪರಿಹಾರವನ್ನಾಗಿ ನೀಡಲಾಗಿದೆ." ಎಂದು ಸಿದ್ದರಾಮಯ್ಯ, ಹಿರಿಯ ಸರ್ಕಾರಿ ಅಧಿಕಾರಿಗಳು ಮತ್ತು ಜಿಲ್ಲಾ ಜಿಲ್ಲಾಧಿಕಾರಿಗಳೊಂದಿಗಿನ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು. ಮಳೆಯಿಂದಾಗಿ 651 ಮನೆಗಳು ಸಂಪೂರ್ಣವಾಗಿ ಹಾನಿಗೊಳಗಾಗಿವೆ ಮತ್ತು 9,087 ಭಾಗಶಃ ಹಾನಿಗೊಳಗಾಗಿವೆ, ಕ್ರಮವಾಗಿ 649 ಮತ್ತು 8,608 ಪ್ರಕರಣಗಳಲ್ಲಿ ಪರಿಹಾರವನ್ನು ನೀಡಲಾಗಿದೆ. ನಾವು ಬಾಧಿತರಿಗೆ 24.30 ಕೋಟಿ ರೂ.ಗಳನ್ನು ಪಾವತಿಸಿದ್ದೇವೆ" ಎಂದು ಅವರು ಹೇಳಿದರು.

ಜಾನುವಾರು ನಷ್ಟವೂ ತೀವ್ರವಾಗಿದ್ದು, 766 ಪ್ರಾಣಿಗಳು ಸಾವನ್ನಪ್ಪಿವೆ ಮತ್ತು 1.52 ಕೋಟಿ ರೂ.ಗಳನ್ನು ಪರಿಹಾರವಾಗಿ ಬಿಡುಗಡೆ ಮಾಡಲಾಗಿದೆ. 5.20 ಲಕ್ಷ ಹೆಕ್ಟೇರ್‌ಗೂ ಹೆಚ್ಚು ಬೆಳೆ ಹಾನಿಯಾಗಿದ್ದು, ಇದರಲ್ಲಿ 4.80 ಲಕ್ಷ ಹೆಕ್ಟೇರ್ ಕೃಷಿ ಬೆಳೆಗಳು ಮತ್ತು 40,407 ಹೆಕ್ಟೇರ್ ತೋಟಗಾರಿಕಾ ಬೆಳೆಗಳು ಸೇರಿವೆ ಎಂದು ಸಿಎಂ ತಿಳಿಸಿದ್ದಾರೆ.ಸರ್ಕಾರದ ಯೋಜನೆಗಳ ಅಡಿಯಲ್ಲಿ ಸಂತ್ರಸ್ತ ಕುಟುಂಬಗಳಿಗೆ ವಸತಿ ಒದಗಿಸಬೇಕು ಎಂದು



ಮುಖ್ಯಮಂತ್ರಿಗಳು ಒತ್ತಿ ಹೇಳಿದರು. ತುಂಗಭದ್ರಾ ಅಣೆಕಟ್ಟಿನಲ್ಲಿ ಅಗತ್ಯವಿರುವ ಎಲ್ಲಾ ದುರಸ್ತಿಗಳನ್ನು ಮೊದಲ ಬೆಳೆಗೆ ನೀರು ಬಿಡುಗಡೆ ಮಾಡುವ ಮೊದಲು ಪೂರ್ಣಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಅವರು ಹೇಳಿದರುಕೃಷ್ಣಾ ಜಲಾನಯನ ಪ್ರದೇಶದ ಅಧಿಕಾರಿಗಳೊಂದಿಗೆ ಪರಿಸ್ಥಿತಿಯನ್ನು ಪರಿಶೀಲಿಸುವಾಗ, ತುಂಗಭದ್ರಾ ಅಣೆಕಟ್ಟಿನಲ್ಲಿ 32 ಕ್ರೆಸ್ಟ್ ಗೇಟ್‌ಗಳ ಬದಲಾವಣೆಗೆ ಟೆಂಡರ್ ನೀಡಲಾಗಿದೆ ಮತ್ತು ಎಂಟು ಗೇಟ್‌ಗಳು ಅಳವಡಿಕೆಗೆ ಸಿದ್ಧವಾಗಿವೆ ಎಂದು ಸಿದ್ದರಾಮಯ್ಯ ಅವರಿಗೆ ಅಧಿಕಾರಿಗಳು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ತುಂಗಭದ್ರಾ ಮಂಡಳಿ ಅಣೆಕಟ್ಟಿನ ನಿರ್ವಹಣೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಪ್ರಾಥಮಿಕವಾಗಿ ಜವಾಬ್ದಾರವಾಗಿದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದರು.'ಮೊದಲ ಬೆಳೆಗೆ ನೀರು ಬಿಡುಗಡೆ ಮಾಡುವ ಮೊದಲು ಅಗತ್ಯವಿರುವ ದುರಸ್ತಿಗಳನ್ನು ಪೂರ್ಣಗೊಳಿಸಬೇಕು. ಪ್ರಸ್ತುತ ಸಂಗ್ರಹ ಮಟ್ಟವನ್ನು ಗಮನಿಸಿದರೆ, ಎರಡನೇ ಬೆಳೆಗೆ ಅಲ್ಲ, ಮೊದಲ ಬೆಳೆಗೆ ಮಾತ್ರ ನೀರು ಒದಗಿಸಬಹುದು," ಎಂದು ಸಿಎಂ ಹೇಳಿದರು. ಜೂನ್ 1 ರಿಂದ ಸೆಪ್ಟೆಂಬರ್ ಆರಂಭದವರೆಗಿನ ಮುಂಗಾರು ಅವಧಿಯಲ್ಲಿ ರಾಜ್ಯದಲ್ಲಿ ಸಾಮಾನ್ಯಕ್ಕಿಂತ ನಾಲ್ಕು ಪ್ರತಿಶತ ಹೆಚ್ಚು ಮಳೆಯಾಗಿದ್ದು, ಸರಾಸರಿ 721 ಮಿ.ಮೀ.ಗೆ ಹೋಲಿಸಿದರೆ 753 ಮಿ.ಮೀ. ಮಳೆಯಾಗಿದೆ .

ಕಳೆದ ವರ್ಷ, ರಾಜ್ಯ ಶೇ.23 ರಷ್ಟು ಹೆಚ್ಚುವರಿ ಮಳೆಯನ್ನು ದಾಖಲಿಸಿದೆ. ಚಾಮರಾಜನಗರ ಶೇ. 24 ರಷ್ಟು ಕೊರತೆಯನ್ನು ದಾಖಲಿಸಿದ್ದರೆ, ವಿಜಯಪುರ, ಗದಗ, ಬಾಗಲಕೋಟೆ, ದಾವಣಗೆರೆ, ತುಮಕೂರು ಮತ್ತು ಬೆಳಗಾವಿ ಸೇರಿದಂತೆ ಜಿಲ್ಲೆಗಳು ಶೇ. 20 ಕ್ಕಿಂತ ಹೆಚ್ಚು ಮಳೆಯನ್ನು ದಾಖಲಿಸಿವೆ.ಪ್ರಮುಖ ಜಲಾಶಯಗಳು ಪ್ರಸ್ತುತ 840.52 ಟಿಎಂಸಿ ನೀರನ್ನು ಹೊಂದಿದ್ದು, ಗರಿಷ್ಠ ಸಾಮರ್ಥ್ಯ 895.62 ಟಿಎಂಸಿ ಆಗಿದ್ದು, ಕಳೆದ ವರ್ಷದ ಅದೇ ಸಮಯದಲ್ಲಿ 856.17 ಟಿಎಂಸಿಗಿಂತ ಸ್ವಲ್ಪ ಕಡಿಮೆಯಾಗಿದೆ.

## ಆರತಿ ಕೃಷ್ಣ, ಪತ್ರಕರ್ತ ಶಿವಕುಮಾರ್ ಸೇರಿ ನಾಲ್ವರ ನೇಮಕ

ಬೆಂಗಳೂರು:ಸೆ.8: ವಿಧಾನ ಪರಿಷತ್‌ನಲ್ಲಿ ಹಲವು ತಿಂಗಳಿಂದ ಖಾಲಿ ಇದ್ದ ನಾಲ್ಕು ಸದಸ್ಯ ಸ್ಥಾನಗಳಿಗೆ ಆರತಿ ಕೃಷ್ಣ, ರಮೇಶ್ ಬಾಬು, ಎಫ್.ಎಚ್. ಜಕ್ಕಪ್ಪನವರ್ ಮತ್ತು ಶಿವಕುಮಾರ್ ಅವರನ್ನು ನಾಮನಿರ್ದೇಶನ ಮಾಡಿ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ. ಕರ್ನಾಟಕ ಸರ್ಕಾರದ ಎನ್‌ಆರ್‌ಐ ಫೋರಂನ ಉಪಾಧ್ಯಕ್ಷೆ, ಶಿಕ್ಷಣ ತಜ್ಞೆ, ಕಾರ್ಮಿಕ ನಾಯಕಿ ಮತ್ತು ಎಐಸಿಸಿ ಎಸ್‌ಸಿ ಸೆಲ್‌ನ ಡಾ. ಅಂಬೇಡ್ಕರ್ ಫೌಂಡೇಶನ್‌ನ ಉಪಾಧ್ಯಕ್ಷೆ ಡಾ. ಆರತಿ ಕೃಷ್ಣ, ಎಐಸಿಸಿ ಎಸ್‌ಸಿ ಸೆಲ್‌ನ ಎಫ್‌ಎಚ್ ಜಕ್ಕಪ್ಪನವರ್, ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ನ ಹಿರಿಯ ಸಹಾಯಕ ಸಂಪಾದಕ ಶಿವಕುಮಾರ್ ಕೆ ಮತ್ತು ಕೆಪಿಸಿಸಿ ಮಾಧ್ಯಮ ಕೋಶದ ಅಧ್ಯಕ್ಷ ಮತ್ತು ಮಾಜಿ ಜೆಡಿಎಸ್ ಎಂಎಲ್‌ಸಿ ರಮೇಶ್ ಬಾಬು ಅವರನ್ನು ನಾಮನಿರ್ದೇಶನ ಮಾಡಲಾಗಿದೆ.ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ದಿನಾಂಕವನ್ನು ನೀಡಿದ ನಂತರ ಈ ನಾಲ್ವರು ಪ್ರಮಾಣವಚನ ಸ್ವೀಕರಿಸುವ ಸಾಧ್ಯತೆಯಿದೆ. ರಮೇಶ್ ಬಾಬು ಅವರಿಗೆ ಹತ್ತು ತಿಂಗಳ ಅವಧಿ ದೊರೆಯುತ್ತದೆ, ಅದು ಜುಲೈ 21, 2026 ರವರೆಗೆ ಇರುತ್ತದೆ, ಏಕೆಂದರೆ ಸಿಪಿ ಯೋಗೀಶ್ವರ್ ರಾಜಿನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ನೇಮಕ ಮಾಡಲಾಗಿದೆ , ಯೋಗೇಶ್ವರ್ ಈಗ ಚನ್ನಪಟ್ಟಣ ಶಾಸಕರಾಗಿದ್ದಾರೆ.

## ದರಿದ್ರ ಕಾಂಗ್ರೆಸ್ ಆಡಳಿತದಲ್ಲಿ ಹಿಂದೂಗಳಿಗೆ ಅಪಮಾನ, ಹಿಂದೂ ಭಾವನೆಗೆ ಧಕ್ಕೆ: ಬಿ.ವೈ.ವಿಜಯೇಂದ್ರ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಸೆ.8: ಈ ಬಿಜೆಪಿಯವರಿಂದ ರಾಜ್ಯದಲ್ಲಿ ನೆಮ್ಮದಿ ಹಾಳಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿಕೆ ಕೊಟ್ಟಿದ್ದಾರೆ. ದರಿದ್ರ ಕಾಂಗ್ರೆಸ್ ಪಕ್ಷವು ರಾಜ್ಯದಲ್ಲಿ ಅಧಿಕಾರಕ್ಕೆ ಬಂದಾಗಿನಿಂದ ಕರ್ನಾಟಕದಲ್ಲಿ ಹಿಂದೂಗಳಿಗೆ ಅಪಮಾನ, ಹಿಂದೂ ಭಾವನೆಗೆ ಧಕ್ಕೆ ಆಗುತ್ತಿದೆ. ಹಿಂದೂಗಳ ವಿರುದ್ಧ ಪ್ರಕರಣ ದಾಖಲಿಸಲಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಆಕ್ಷೇಪಿಸಿದ್ದಾರೆ.ಸಂಸದ ಬಿ.ವೈ.ರಾಘವೇಂದ್ರ ಅವರ ದೆಹಲಿಯ ಕಚೇರಿಯಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮದ್ದೂರಿನಲ್ಲಿ ಹೆಣ್ಮಕ್ಕಳ ಮೇಲೆ ಲಾಠಿ ಚಾರ್ಜ್ ಮಾಡಿದ್ದು ಸಣ್ಣ ಘಟನೆ ಎಂದು ಗೃಹ ಸಚಿವರಿಗೆ ಮತ್ತು ಮುಖ್ಯಮಂತ್ರಿಗಳಿಗೆ ಅನಿಸುವುದಾದರೆ, ಲಜ್ಜೆಗೆಟ್ಟ ವರ್ತನೆ ರಾಜ್ಯ ಸರ್ಕಾರದ್ದು ಎಂದು ಖಂಡಿಸಿದರು.ಮದ್ದೂರಿನಲ್ಲಿ ಇವತ್ತು ಹೆಣ್ಮಕ್ಕಳ ಮೇಲೆ ಲಾಠಿ ಚಾರ್ಜ್ ಮಾಡಿದ್ದಾರೆ. ದೇಶಾದ್ಯಂತ ಗಣೇಶ ಉತ್ಸವ ವಿಜೃಂಭಣೆಯಿಂದ ನಡೆ–ಯುತ್ತಿದೆ. ಮಹಾರಾಷ್ಟ್ರ ಸೇರಿ ಎಲ್ಲ ರಾಜ್ಯಗಳಲ್ಲಿ ಗಣೇಶ ಹಬ್ಬ, ವಿಗ್ರಹ ವಿಸರ್ಜನೆ ವಿಜೃಂಭಣೆಯಿಂದ ನಡೆ–ಯುತ್ತದೆ. ಕರ್ನಾಟಕದಲ್ಲಿ ಯಾಕೆ ಗಲಾಟೆ ಆಗುತ್ತಿದೆ ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ಈದ್ ಮಿಲಾದ್ ನಡೆದಾಗ ಎಲ್ಲಾದರೂ ಗಲಾಟೆ ಆಗಿದೆಯೇ ಎಂದು ಕೇಳಿದರು. ಕರ್ನಾಟಕದಲ್ಲೂ ಹಿಂದೂಗಳು ಶಾಂತಿಪ್ರಿಯರು. ಎಲ್ಲ ಧರ್ಮ, ಎಲ್ಲ ಸಮುದಾಯಗಳನ್ನು ಪ್ರೀತಿಸುವ ಕೆಲಸವನ್ನು ಹಿಂದೂ ಸಮಾಜ ಮಾಡುತ್ತಿದೆ. ಆದರೆ, ರಾಜ್ಯ ಸರ್ಕಾರ ನಡೆಸುವ ಕಾಂಗ್ರೆಸ್ ಪಕ್ಷ, ಮುಖ್ಯಮಂತ್ರಿಗಳು ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಮದ್ದೂರಿನದ್ದು ಸಣ್ಣಪುಟ್ಟ ಘಟನೆ ಎಂದು ಗೃಹ ಸಚಿವರು ಹೇಳಿದ್ದಾರೆ. ಮಹಿಳೆಯರ ಮೇಲೆ ಲಾಠಿ ಚಾರ್ಜ್ ಮಾಡಿದ್ದು, ಸಣ್ಣಪುಟ್ಟ ಘಟನೆ ಆಗಲು ಸಾಧ್ಯವೇ ಎಂದು ಕೇಳಿದರು



## ತುರ್ತು ಮತ್ತು ಹೆಚ್ಚಿನ ಪರಿಹಾರಕ್ಕೆ ಸಿ.ಎಂಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮನವಿ



ಮಲ್ಲಮ್ಮನುಡಿ ವಾರ್ತೆ ಬೀದರ,ಸೆ.08 : ತುರ್ತು ಮತ್ತು ಹೆಚ್ಚಿನ ಪರಿಹಾರ ನೀಡುವಂತೆ ಮುಖ್ಯಮಂತ್ರಿಗಳಿಗೆ ಅರಣ್ಯ , ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮನವಿ ಮಾಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ 2025ರ ಮುಂಗಾರು ಅವಧಿಯಲ್ಲಿ ರಾಜ್ಯದ ವಿವಿಧ ಭಾಗಗಳಲ್ಲಿ ಅತಿವೃಷ್ಟಿಯಿಂದ ಉಂಟಾದ ಹಾನಿ ಹಾಗೂ ಕೈಗೊಳ್ಳಲಾದ ಪರಿಹಾರ ಕ್ರಮಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ವೀಡಿಯೋ ಕಾನ್ಫರೆನ್ಸ್ ಸಭೆಯ ಉದ್ದೇಶಿಸಿ ಸಿ.ಎಂ. ಜೊತೆ ಸಂವಾದ ನಡೆಸಿದರು.ಜಿಲ್ಲೆಯ ಪ್ರವಾಹ ಪರಿಸ್ಥಿತಿ, ಹಾನಿಗೊಳಗಾದ ಗ್ರಾಮಗಳು, ಮೂಲಸೌಕರ್ಯ , ಬೆಳೆ, ಮನೆ ಮತ್ತು ಇತರ ಹಾನಿ ಹಾಗೂ ಜನರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮುಖ್ಯಮಂತ್ರಿಗೆ ವಿವರಿಸಿದರು.ತುರ್ತು ಪರಿಹಾರ ಕಾರ್ಯಗಳಿಗೆ ಹೆಚ್ಚಿನ ನೆರವು ಒದಗಿಸಲು ಹಾಗೂ ಹಾನಿಗೊಳಗಾದ ಕುಟುಂಬಗಳ ಪುನರ್ವಸತಿ ಕಾರ್ಯಗಳನ್ನು ತ್ವರಿತಗೊಳಿಸಲು ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಚಿವರು ಮನವಿ ಮಾಡಿದರು.ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಗಿರೀಶ್ ಬದೋಲೆ, ಬೀದರ ಸಹಾಯಕ ಆಯುಕ್ತ ಮೊಹಮದ್ ಶಕೀಲ್, ಬಸವಕಲ್ಯಾಣ ಸಹಾಯಕ ಆಯುಕ್ತ ಮುಕುಲ್ ಜೈನ್, ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಉಪರಾಷ್ಟ್ರಪತಿ ಚುನಾವಣೆ ಎನ್‌ಡಿಎ ಅಭ್ಯರ್ಥಿ ಗೆಲುವು ಬಹುತೇಕ ನಿಶ್ಚಿತ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ,ಸೆ.8;–ಉಪರಾಷ್ಟ್ರಪತಿ ಸ್ಥಾನಕ್ಕಾಗಿ ನಾಳೆ ಚುನಾವಣೆ ನಡೆಯಲಿದ್ದು ಎನ್‌ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಮತ್ತು ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ಬಿ, ಸುದರ್ಶನ್ ರೆಡ್ಡಿ ನಡುವೆ ಪೈಪೋಟಿ ನಡೆದಿದ್ದು ಸಂಖ್ಯಾಬಲದ ಆಧಾರದ ಮೇಲೆ ಎನ್‌ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರ ಗೆಲುವು ಸಾಧಿಸುವುದು ಬಹುತೇಕ ಖಚಿತವಾಗಿದೆ ರಾಜ್ಯಸಭೆ ಮತ್ತು ಲೋಕಸಭೆಯ ಸದಸ್ಯರು ಮತದಾನದ ಹಕ್ಕು ಹೊಂದಿದ್ದು ನಾಳೆ ಬೆಳಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆ–ಯ ತನಕ ಚುನಾವಣೆ ನಡೆಯಲಿದ್ದು ಸಂಜೆಯೇ ಫಲಿತಾಂಶ ಪ್ರಕಟವಾಗಲಿದೆ.

## ಆಧಾರ ಅನ್ನು 12ನೇ ದಾಖಲೆಯಾಗಿ ಪರಿಗಣಿಸಿ ಆಯೋಗಕ್ಕೆ ಸುಪ್ರೀಂ ಕೋರ್ಟ್ ಸೂಚನೆ

ನವದೆಹಲಿ: ಸೆ.8:ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಪರಿಷ್ಕರಣಾ ಪಟ್ಟಿಯಲ್ಲಿ ಮತದಾರರ ಗುರುತನ್ನು ಸ್ಥಾಪಿಸಲು ಆಧಾರ್ ಅನ್ನು 12 ನೇ ನಿಗದಿತ ದಾಖಲೆಯಾಗಿ ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ಸೋಮವಾರಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಿದೆ.ಇದರರ್ಥ ಮತದಾರರು ತಮ್ಮ ಎಣಿಕೆ ನಮೂನೆಗಳೊಂದಿಗೆ ಸಲ್ಲಿಸಬೇಕಾದಇತರ 11 ನಿಗದಿತ ದಾಖಲೆಗಳಂತೆ ಆಧಾರ್ ಅನ್ನು ಸ್ವತಂತ್ರ ದಾಖಲೆಯಾಗಿ ಸಲ್ಲಿಸಬಹುದಾಗಿದ '.ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಮತ್ತು ಜೋಯ್ಮಲ್ಯ ಬಾಗ್ಚಿ ಅವರ ಪೀಠವು, 'ಆಧಾರ್ ಪೌರತ್ವದ ಪುರಾವೆಯಾಗಿರುವುದಿಲ್ಲ ಮತ್ತು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಮತದಾರರು ಸಲ್ಲಿಸಿದ ಆಧಾರ್ ಕಾರ್ಡ್ ಸಂಖ್ಯೆಯ ನೈಜತೆಯನ್ನುಆಯೋಗವು ಖಚಿತಪಡಿಸಿಕೊಳ್ಳಬಹುದು ಎಂದು ಸ್ಪಷ್ಟಪಡಿಸಿದೆ.ಚುನಾವಣಾ ಆಯೋಗವು ಅಕ್ರಮವಲಸಿಗರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಬೇಕೆಂದು ಯಾರೂ ಬಯಸುವುದಿಲ್ಲ ಎಂದುಹೇಳಿದ ಪೀಠ,



'ನಿಜವಾದ ನಾಗರಿಕರಿಗೆ ಮಾತ್ರ ಮತ ಚಲಾಯಿಸಲು ಅವಕಾಶನೀಡಲಾಗುವುದು ಮತ್ತುನಕಲಿ ದಾಖಲೆಗಳ ಆಧಾರದಮೇಲೆ ನಿಜವಾದವರುಎಂದುಹೇಳಿಕೊಳ್ಳುವವರನ್ನು ಮತದಾರರಪಟ್ಟಿಯಿಂದಹೊರಗಿಡಲಾಗುತ್ತದೆ ಎಂಬುದು ಸ್ಪಷ್ಟವಾಗಿರಬೇಕು' ಎಂದು ಹೇಳಿದೆ.

## ಮಟ್ಟಣ್ಣನವರ್, ಜಯಂತ್‌ಗೆ ಎಸ್ ಐಟಿ ಗ್ರಿಲ್



ಮಲ್ಲಮ್ಮ ನುಡಿ ವಾರ್ತೆ ಮಂಗಳೂರು,ಸೆ.8–ಧರ್ಮಸ್ಥಳ ಪ್ರಕರಣದ ವಿರುದ್ಧ ತನಿಖೆಯನ್ನು ತೀವ್ರಗೊಳಿಸಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ) ಅಧಿಕಾರಿಗಳು ಗಿರೀಶ್ ಮಟ್ಟಣ್ಣನವರ್, ಜಯಂತ್ ಟಿ ವಿಚಾರಣೆಯನ್ನು ಮುಂದುವರೆಸಿದ್ದಾರೆ.ಯೂಟ್ಯೂಬ್ ನಲ್ಲಿ ವಿಡಿಯೋ ಪ್ರಕಟಿಸಿದ್ದ ಅಭಿಷೇಕ್‌ನನ್ನು ಸುದೀರ್ಘ ವಿಚಾರಣೆಯನ್ನು ಮಾಡಲಾಗುತ್ತಿದ್ದು, ಜಯಂತ್ ಟಿ ಕೆಲಸದವನ ರೀತಿಯಲ್ಲಿ ಅವರು ಹೇಳಿದ್ದನ್ನೆಲ್ಲ ಮಾಡಿದ್ದೇನೆ ಎಂದು ಹೇಳುತ್ತಾ ಬಂದಿದ್ದರೂ ವಿವಿಧ ಆಯಾಮದಲ್ಲಿ ವಿಚಾರಣೆ ನಡೆಸಲಾಗುತ್ತಿದೆ.ಕಾಲ್ ಡಿಟೇಲ್ ರೆಕಾರ್ಡ್ ಕೂಡಾ ಪಡೆದು ವಿಚಾರಣೆ ಮಾಡಲಾಗುತ್ತಿದೆ, ಚಿನ್ನಯ್ಯ ತಂದುಕೊಟ್ಟಿದ್ದ ಬುರುಡೆಯ ವಿಡಿಯೋ ಪ್ರಸಾರ ಮಾಡಿದ್ದ ಮನಾಫ್ ನನ್ನು ಕೂಡಾ ಇಂದು ವಿಚಾರಣೆಗೆ ತಾಂತ್ರಿಕ ದಾಖಲೆಗಳ ಜೊತೆ ಹಾಜರಾಗುವಂತೆ ಸೂಚಿಸಲಾಗಿದೆ.ಕೇರಳದ ಕೋಝಿಕ್ಕೋಡ್ ನಿವಾಸಿಯಾಗಿರುವ ಮನಾಫ್, ಕಾಡಿನಿಂದ ತರುವ ಬುರುಡೆಯ ವಿಡಿಯೋವನ್ನು ಯೂಟ್ಯೂಬ್ ನಲ್ಲಿ ಪ್ರಸಾರ ಮಾಡಿದ್ದ. ವಿಠಲಗೌಡ ವಿಚಾರಣೆಯು ಎರಡು ದಿನಗಳಿಂದ ನಡೆಯುತ್ತಿದೆ. ಇಂದೂ ಕೂಡಾ ವಿಚಾರಣೆಗೆ ಕರೆಯಲಾಗಿದೆ.ಬಂಗ್ಲೆಗುಡ್ಡೆಯಲ್ಲಿ ಎರಡು ದಿನಗಳ ಹಿಂದೆ ಸ್ಥಳ ಮಹಜರು ನಡೆಸಿ, ವಿಠಲಗೌಡರನ್ನು ಕಳಿಸಲಾಗಿತ್ತು.

ಯೂಟ್ಯೂಬ್ ವಿಡಿಯೊ ಮಾಡುತ್ತಿದ್ದ ಅಭಿಷೇಕ್ ಮೆಕ್ಯಾನಿಕಲ್ ಎಂಜಿನಿಯರಿಂಗ್ ಪದವೀಧರರಾಗಿದ್ದು, ಚಂದನ್‌ಗೌಡ ಜತೆ ಚುನಾವಣೆ ವೇಳೆ ವಿಡಿಯೋ ಎಡಿಟಿಂಗ್ ಮಾಡಿಕೊಂಡಿದ್ದು,ಬಳಿಕ ಯೂಟ್ಯೂಬರ್ ಆದರು.

ಮಂಡ್ಯದ ಚಂದನ್‌ಗೌಡ ಮತ್ತು ಸುಮಂತ್ ನಡುವಿನ ಮಾತುಕತೆಯಲ್ಲಿ ಇವರ ಹೆಸರು ತಳುಕು ಹಾಕಿಕೊಂಡಿದೆ,ಧರ್ಮಸ್ಥಳ ವಿರುದ್ಧ ಷಡ್ಯಂತ್ರ ರೂಪಿಸಿದ ತಂಡದಲ್ಲಿ ಕೇಳಿ ಬಂದಿದೆ.

• ಕಾರ್ಲೋಸ್ ಅಲ್ಕರಾಜ್‌ಗೆ 2ನೇ ಯುಎಸ್ ಕಿರೀಟ ಫೈನಲ್ ನಲ್ಲಿ ಜನ್ನಿಕ್ ಸಿನ್ನರ್ ವಿರುದ್ಧ ಗೆದ್ದ ಸ್ಪೇನ್ ದಿಗ್ಗಜ

# ಅತೀ ವೃಷ್ಟಿಯಿಂದಾದ ಬೆಳೆ ಹಾನಿ ಕುರಿತು ಜಂಟಿ ಸಮೀಕ್ಷೆ ಶೀಘ್ರ ಪೂರ್ಣಗೊಳಿಸಿ, ವರದಿ ಸಲ್ಲಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ:ಸೆ:8: ರಾಜ್ಯಾದ್ಯಂತ ಅತಿವೃಷ್ಟಿಯಿಂದಾದ ಹಾನಿ ಹಾಗೂ ತೆಗೆದುಕೊಂಡ ಕ್ರಮಗಳ ಕುರಿತು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾಹಿತಿ ಪಡೆದರು.

ಸಭೆಯಲ್ಲಿ ಪೂರ್ವ ಮುಂಗಾರು (1–4–25 ರಿಂದ 31–5–25 ) ಮಳೆಯಿಂದಾದ ಕೃಷಿ, ತೆ–ೂೀಟಗಾರಿಕೆ ಬೆಳೆ ಹಾನಿ, ಮನೆ ಹಾನಿ, ಪ್ರವಾಹ,ಸಿಡಿಲಿನಿಂದಾದ ಜೀವಹಾನಿ, ಜಾನುವಾರು ಪ್ರಾಣ ಹಾನಿ, ಪರಿಹಾರ ವಿತರಣೆ, ವಿವಿಧ ಜಲಾಶಯಗಳ ದುರಸ್ತಿ ಇರುವ ಕ್ರಸ್ಟ್ ಗೇಟ್ ಗಳ ಮಾಹಿತಿ , ರೈತರಿಗೆ ಅವಶ್ಯಕ ಬೀಜ, ರಸಗೊಬ್ಬರ, ಕೀಟನಾಶಕಗಳ ಬೇಡಿಕೆ, ರಸ್ತೆ ಹಾಗೂ ಮೂಲಸೌಕರ್ಯಗಳ ಹಾನಿ ಕುರಿತು ಮಾಹಿತಿ ಪಡೆದರು.

ಇದೇ ಸಂದರ್ಭದಲ್ಲಿ ಬೆಳೆ ಹಾನಿ ಗೆ ಸಂಬಂಧಿಸಿದಂತೆ ಜಂಟಿ ಸಮೀಕ್ಷೆ ಬಗ್ಗೆ ದೃಢೀಕರಿಸಿ,10 ದಿನಗಳರೊಳಗೆ ಸಮೀಕ್ಷೆ ವರದಿ ಸಲ್ಲಿಸಬೇಕು.ಮನೆಹಾನಿ,ಪ್ರಾಣ ಹಾನಿ, ಜಾನುವಾರು ಹಾನಿ ಪ್ರಕರಣಗಳಲ್ಲಿ ತಕ್ಷಣ ಪರಿಹಾರ ಕಲ್ಪಿಸಲು ಸೂಚಿಸಿ, ರೈತರಿಗೆ ಬೀಜ, ರಸಗೊಬ್ಬರ,



ಕೀಟನಾಶಕಗಳ ಪೂರೈಕೆ ಬಗ್ಗೆಯೂ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಹಿಂಗಾರಿಗೂ ಸಿದ್ಧತೆ ಮಾಡಿಕೊಳ್ಳಬೇಕು. ಅವಶ್ಯಕತೆ ಇರುವಕಡೆ ನಂದಿನಿ ಪಾರ್ಲರ್ ಗಳಿಗೆ ಹೆಚ್ಚು ಜನಸಂದಣಿ,ವ್ಯಾಪಾರ ವಹಿವಾಟು ಇರುವಕಡೆ ಸ್ಥಳವನ್ನು ಗುರುತಿಸಿ ನೀಡಬೇಕು ಎಂದು ಸೂಚಿಸಿದರು

ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಆದ ಹಾನಿ ಕುರಿತು ಮಾಹಿತಿ ನೀಡಿ,ಬೆಳೆ ಹಾನಿಗೆ ಸಂಬಂಧಿಸಿದಂತೆ ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿ ನಡೆಯುತ್ತಿದೆ. ಗ್ರಾಮೀಣ ಭಾಗದಲ್ಲಿ ರಸ್ತೆಗಳು ಹೆಚ್ಚಿನ ರೀತಿಯಲ್ಲಿ ಹಾನಿಯಾಗಿದ್ದು,ಇರುವ ಅನುದಾನ ಬಳಸಲಾಗುತ್ತಿದೆ.ಇನ್ನೂ ಹೆಚ್ಚಿನ ಅನುದಾನದ ಅವಶ್ಯಕತೆ ಬೀಳಬಹುದು ಎಂದು ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್,ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಈದ್ ಮಿಲಾದ್: ಉಚಿತ ಔಷಧ ವಿತರಣೆ




ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಸೆ.8: ಇಸ್ಲಾಂ ಧರ್ಮದ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ಆಚರಿಸಲಾಗುವ ಜಶ್–ಇ–ಮಿಲಾದ್ ಉನ್–ನಬಿ ಸಂದರ್ಭದಲ್ಲಿ, ಕೆಮಿಸ್ಟ್–99 (ಸಿ–99) ಎಜುಕೇಶನ್ ವೆಲ್ಫೇರ್ ಮತ್ತು ಚಾರಿಟೇಬಲ್ ಟ್ರಸ್ಟ್ (ರಿ) ವತಿಯಿಂದ ಮೆಡಿಕಲ್ ಬೆಡ್ಡೆಡ್, ಮುಸ್ಲಿಂ ಚೌಕ್ನಲ್ಲಿ ಉಚಿತ ಔಷಧ ವಿತರಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಈ ಶಿಬಿರದಲ್ಲಿ ಸಾವಿರಾರು ಅಗತ್ಯವಿರುವ ಜನರಿಗೆ ಔಷಧಗಳು, ಓಆರ್‌ಎಸ್ ದ್ರವ ಮತ್ತು ನೀರಿನ ಬಾಟಲಿಗಳನ್ನು ವಿತರಿಸಲಾಯಿತು. ಈ ಶಿಬಿರವು ಟ್ರಸ್ಟ 'ಶಿಕ್ಷಣ ಮತ್ತು ಕಲ್ಯಾಣದ ಮೂಲಕ ಮಾನವೀಯ ಸೇವೆ ಎಂಬ ಧ್ಯೆಯವನ್ನು ಎತ್ತಿಹಿಡಿದಿದೆ.ನಬಿಯವರ ಉಪದೇಶವಾದ ಅಲ್ಲಾಹ್ಯ ಅತ್ಯಂತ ಪ್ರಿಯರಾಗಿರುವವರು ಇತರರಿಗೆ ಹೆಚ್ಚು ಉಪಕಾರ ಮಾಡುವವರು ಎಂಬ ತತ್ವವನ್ನು ಈ ಕಾರ್ಯದ ಮೂಲಕ ಸಾಕಾರಗೊಳಿಸಲಾಯಿತು. ಶಿಬಿರವನ್ನು ಯಶಸ್ವಿಗೊಳಿಸಲು ಟ್ರಸ್ಟ ಎಲ್ಲಾ ಪದಾಧಿಕಾರಿಗಳು ಮತ್ತು ಸದಸ್ಯರು ಮಹತ್ವದ ಪಾತ್ರ ವಹಿಸಿದ್ದರು.

ಈ ಸಂದರ್ಭದಲ್ಲಿ ಟ್ರಸ್ಟ ಅಧ್ಯಕ್ಷರಾದ ಸಯದ್ ನಿಯಾಜುದ್ದೀನ್ ಚಿಸ್ತಿ, ಮಾಜಿ ಅಧ್ಯಕ್ಷ ಮತ್ತು ಉಪಸಮಿತಿ ಅಧ್ಯಕ್ಷ ಸಯದ್

ಮೂಜಂ ಅಲಿ, ಉಪಾಧ್ಯಕ್ಷರಾದ ಅಬ್ದುಲ್ ರಶೀದ್ ಡಂಡೋತಿ ಮತ್ತು ಶೇಖ್ ಎಂ. ನವಾಜುದ್ದೀನ್, ಜನರಲ್ ಸೆಕ್ರೆಟರಿ ಡಾ. ಇಮರಾನ್ ಅಹಮದ್, ಸಹ ಕಾರ್ಯದರ್ಶಿ ಮಂಜೂರ್ ಅಹಮದ್, ಖಜಾಂಚಿ ಅಲಾವುದ್ದಿನ ಪಟೇಲ್, ಹಾಗೂ ಉಪಸಮಿತಿ ಅಧ್ಯಕ್ಷರಾದ ಮೊಹಮ್ಮದ್ ಅಜಮ್, ಮೊಹಮ್ಮದ್ ಮೆರಾಜ್ ಖಾನ್,ಮೊಹಮ್ಮದ್ ಮಿನ್ಹಾಜುದ್ದೀನ್ ಮತ್ತು ಮೊಹಮ್ಮದ್ ಅಜೀಮುದ್ದೀನ್ ಖರಾಡಿ ಅವರು ಸಕ್ರಿಯವಾಗಿ ಭಾಗವಹಿಸಿದ್ದರು.

# ಕಮಲನಗರ ತಾ.ಪಂ. ಪ್ರಗತಿ ಪರಿಶೀಲನೆ ಸಭೆ



ಮಲ್ಲಮ್ಮ ನುಡಿ ವಾರ್ತೆ
ಕಮಲನಗರ:ಸೆ.8: ತಾಲೂಕು ಪಂಚಾಯತ ಸಭಾಂಗಣದಲ್ಲಿ ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ, ಡಿಇಓ ಹಾಗೂ ನರೇಗಾ ಸಿಬ್ಬಂದಿಗಳಿಗೆ ವಿವಿಧ ಯೋಜನೆಗಳ ಕುರಿತು ಜಿಲ್ಲಾ ಪಂಚಾಯತನ ಯೋಜನಾ ನಿರ್ದೇಶಕರಾದ ಸೂರ್ಯಕಾಂತ ಬಿರಾದಾರ ಅವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನೆ ಸಭೆ ನಡೆಯಿತು.

ತುರ್ತಾಗಿ ಅನುಮೋದನೆಗೆ ಬಾಕಿ ಇರುವ ಅರ್ಹ ವಸತಿ ರಹಿತರಿಗೆ ಕಡ್ಡಾಯವಾಗಿ ವಸತಿ ಸೌಕರ್ಯ ಕಲ್ಪಿಸುವ ಮೂಲಕ ಪ್ರಗತಿ ಸಾಧಿಸುವುದು ಹಾಗೂ ಅನರ್ಹ ವಸತಿರಹಿತರನ್ನು ರದ್ದುಪಡಿಸಲು ಸೂಚಿಸಿದರು. ಅದೇ ರೀತಿಯಾಗಿ ಗ್ರಾಮಿಣ ಆಶ್ರಯ ನಿವೇಶನ ಯೋಜನೆಯ ಪ್ರಗತಿ, ವಿವಿಧ ವಸತಿ ಯೋಜನೆಯಡಿ ಚಾಲ್ತಿ ಇಲ್ಲದೇ ಇರುವ ಫಲಸನುಭವಿಗಳಿಗೆ ನೋಟಿಸ ಜಾರಿ ಮಾಡಿ ಮನೆ ನಿರ್ಮಾಣ ಮಾಡಲು ಮನವರಿಕೆ ಮಾಡುವುದು ಹಾಗೂ ರೂಫ್ ಲೆವೆಲ್ ಹೌಸ್ಸ್ ಫಲಾನುಭವಿಗಳ ಮನೆಗಳ ನಿಯಮಾನುಸಾರ ಕಡ್ಡಾಯವಾಗಿ ಜಿಪಿಎಸ್ ಗೆ ಅಳವಡಿಸಲು ಸೂರ್ಯಕಾಂತ ಬಿರಾದಾರ ಸೂಚಿಸಿದರು.

ಕರ ವಸೂಲಾತಿ ಕಡಿಮೆ ಇರುವ ಗ್ರಾಮ ಪಂಚಾಯತಗಳು ಹೆಚ್ಚಿನ ಪ್ರಗತಿ ಸಾಧಿಸಬೇಕು ಇದರ ಬಗ್ಗೆ ನಿಷ್ಕಾಳಜಿ ತೋರಿಸದೇ ಹೆಚ್ಚಿಗೆ ತೆರಿಗೆ ವಸೂಲಾತಿ ಮಾಡಬೇಕೆಂದು ಕಾರ್ಯನಿರ್ವಾಹಕ ಅಧಿಕಾರಿಗಳಾದ ಹಣಮಂತರಾಯ ಕೌಟಗೆ ತಿಳಿಸಿದರು. ವಸತಿ ಯೋಜನೆಗೆ ಸಂಬಂಧಿಸಿದಂತೆ ಇರುವ ಸಮಸ್ಯೆಗಳ ಬಗ್ಗೆ ಚರ್ಚಿಸಿ, ಪರಿಹಾರ ತಿಳಿಸಿದರು. ಹಾಗೂ ಎಸ್.ಬಿ.ಎಂ ಗುರಿಗಳಲ್ಲಿನ ವ್ಯತ್ಯಾಸದ ಸಮೀಕ್ಷೆಯ ಬಗ್ಗೆ ಕುರಿತು ಚರ್ಚಿಸಿದರು. ನರೇಗಾ, ಗ್ರಂಥಾಲಯ, ಸ್ವಚ್ಛ ಭಾರತ ಮಿಷನ್, ಕುಡಿಯುವ ನೀರು ಮತ್ತು ನೈರ್ಮಲ್ಯ ಸೇರಿದಂತೆ ಇತರೆ ವಿಷಯಗಳ, ಬೂದು ನೀರು ನಿರ್ವಹಣೆ ಸೇರಿದಂತೆ ಅಡಹಾಕ್ ಸಮಿತಿಯ ಬಗ್ಗೆ ಸಭೆಯಲ್ಲಿ ಚರ್ಚಿಸಿದರು.

ಈ ಸಂದರ್ಭದಲ್ಲಿ ತಾಲೂಕಾ ನೋಡಲ್ ಆಫೀಸರ್ ಶ್ರೀನಿವಾಸ, ಹಿರಿಯ ಉಪನಿರ್ದೇಶಕರು/ಸ್ಥಳೀಯ ಲೆಕ್ಕ ಪರಿಶೋಧನಾ ವರ್ತುಲ ಬೀದರ ಶ್ರೀ ಪ್ರಕಾಶ ಶರ್ಮಾ, ಎಲ್ಲಾ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ದತ್ತಾತ್ರಿ, ಪ್ರಶಾಂತ, ಮಲ್ಲೇಶ, ಮನೋಹರ, ವೆಂಕಟೇಶ, ಪ್ರಭುದಾಸ, ರಾಮದಾಸ, ನಿರ್ಮಲಾ, ಶೇಷಪ್ಪ, ಡಿಇಓ ವಿಠಲ, ಸದಾಶಿವ, ಬಸವರಾಜ, ಸಾಗರ, ಸಂಜು, ಅನಿಲ, ತಾ.ಪಂ. ಸಿಬ್ಬಂದಿಗಳಾದ ಗ್ರೇಡ್–2 ಕಾರ್ಯದರ್ಶಿ ನೈಯೀಮ್, ಪ್ರಥಮ ದರ್ಜೆ ಸಹಾಯಕ ವಿದ್ಯಾಸಾಗರ, ದ್ವಿತಿಯ ದರ್ಜೆ ಲೆಕ್ಕ ಸಹಾಯಕರಾದ ಪೀಟರ, ಆದಿತ್ಯ, ಟಿಎಂಐಎಸ್ ಶಾಜೀಬ್ ತಲಹಾ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಟಿಸಿ ಅಮರ, ಆಡಳಿತ ಸಹಾಯಕರಾದ ಸಪ್ನಾ, ಟಿಎ ವಿನೋದ, ಶೇಖರ, ರಾಘವೇಂದ್ರ, ಅರ್ಜುನ, ಹಾಜರಿದ್ದರು.

## ಕೋಲಿ ಸಮಾಜಕ್ಕೆ ಡಾ. ಇಂದಿರಾ ಶಕ್ತಿ ಉಪಾಧ್ಯಕ್ಷೆ

ಕಲಬುರಗಿ:ಸೆ.8: ಅಖಿಲ ಭಾರತೀಯ ಕೋಲಿ ಸಮಾಜದ ಕರ್ನಾಟಕ ರಾಜ್ಯದ ಉಪಾಧ್ಯಕ್ಷರನ್ನಾಗಿ ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸದಸ್ಯೆ, ಸಮಾಜ ಸೇವಕಿ, ಸ್ತ್ರೀರೋಗ ಮತ್ತು ಪ್ರಸೂತಿ ತಜ್ಞೆರಾದ ಡಾ. ಇಂದಿರಾ ಶಕ್ತಿ ಅವರನ್ನು ನೇಮಕ ಮಾಡಲಾಗಿದೆ.

2025–27ನೇ ಸಾಲಿನ ಎರಡು ವರ್ಷದ ಅವಧಿಗಾಗಿ ರಾಜ್ಯ ಉಪಾಧ್ಯಕ್ಷರ ಜವಾಬ್ದಾರಿ ನೀಡಲಾಗಿದ್ದು, ಹಿಂದುಳಿದ



ಕೋಲಿ ಸಮಾಜವನ್ನು ಶೈಕ್ಷಣಿಕ, ಸಾಮಾಜಿಕ, ಸಾಂಸ್ಕೃತಿಕ, ಆರ್ಥಿಕ ಮತ್ತು ರಾಜಕೀಯವಾಗಿ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ . ಸಂಘಟನೆಯ ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಗುರುತರ ಜವಾಬ್ದಾರಿ ವಹಿಸಿಕೊಂಡು ಕಾರ್ಯಪ್ರವೃತ್ತರಾಗಬೇಕು ಎಂದು ರಾಜ್ಯಾಧ್ಯಕ್ಷ ದತ್ತಾತ್ರೇಯ ರಡ್ಡಿ ಮುದಿರಾಜ ಆದೇಶಿಸಿದ್ದಾರೆ.

# ಖಾಲಿ ಹುದ್ದೆ ಭರ್ತಿ ಷರತ್ತು ಕಡಿತಗೊಳಿಸಲು ಒತ್ತಾಯ

ಕಲಬುರಗಿ:ಸೆ.8: ಸರಕಾರ ಒಳಮೀಸಲಾತಿ ಬಗ್ಗೆ ಅಂತಿಮ ಆದೇಶಹೊರಡಿಸಿದ್ದು ಇದ–ರಿಂದ ಖಾಲಿ ಹುದ್ದೆ ಭರ್ತಿಗೆ ವಿಳಂಬವಾಗಿತ್ತು. ಈಗ ಸರಕಾರ ವಿಶೇಷವಾಗಿ ಅನುದಾನಿತ ಶಾಲಾ ಕಾಲೇಜುಗಳ ಹುದ್ದೆ ಭರ್ತಿಗೆ ಕೆಲ ಷರತ್ತುಗಳನ್ನು ವಿಧಿಸಿರುವುದು ಸಮಸ್ಯೆಯಾಗಿರುತ್ತದೆ. ಎಂದು ಕರ್ನಾಟಕ ಅನುದಾನಿತ ಶಾಲಾ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಂಘಟನೆಗಳ ಒಕ್ಕೂಟದ ರಾಜ್ಯ ಕಾರ್ಯಾಧ್ಯಕ್ಷರಾದ ಬಿ.ಎಸ್. ಮಾಲಿಪಾಟೀಲ ಅವರು ಹೇಳಿದರು. ಈ ಹಿಂದೆ 31.12.2015ರವರೆಗೆ ಖಾಲಿ ಇರುವ ಭೋದಕ ಹುದ್ದೆಗಳ ಭರ್ತಿಗೆ ಅನುಮತಿ ನೀಡಿದ್ದು ಪ್ರಕ್ರಿಯೆ ಇನ್ನೂ ಮುಕ್ತಾಯವಾಗಿರುವುದಿಲ್ಲ. ನಂತರ ಸರಕಾರದವರು 31.12.2020ರ ವರೆಗೆ ಹುದ್ದೆಗಳ ಭರ್ತಿ ನೀಡಿ ಒಳ ಮೀಸಲಾತಿ ಸಮಸ್ಯೆ ಬಂದಿದ್ದರಿಂದ ತಡೆಹಿಡಿಯಲಾಗಿತ್ತು. ಈಗ ಒಳ



ಮೀಸಲಾತಿ ಬಗ್ಗೆ ಸರಕಾರ ಕ್ರಮ ಕೈಗೊಂಡಿದ್ದು ಈ ಆದೇಶವನ್ನು ಆದೇಶ ಹೊರಡಿಸಿದ ದಿನಾಂಕದಿಂದ ಅನ್ವಯಿಸುವುದು ಸೂಕ್ತವಾಗಿರುತ್ತದೆ. ಏಕೆಂದರೆ, ಈಗಾಗಲೇ ಸರಕಾರ ಅಧಿಸೂಚನೆ ಹೊರಡಿಸಿರುವ ಹಾಗೂ ಅನುದಾನಿತ ಶಾಲಾ–ಕಾಲೇಜುಗಳಲ್ಲಿ ನೇಮಕ ಮಾಡಿಕೊಂಡು ಅನುಮೋದನೆಗೆ ಕ್ರಮ ಕೈಗೊಳ್ಳುತ್ತಿರುವುದರಿಂದ ಹಿಂದಿನವರಿಗೆ ತೊಂದರೆಯಾಗುತ್ತದೆ. ಅಲ್ಲದೇ ಯಾವುದೇ ಸರಕಾರಿ ಆದೇಶ ಹಿಂದಿನವರಿಗೆ ಅನ್ವಯಿಸದೇ ನಂತರದವರಿಗೆ ಅನ್ವಯಿಸುವುದು.

ಅನುದಾನಿತ ಶಾಲಾ–ಕಾಲೇಜುಗಳಲ್ಲಿ ಸಿಬ್ಬಂದಿ ಕೊರತೆಯಿಂದ ಶಾಲಾ ಶೈಕ್ಷಣಿಕ ಗುಣಮಟ್ಟ ಹಾಗೂ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದ್ದು ಅನುದಾನಿತ ಶಾಲಾ–ಕಾಲೇಜುಗಳ ಅಸ್ತಿತ್ವದ ಮೇಲೆ ಪರಿಣಾಮ ಬೀರುತ್ತದೆ. ಈ ಹಿಂದೆ ನೇಮಕಾತಿಗೊಂಡ ನಂತರ ಷರತ್ತು ಪೂರೈಸಲು ಕ್ರಮ ಕೈಗೊಳ್ಳಲಾಗುತ್ತಿತ್ತು. ಈಗ ಅನುದಾನಿತ ಶಾಲಾ–ಕಾಲೇಜುಗಳ ಹುದ್ದೆ ಭರ್ತಿಗೆ ವಿಧಿಸಿರುವ ವಿದ್ಯಾರ್ಥಿಗಳ ಸಂ–ಖ್ಯೆ ಕಾರ್ಯಭಾರದ ಬಗ್ಗೆ ಷರತ್ತು ವಿಧಿಸಿ ನೇಮಕಾತಿ ಪ್ರಕ್ರಿಯೆ ಮುಂದುವರೆಸುವಂತೆ ಸರಕಾರಕ್ಕೆ ಪ್ರಕಟಣೆಯ ಮೂಲಕ ಒತ್ತಾಯಿಸಿದಾರೆ. ಈ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ಎಂ.ಪಿ.ಕರಬಸಪ್ಪ ಕೋಶಾಧ್ಯಕ್ಷ ಬಿ.ಸಿ.ರೇವಣ್ಣ, ಕಾರ್ಯಾಧ್ಯಕ್ಷ ಶ್ರೀಕಂಠಯ್ಯ ಇದ್ದರು.

## ಲಂಡನ್‌ನಲ್ಲಿ ಬಸವಣ್ಣ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್



ರಾಯಚೂರು ಸೆ.8: ಯುನೈಟೆಡ್ ಕಿಂಗ್‌ಡಮ್‌ನ ಲಂಡನ್ ನಗರದ ಥೇಮ್ಸ್‌ನದಿಯ ದಂಡೆಯ ಮೇಲೆ ಸ್ಥಾಪಿಸಲಾಗಿರುವ ಸಾಮಾಜಿಕ ಕ್ರಾಂತಿಯ ಹರಿಕಾರ ಬಸವೇಶ್ವರರ ಪುತ್ಥಳಿಗೆ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ ಪ್ರಕಾಶ್ ಆರ್. ಪಾಟೀಲ್ ಅವರು ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಬಸವ ತತ್ವದ ಮೇಲೆ ಅಪಾರ ನಂಬಿಕೆ ಇಟ್ಟಿರುವ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಿಗೂ ಆಹ್ವಾನ ನೀಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಕ್ರಾಂತಿ ಮಾಡಿರುವ ನಮ್ಮ ಬಸವಣ್ಣನವರ ಪ್ರತಿಮೆ ಅನಾವರಣದ ದಶಮಾನೋತ್ಸವ ಸಮಾರಂಭದಲ್ಲಿ ಭಾಗಿಯಾಗಲು ಮಾಡಿರುವ ಮನವಿ ನೀಡುತ್ತೇನೆ ಎಂದು ತಿಳಿಸಿದರು.ಬಸವೇಶ್ವರರ ವಚನಗಳು ಇಂದಿನ ಕಾಲಘಟ್ಟದಲ್ಲಿಯೂ ಅತಿ ಪ್ರಸ್ತುತವಾಗಿದ್ದು, ನ್ಯಾಯಸಮ್ಮತ ಮತ್ತು ಸಮಾನತೆಯನ್ನು ಒಳಗೊಂಡ ಸಮಾಜವನ್ನು ನಿರ್ಮಿಸಲು ಮಾರ್ಗದರ್ಶಕವಾಗಿವೆ ಎಂದು ಸಚಿವರು ಹೇಳಿದರು.

ಈ ಬಸವೇಶ್ವರರ ಪ್ರತಿಮೆಯನ್ನು 2015ರ ನವೆಂಬರ್ 14ರಂದು ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಅನಾವರಣಗೊಳಿಸಿದ್ದರು.

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ. ಸಿ. ಸುಧಾಕರ್, ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ್ ಭಂಡಾರಿ ಹಾಗೂ ಸ್ಥಳೀಯ ಕನ್ನಡಿಗರು ಹಾಜರಿದ್ದರು.

# ಕಮಲನಗರ : 4.50 ಕೋಟಿಯ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ
ಕಮಲನಗರ: ಸೆ.8:ತಾಲೂಕಿಗೆ 4.50 ಕೋಟಿಯ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಪ್ರಭು ಚವ್ಹಾಣ ಭೂಮಿ ಸೋಮವಾರ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಿದರು.

ಕಮಲನಗರದಲ್ಲಿ 2 ಕೋಟಿ ವೆಚ್ಚದ ಅಗ್ನಿಶಾಮಕ ಕಛೇರಿ, ಮದನೂರ ಹಾಗೂ ಚಾಂದೋರಿಯಲ್ಲಿ 50 ಲಕ್ಷ ವೆಚ್ಚದ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸೋರಳ್ಳಿ ತಾಂಡಾದಲ್ಲಿ 55 ಲಕ್ಷ, ಶಂಕರ ತಾಂಡಾದಲ್ಲಿ 55.60 ಲಕ್ಷ, ಜೀರ್ಗಾ(ಕೆ)ನಲ್ಲಿ 13.90 ಲಕ್ಷ ಮೊತ್ತದ ಹೆಚ್ಚುವರಿ ತರಗತಿ ಕೋಣೆಗಳ ನಿರ್ಮಾಣ, ಮಹಾದೇವ ಪಾಟಿ ತಾಂಡಾದಲ್ಲಿ 6.50 ಲಕ್ಷ, ರಾಜೇಂದ್ರ ನಾಯಕ್ ತಾಂಡಾದಲ್ಲಿ 6 ಲಕ್ಷ ಮೊತ್ತದ ಸಿಸಿ ರಸ್ತೆಗಳು, ಸಂಗಮ್ ನಲ್ಲಿ 14.50 ಲಕ್ಷ ವೆಚ್ಚದ ಶಾಲಾ ದುರಸ್ತಿ ಕಾಮಗಾರಿ ಹಾಗೂ ಮುರ್ಕಿ ವಾಡಿಯಲ್ಲಿ 5.90 ಲಕ್ಷದ ಸಿಸಿ



ಚರಂಡಿ ನಿರ್ಮಾಣ ಸೇರಿದಂತೆ ಸುಮಾರು 4.50 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿ, ಎಲ್ಲ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗಾಗಿ ಗುಣಮಟ್ಟದಿಂದ ಪೂರ್ಣಗೊಳಿಸಬೇಕು. ಸಾರ್ವಜನಿಕರ ಹಿತದೃಷ್ಟಿಯಿಂದ ಅತಿ ತುರ್ತಾಗಿರುವ ಕಾಮಗಾರಿಗಳನ್ನು ಕೈಗೊಂಡಿದ್ದು, ಗುಣಮಟ್ಟದ ವಿಷಯದಲ್ಲಿ ಯಾವುದೇ ಕಾರಣಕ್ಕೂ ಲೋಪವಾಗಬಾರದು ಎಂದು ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಔರಾದ ಪ್ರದೇಶದ ಜನರ ಹಿತಾಸಕ್ತಿಯೇ ನನಗೆ ಮುಖ್ಯ. ಪ್ರತಿ ಗ್ರಾಮಕ್ಕೂ ಅಭಿವೃದ್ಧಿಯ ಲಾಭ ತಲುಪುವಂತೆ ಯೋಜನೆಗಳನ್ನು ಹಂತ ಹಂತವಾಗಿ ಜಾರಿಗೆ ತರಲಾಗುತ್ತಿದೆ. ಇತ್ತೀಚೆಗೆ ಸುರಿದ ಧಾರಾಕಾರ ಮಳೆಗೆ ಕ್ಷೇತ್ರದಲ್ಲಿ ಸಾಕಷ್ಟು ನಷ್ಟವಾಗಿದ್ದು ಈ ಬಗ್ಗೆ ಸರ್ಕಾರದ ಗಮನಕ್ಕೆ ತಂದಿದ್ದು ಶೀಘ್ರ ಅತೀವೃಷ್ಠಿ ಪ್ರದೇಶವೆಂದು ಘೋಷಿಸಿ ಪರಿಹಾರಧನ ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದ್ದೇನೆ. ರೈತರು, ಸಾರ್ವಜನಿಕರು ಯಾವುದೇ ಕಾರಣಕ್ಕೂ ಆತಂಕ ಪಡಬಾರದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಔರಾದ(ಬಿ) ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಮುಖಂಡರಾದ ಕಿರಣ ಪಾಟೀಲ ಹಕ್ಯಾಳ, ಬಸವರಾಜ ಪಾಟೀಲ ಕಮಲನಗರ, ಮಲ್ಲಿಕಾರ್ಜುನ ದಾನಾ, ನಾಗನಾಥ ಚಿಕ್ಲೆ, ಶಿವಾಜಿರಾವ ಪಾಟೀಲ ಮುಂಗನಾಳ, ಅನೀಲ ಬಿರಾದಾರ, ಬಾಬುರಾವ ತೋರ್ಣಾವಾಡಿ, ಶಿವರಾಜ ಅಲ್ಮಾಜೆ, ಶಿವು ಝುಲ್ಪೆ, ಶಿವಕುಮಾರ ವಡ್ಡೆ, ನಾಗೇಶ ಪತ್ರೆ, ರಂಗರಾವ ಜಾಧವ, ಅಶೋಕ ಹಲಮಂಡಗೆ, ಪ್ರಕಾಶ ಮೇತ್ರೆ, ಪ್ರಕಾಶ ಜೀರ್ಗೆ, ಮಲ್ಲಪ್ಪ ನೇಳಗೆ, ಶಿವರಾಜ ಖಳೂರೆ, ಮಾದಪ್ಪ ಗಂಗಾ ಸೇರಿದಂತೆ ಇತರರಿದ್ದರು.

# ಖಾಸಗಿ ಶಿಕ್ಷಣ ಸಂಸ್ಥೆಗಳ ಬೇಡಿಕೆ: 17ಕ್ಕೆ ಮುಖ್ಯಮಂತ್ರಿ ಭೇಟಿ ಸರ್ಕಾರದ ಮೇಲೆ ಒತ್ತಡಕ್ಕೆ ನಿರ್ಧಾರ

ಬೀದರ. ಸೆ. 08 : ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ವಿವಿಧ ಬೇಡಿಕೆಗಳ ಶೀಘ್ರ ಈಡೇರಿ–ಕೆಗೆ ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರಲು ಅಖಿಲ ಕರ್ನಾಟಕ ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘ ನಿರ್ಧರಿಸಿದೆ.

ಹುಬ್ಬಳ್ಳಿಯಲ್ಲಿ ಭಾನುವಾರ ನಡೆದ ಸಂಘದ ರಾಜ್ಯಮಟ್ಟದ ವಿಷಯ ಸಭೆಯಲ್ಲಿ ಸಂಘದ ರಾಜ್ಯ ಅಧ್ಯಕ್ಷ ರೇವಣಸಿದ್ದಪ್ಪ ಜಲಾದೆ ಈ ವಿಷಯ ತಿಳಿಸಿದರು.

ಈಗಾಗಲೇ ಪ್ರಾಥಮಿಕ ಮತ್ತು



ಪ್ರೌಢ ಶಿಕ್ಷಣ ಹಾಗೂ ಅರಣ್ಯ ಸಚಿವರ ಜತೆಗೆ ನಡೆದ ಸಂಘದ ಪದಾಧಿಕಾರಿಗಳ ಸಭೆಯಲ್ಲಿ ಸರ್ಕಾರ ವಿವಿಧ ಬೇಡಿಕೆಗಳ ಈಡೇರಿಕೆಗೆ ಒಪ್ಪಿಗೆ ಸೂಚಿಸಿದೆ. ಈ ದಿಸೆಯಲ್ಲಿ ತ್ವರಿತ ಆದೇಶಕ್ಕಾಗಿ ಆಡಳಿತದ ಗಮನ ಸೆಳೆಯಲು ನಿರ್ಣಯಿಸಲಾಗಿದೆ ಎಂದು ತಿಳಿಸಿದರು.

ಸೆ. 17 ರಂದು ಕಲಬುರಗಿಯಲ್ಲಿ ನಿಯೋಗದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಹೇಳಿದರು.

1995 ರ ನಂತರ ಆರಂಭವಾದ ಖಾಸಗಿ ಅನುದಾನ ರಹಿತ ಶಾಲೆ, ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಕೂಡಲೇ ಆದೇಶ ಹೊರಡಿಸದಿದ್ದರೆ ರಾಜ್ಯಮಟ್ಟದಲ್ಲಿ ಬೃಹತ್ ಹೋರಾಟ ಮಾಡಲಾಗುವುದು. ರಾಜ್ಯದ ಎಲ್ಲ ಜಿಲ್ಲೆ, ತಾಲ್ಲೂಕುಗಳ ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾವಿರಾರು ಸಿಬ್ಬಂದಿಯೊಂದಿಗೆ ವಿಧಾನಸೌಧಕ್ಕೆ ಮುತ್ತಿಗೆ ಹಾಕಲಾಗುವುದು ಎಂದು ತಿಳಿಸಿದರು.

ಸಂಘವು ಈ ಬಾರಿ ನ್ಯಾಯಕ್ಕಾಗಿ 'ಮಾಡು ಇಲ್ಲವೇ ಮಡಿ' ಮಾದರಿಯಲ್ಲಿ ಹೋರಾಟಕ್ಕೆ ಅಣಿಯಾಗಲಿದೆ. ಇದಕ್ಕಾಗಿ ರಾಜ್ಯದಾದ್ಯಂತ ಸಂಘಟನೆ ಸಂಚರಿಸಿ ಸಂಘಟನೆ ಬಲಪಡಿಸಲಿದೆ ಎಂದು ಹೇಳಿದರು.

1995 ರ ನಂತರ ಆರಂಭಿಸಲಾದ ಖಾಸಗಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಬೇಕು. ಬಡ ಮಕ್ಕಳಿಗೆ ಆಸರೆಯಾಗಿದ್ದ ಆ???ಟಿಇ ಖಾಸಗಿ ಶಾಲೆಗಳಲ್ಲಿ ಮರು ಜಾರಿಗೊಳಿಸಬೇಕು. ಅನುದಾನಿತ ಶಾಲೆ, ಕಾಲೇಜುಗಳ ಖಾಲಿ ಹುದ್ದೆ ಭರ್ತಿ ಮಾಡಬೇಕು. ಖಾಸಗಿ ಅನುದಾನ ರಹಿತ ಶಾಲೆ, ಕಾಲೇಜು ಕಟ್ಟಡಗಳಿಗೆ ಕರ ವಿನಾಯಿತಿ ನೀಡಬೇಕು. ಉಚಿತ ವಿದ್ಯುತ್ ಒದಗಿಸಬೇಕು. ಕನ್ನಡ ಶಾಲೆ ಬಂದ್ ಮಾಡಿ ಕರ್ನಾಟಕ ಪಬ್ಲಿಕ್ ಶಾಲೆ ಹೆಸರಲ್ಲಿ ಆಂಗ್ಲ ಮಾಧ್ಯಮ ಶಾಲೆ ತೆರೆಯುವುದನ್ನು ಕೈಬಿಡಬೇಕು. ಕನ್ನಡ ಮಾಧ್ಯಮ ಶಾಲೆ, ಕಾಲೇಜುಗಳ ನವೀಕರಣ ಪ್ರಕ್ರಿಯೆ ಸರಳೀಕರಿಸಬೇಕು. ಕಲ್ಯಾಣ ಕರ್ನಾಟಕ ಭಾಗದ ಖಾಸಗಿ ಅನುದಾನ ರಹಿತ ಶಾಲೆ, ಕಾಲೇಜುಗಳಿಗೆ ಸಂವಿಧಾನದ 371(ಜೆ) ತಿದ್ದುಪಡಿ ಕಾಯ್ದೆ ಅನ್ವಯ ಸೌಲಭ್ಯ ಕಲ್ಪಿಸಬೇಕು ಎನ್ನುವುದು ಪ್ರಮುಖ ಸಂಘದ ಪ್ರಮುಖ ಬೇಡಿಕೆಗಳಾಗಿವೆ ಎಂದು ತಿಳಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಅರುಣಕುಮಾರ ಶಹಾಪುರ ಹಾಗೂ ಮಾಧ್ಯಮಿಕ ಶಿಕ್ಷಣ ಸಂಸ್ಥೆಗಳ ಸಂಘದ ರಾಜ್ಯ ಅಧ್ಯಕ್ಷ ಸಂದೀಪ್ ಬೂದಿಹಾಳ್ ಸಂಘದ ಹೋರಾಟವನ್ನು ಬೆಂಬಲಿಸುವುದಾಗಿ ಪ್ರಕಟಿಸಿದರು.

ಸಂಘದ ರಾಜ್ಯ ಸಂಚಾಲಕ ಜೆ.ಸಿ. ಶಿವಪ್ಪ, ಉಪಾಧ್ಯಕ್ಷರಾದ ಎಂ. ಮೌಲಾಲಿ, ಡಿ.ಬಿ. ನದಾಫ್, ನಂಜುಂಡಸ್ವಾಮಿ ಮೈಸೂರು, ಕೃಷ್ಣಮೂರ್ತಿ ಬೆಂಗಳೂರು, ಕೃಷ್ಣಪ್ಪ ಕೋಲಾರ್, ಐ.ಎಸ್. ಸ್ವರ್ಗಿನಮಠ ಬೆಳಗಾವಿ, ಕಾರ್ಯದರ್ಶಿ ಕೆ. ಗುರುನಾಥ ರೆಡ್ಡಿ, ಹುಬ್ಬಳ್ಳಿ ವಿಭಾಗ ಪ್ರಮುಖ ಅನಿಲ್ ಜಾಧವ್, ಕಲಬುರ್ಗಿ ವಿಭಾಗ ಪ್ರಮುಖರಾದ ರಾಜೇಂದ್ರ ಯರನಾಳೆ, ಮಹಾಲಿಂಗಗೌಡ, ಮಹಿಳಾ ಪ್ರಮುಖ ಜಿ.ಎಸ್. ದೇಸಾಯಿ, ಬೀದರನ ಮಾಣಿಕಪ್ಪ ಗೋರನಾಳೆ ಮತ್ತಿತರರು ಇದ್ದರು.

## ಎನ್‌ಎಸ್‌ಯುಐ ಜಿಲ್ಲಾ ಉಪಾಧ್ಯಕ್ಷರಾಗಿ ಮಾಧವ್

ಬೀದರ. ಸೆ. 07 : ಭಾರತ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟ (ಎನ್‌ಎಸ್‌ಯುಐ) ಜಿಲ್ಲಾ ಘಟಕದ ಉಪಾಧ್ಯಕ್ಷರಾಗಿ ಭಾಲ್ಕಿ ತಾಲ್ಲೂಕಿನ ಬಸವನವಾಡಿ ಗ್ರಾಮದ ಮಾಧವ್ ಉಮರಾವ್ ಧುಮಾಳೆ ಅವರನ್ನು ನೇಮಕ ಮಾಡಲಾಗಿದೆ.

ಒಕ್ಕೂಟದ ರಾಜ್ಯ ಪ್ರಧಾನ ಕಾರ್ಯದರ್ಶಿಯೂ ಆದ ಸಂಸದ ಸಾಗರ್ ಖಂಡ್ರೆ ಅವರ ಸೂಚನೆ ಮೇರೆಗೆ ಜಿಲ್ಲಾ ಘಟಕದ ಅಧ್ಯಕ್ಷ ಸಚಿನ್ ಮಲ್ಕಾಪುರ ಈ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯಲ್ಲಿ ಒಕ್ಕೂಟದ ಬಲವರ್ಧನೆ



ಕಾರ್ಯದಲ್ಲಿ ತೊಡಗಿಸಿಕೊಳ್ಳುವಂತೆ ಸೂಚಿಸಿದ್ದಾರೆ.

ಇಂದು ತಾಲೂಕ ಮಟ್ಟದ ಶಿಕ್ಷಕರ ದಿನಾಚರಣೆ

# ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ರಾಜಪ್ಪ ಜಮಾದರ್ ಮನವಿ



**ಮಲ್ಲಮ್ಮ ನುಡಿ ವಾರ್ತೆ**
**ಚಿಟಗುಪ್ಪ:**

ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿ ಕ್ಷೇತ್ರ ಸಮನ್ವಯಾಧಿಕಾರಿ ಕಾರ್ಯಾಲಯ ವತಿಯಿಂದ ಪಟ್ಟಣದ ಸಂತ ಶಿರೋಮಣಿ ಮಡಿವಾಳೇಶ್ವರ (ಗವಿ) ಕಲ್ಯಾಣ ಮಂಟಪದಲ್ಲಿ ಇಂದು ಮಧ್ಯಾಹ್ನ 1 ಘಂಟೆಗೆ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಶಿಕ್ಷಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ರಾಜಪ್ಪ ಜಮಾದರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ನಾಡಗೀತೆ, ರೈತಗೀತೆ, ಸ್ವಾಗತ. ಅಗಲಿದವರಿಗೆ ಮೌನಾಚರಣೆ, ಸನ್ಮಾನ, ಮನವಿ ಸಮರ್ಪಣೆ ನಿವೃತ್ತ, ಮೃತ ಶಿಕ್ಷಕರ ಕುಟುಂಬದವರಿಗೆ ಸನ್ಮಾನ, ಉಪನ್ಯಾಸ ಸೇರಿ ವಿವಿಧ ಕಾರ್ಯಕ್ರಮಗಳು ಜರುಗಲಿವೆ. ಬೆಳಿಗ್ಗೆ 9ಗಂಟೆಗ ಪಟ್ಟಣದ ಆರ್ಯ ಸಮಾಜದ ಹತ್ತಿರ ಇರುವ ಸರ್ಕಾರಿ ಕನ್ಯಾ ಮಾದರಿ ಪ್ರಾಥಮಿಕ ಶಾಲೆಯಿಂದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರದ ಭವ್ಯ ಮೆರವಣಿಗೆಯು ಪ್ರಮುಖ ರಸ್ತೆಗಳ ಮೂಲಕ ಶ್ರೀ ಸಂತ ಮಡಿವಾಳೇಶ್ವರ ಕಲ್ಯಾಣ ಮಂಟಪದ ವರೆಗೆ ಜರುಗಲಿದೆ ಎಂದು ತಿಳಿಸಿದ್ದಾರೆ.

# .ಓದು, ಬೋಧನೆ, ಸಂಶೋಧನೆಯ ನಿರಂತರತೆಯಿಂದಲೇ ಯಶಸ್ವಿ ಶಿಕ್ಷಕ : ಡಾ. ಕಿರಣ್ ಗಾಜನೂರು.



(ವರದಿ. ಡಿ. ಕೆ. ಪ್ರಹ್ಲಾದ ಜಿ.)
ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: –ಓದು, ಬೋಧನೆ ಮತ್ತು ಸಂಶೋಧನೆಯಲ್ಲಿ ನಿರಂತರತೆ ಇದ್ದರೆ ಯಶಸ್ವಿ ಶಿಕ್ಷಕನಾಗಲು ಸಾಧ್ಯ. ಪರಿಣಾಮಕಾರಿ ಶಿಕ್ಷಕನಾಗಲು ವೈಯಕ್ತಿಕ ಬದುಕಿಗಿರುವಷ್ಟೇ ಕಾಳಜಿ ವೃತ್ತಿ ಬದುಕಿಗಿದ್ದರೆ ಸಾಧ್ಯ ಎಂದು ಸಿಯುಕೆ ಪ್ರಾಧ್ಯಾಪಕ ಹಾಗೂ ಕರ್ನಾಟಕ ಪಠ್ಯಕ್ರಮ ರಚನಾ ಸಮಿತಿ ಸದಸ್ಯ ಡಾ. ಕಿರಣ್ ಗಾಜನೂರು ಹೇಳಿದರು.

ನಗರದ ಬಿಕೆಡಿಬಿ ಕಲ್ಯಾಣ ಮಂಟಪದಲ್ಲಿ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿ ಜಗತ್ತನ್ನು ಬದಲಾಯಿಸುವ ದೃಷ್ಟಿಕೋನ ಕೊಟ್ಟವರು

ಸ್ವಾತಂತ್ರ್ಯ ಮೂಲಭೂತ ಹಕ್ಕು. ಅದು ಮಗುವಿಗೆ ನಡಾವಳಿಕೆಯಲ್ಲಿ, ತರಗತಿಯಲ್ಲಿ, ವಿದ್ಯಾರ್ಥಿಗಳ ಜೊತೆಗಿನ ಸಂವಾದಗಳಲ್ಲಿ ಸ್ವಾತಂತ್ರ್ಯ ಅನುಭವಿಸಬೇಕಾದ ಅಗತ್ಯವಿದೆ. ಅಧ್ಯಾಪಕನಾದವನು ಸೌಮ್ಯ ನಿರಂಕುಶವಾದಿ ಆಗುವುದು ಸ್ವಾತಂತ್ರ್ಯಕ್ಕೆ ಅಪಾಯಕಾರಿ ಎಂದರು.

ಕಲಿಕೆಯು ಯಾವುದೇ ವಿದ್ಯಮಾನವನ್ನು ಅರ್ಥೈಸುವ ಕಲೆಯಾಗಿದೆ. ದೇಶವನ್ನು ಬದಲಾಯಿಸುವುದಕ್ಕೆ ಸಾಧ್ಯವಾಗಲು ಶಿಕ್ಷಕರಿಂದ ಸಾಧ್ಯ. ನಮ್ಮ ಅಧ್ಯಾಪಕರು ಆತ್ಮವಿಮರ್ಶೆ ಮಾಡಿಕೊಳ್ಳಬೇಕು. ಹೊಸ ರೀತಿಯಲ್ಲಿ ಮಾತನಾಡಲು ಸಾಧ್ಯವಾಗುವಂತೆ ನೋಡಿಕೊಳ್ಳಬೇಕು ಎಂದರು. ತಾಂತ್ರಿಕತೆ ಎಷ್ಟೇ ಮುಂದುವರೆದರೂ ನಾವು ಪಡೆದ ತಾಂತ್ರಿಕತೆಯ ಸದ್ಬಳಕೆ ಹೇಗೆ ಮಾಡಿಕೊಳ್ಳಬೇಕು ಎಂಬ ಅರಿವು ಮೂಡಿಸಲು ಶಿಕ್ಷಕರ ಅಗತ್ಯವಿದೆ. ಎಐ ಹಾಗೂ ಆಧುನಿಕ ತಂತ್ರಜ್ಞಾನವನ್ನು ಎದುರಿಸುವ ಸವಾಲು ಎಂಥದ್ದು ಎಂಬುದನ್ನು ವಿವೇಚಿಸಬೇಕಾದ ಅಗತ್ಯ ಇಂದಿನ ಅಧ್ಯಾಪಕರ ಮೇಲಿದೆ ಎಂದರು.

ಪ್ರಶ್ನಿಸುವ, ವೈಜ್ಞಾನಿಕ ಮನೋಭಾವ ಬೆಳೆಸುವ, ವಿಮರ್ಶಾತ್ಮಕ ದೃಷ್ಟಿಕೋನ ಬೆಳೆಸುವ ಉದ್ದೇಶ ಶಿಕ್ಷಣದ್ದಾಗಿದೆ. ಸ್ವಾತಂತ್ರ್ಯ ಅನುಭವಿಸುವ ವಾತಾವರಣ ತರಗತಿಯಿಂದಲೇ ಸಾಧ್ಯವಾಗಬೇಕು. ಪ್ರಜಾಸತ್ತಾತ್ಮಕ ವಿವೇಚನೆ, ಚಿಂತನೆಗಳು ಸೃಷ್ಟಿಸುವ ಕೆಲಸ ಅಧ್ಯಾಪಕರಿಂದ ಸಾಧ್ಯವಾಗಬೇಕು ಎಂದರು.

ಅಧ್ಯಾಪಕ ಭ್ರಷ್ಟನಾದರೆ ಇಡೀ ಸಮಾಜ ಜಡಗಟ್ಟುತ್ತದೆ. ನಿರಂತರ ಚಲನಶೀಲವಾಗಿಡುವ ಕೆಲಸ ಶಿಕ್ಷಣದ್ದಾಗಿದೆ. ಭಾರತದಲ್ಲಿ ಆಧ್ಯಾತ್ಮಿಕತೆ ಶಿಕ್ಷಣದ ಮೂಲಭೂತ ತಳಹದಿಯಾಗಿದೆ. ವರ್ತಮಾನಕ್ಕೆ ಮತ್ತು ಭವಿಷ್ಯತ್ತಿಗೆ ಅರಿವನ್ನು ಸೃಷ್ಟಿಸುವ ಕೆಲಸ ಶಿಕ್ಷಕನದು. ಅರಿವಿನ ಕ್ರಾಂತಿ ಮಾಡಬೇಕಾದ ವಿದ್ಯಾ ಸಂಸ್ಥೆಗಳು ನೌಕರಿ ಸೃಷ್ಟಿಸುತ್ತಿವೆ. ಅದಕ್ಕಾಗಿ ಪ್ರಮಾಣ ಪತ್ರ ಸೃಷ್ಟಿಸುವಲ್ಲಿ ತೊಡಗಿವೆ. ಸಾಮಾಜಿಕ ಪ್ರಜ್ಞೆ, ಸಾಂಸ್ಕೃತಿಕ ಅರಿವು ಮೂಡಿಸುವ ಬಹುದೊಡ್ಡ ಜವಾಬ್ದಾರಿ ಅಧ್ಯಾಪಕರದ್ದಾಗಿದೆ ಎಂದರು.

ಕಲಬುರ್ಗಿಯ ವಿಭಾಗೀಯ ಪತ್ರಾಗಾರ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಡಾ. ವೀರಶೆಟ್ಟಿ ಗಾರಂಪಳ್ಳಿ ಮಾತನಾಡಿ, ವ್ಯಕ್ತಿ, ಸಮಾಜ ಮತ್ತು ಸಮುದಾಯಗಳನ್ನು ಕಟ್ಟುವ ಕೆಲಸ ಶಿಕ್ಷಣದಿಂದ ಮಾತ್ರ ಸಾಧ್ಯ. ಗುರು ಮುಟ್ಟಿ ಗುರುವಾಗು , ಜ್ಯೋತಿ ಮುಟ್ಟಿ ಜ್ಯೋತಿಯಾಗು ಎಂಬ ಹೊಸ ಭಾಷೆ ನೀಡಿದ್ದು ಕಲ್ಯಾಣದ ಶರಣರ ಚಳುವಳಿ. ಪ್ರಸ್ತುತ ಭಾರತೀಯ ಸಮಾಜ ವೈಯಕ್ತಿಕ ಅಸ್ಮಿತೆಯ ಹುಡುಕಾಟದಲ್ಲಿ ಕಳೆದುಹೋಗುತ್ತಿರುವುದು ಈ ಕಾಲದ ದುರಂತ ಎಂದರು.

ನಿರಂಕುಶ ಮತಿತ್ವ ಮತ್ತು ಸಮ ಸಮಾಜದ ಪರಿಕಲ್ಪನೆ ವಿಸ್ತರಿಸಿದ್ದು ವಚನಕಾರರು. ಬುದ್ಧನ, ಶರಣ–ರ, ತತ್ವಪದಕಾರರ, ಸೂಫಿಗಳ ತಾತ್ವಿಕ ಚಿಂತನೆಗಳು ಶಿಕ್ಷಣದ ನಾಡಿಮಿಡಿತವಾಗಿಸಿ, ಸಮಾಜಕ್ಕೆ ಸರಿಯಾಗಿ ದಿಗ್ದರ್ಶಿಸುವ ಕೆಲಸ ಶಿಕ್ಷಕರಿಂದ ನಡೆಯಬೇಕು. ಹೊಸ ಸಮಾಜ, ಹೊಸ ಜ್ಞಾನ ಪರಂಪರೆಗಳ, ಹೊಸ ಲೋಕವನ್ನು ಸೃಷ್ಟಿಸುವ ಹೊಣೆ ಅಧ್ಯಾಪಕರದ್ದಾಗಿದೆ ಎಂದರು.

ವಿಶ್ವಸ್ಥ ಸಮಿತಿ ಸದಸ್ಯ ಸೋಮಶೇಖರಯ್ಯ ವಸ್ತ್ರದ ಮಾತನಾಡಿ, ಶಿಕ್ಷಕರು ವಿದ್ಯಾರ್ಥಿಗಳಿಗೆ ಹೊಸ ಚೈತನ್ಯ ತುಂಬುವ ಶಕ್ತಿ. ಸಹಬಾಳ್ವೆ, ಸಹನೆ, ಸಹಿಷ್ಣುತೆ, ಸೋದರತೆ ಬೆಳೆಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು. ಸಮಾಜದ ಏಳಿಗೆಯಲ್ಲಿ ಅಧ್ಯಾಪಕರ ಹೊಣೆಗಾರಿಕೆ ಶ್ರಮ ದೊಡ್ಡದು ಎಂದರು.

ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಬಿಡಿವಿಸಿ ಅಧ್ಯಕ್ಷರಾದ ಶಶಿಕಾಂತ ದುರ್ಗೆ, ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ವೀರಣ್ಣ ಹಲಶೆಟ್ಟೆ, ಮಲ್ಲಯ್ಯ ಸ್ವಾಮಿ ಹಿರೇಮಠ, ಅಶೋಕ ನಾಗರಾಳೆ, ಕಾಶಪ್ಪ ಸಕ್ಕರಭಾವಿ, ಶ್ರೀಕಾಂತ ಬಡದಾಳೆ, ಜಗನ್ನಾಥ ಖೂಬಾ, ಅನಿಲಕುಮಾರ ರಗಟೆ , ಬಿಡಿವಿಸಿ ಉಪಾಧ್ಯಕ್ಷ ಡಾ. ಜಿ. ಎಸ್. ಭುರಾಳೆ, ಕಾರ್ಯದರ್ಶಿ ನಾಗಯ್ಯ ಸ್ವಾಮಿ, ಕೋಶಾಧ್ಯಕ್ಷ ಶಿವರಾಜ ಶಾಶಟ್ಟೆ, ಮಲ್ಲಿಕಾರ್ಜುನ ಮಂಠಾಳೆ, ಪ್ರಮುಖರಾದ ಡಾ. ಮಲ್ಲಿಕಾರ್ಜುನ ಲಕಶೆಟ್ಟೆ, ಶರಣಪ್ಪ ದುರ್ಗೆ, ಅಶೋಕ ಸ್ವಾಮಿ ಸೇರಿದಂತೆ ಇನ್ನಿತರರು ಇದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ ಎಲ್ಲ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿಯನ್ನು ಸನ್ಮಾನಿಸಲಾಯಿತು. ಡಾ. ಬಸವರಾಜ ಖಂಡಾಳೆ, ಸಂಗೀತಾ ಮಹಾಗಾವೆ ನಿರೂಪಿಸಿದರು. ಡಾ. ಭೀಮಾಶಂಕರ ಬಿರಾದಾರ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಡಾ. ರುದ್ರಮಣಿ ಮಠಪತಿ ವಂದಿಸಿದರು.

# 186ನೇ ವಿಶ್ವ ಛಾಯಾಗ್ರಹಣ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಫೋಟೋಗ್ರಾಫಿ ಎಂದರೆ ಕೇವಲ ಚಿತ್ರಗಳನ್ನು ತೆಗೆವುದು ಮಾತ್ರವಲ್ಲ, ಅದು ಕ್ಷಣಗಳನ್ನು ಶಾಶ್ವತವಾಗಿ ಉಳಿಸುವ ಕಲೆಯಾಗಿದೆ ಎಂದು ಮನ್ನಾಏಖೇಳ್ಳಿ ಪಿಎಸ್ಐ ಮಹಿಂದ್ರಕುಮಾರ್ ನುಡಿದರು. ತಾಲೂಕಿನ ದೇವಗಿರಿ ದುರ್ಗಮ್ಮ ದೇವಸ್ಥಾನದ ಆವರಣದಲ್ಲಿ ತಾಲೂಕು ಛಾಯಾಗ್ರಾಹಕ ಸಂಘದ ವತಿಯಿಂದ ಹಮ್ಮಿಕೊಂಡಿದ್ದ 186ನೇ ವಿಶ್ವ ಛಾಯಾಗ್ರಾಹಕರ ದಿನಾಚರಣೆಯನ್ನು ಕೇಕ್ ಕತ್ತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವ ಛಾಯಾಗ್ರಹಣ ನಮ್ಮ ಜೀವನದ ಅವಿಭಾಜ್ಯ ಅಂಗವಾಗಿದೆ. ಇದು ದೃಶ್ಯ ರೂಪದಲ್ಲಿ ಕ್ಷಣಗಳು ಮತ್ತು ಭಾವನೆಗಳನ್ನು ಸೆರೆಹಿಡಿಯುತ್ತದೆ. ಛಾಯಾಗ್ರಹಣವು ಕಲೆಯ ಒಂದು ರೂಪವಾಗಿದ್ದು, ಸಮಯ, ಬೆಳಕು, ನೆನಪುಗಳು, ಭಾವನೆಗಳು, ಸಂಸ್ಕೃತಿ, ಇತಿಹಾಸ ಮತ್ತು ಹೆಚ್ಚಿನವುಗಳ ಸತ್ಯಾ ಸತ್ಯತೆಯನ್ನು ಸುಂದರವಾಗಿ ಸೆರೆಹಿಡಿಯುವ ಮೂಲಕ ನೆನಪುಗಳ ಕಥೆ ಹೇಳುವ ಅತ್ಯುತ್ತಮ ಮಾಧ್ಯಮವಾಗಿದೆ. ಪ್ರತಿಯೊಬ್ಬರಲ್ಲೂ ಒಬ್ಬ ಛಾಯಾಗ್ರಹಕ ಅಡಗಿದ್ದಾನೆ. ಮತ್ತು ನಾವೆಲ್ಲರೂ ಅದರೊಂದಿಗೆ ಸಂಬಂಧ ಹೊಂದಿದ್ದೇವೆ. ನಾವುಗಳು ಮೊಬೈಲ್ ಕ್ಯಾಮೆರಾದ ಮೂಲಕ ನಮ್ಮ ಪ್ರತಿಯೊಂದು ಸುಂದರ ಕ್ಷಣಗಳನ್ನು ಸೆರೆಹಿಡಿಯುತ್ತೇವೆ. ಅದೇ ರೀತಿ ಅದೆಷ್ಟೋ ವೃತ್ತಿಪರ, ಹವ್ಯಾಸಿ ಛಾಯಾಗ್ರಾಹಕರಿದ್ದಾರೆ. ಅವರೆಲ್ಲರನ್ನು ಪ್ರೋತ್ಸಾಹಿಸಲು ಮತ್ತು ಗೌರವಿಸಲು ಪ್ರತಿವರ್ಷ ಆಗಸ್ಟ್ 19 ರಂದು ವಿಶ್ವ ಛಾಯಾಗ್ರಹಣ ದಿನವನ್ನು ಆಚರಿಸಲಾಗುತ್ತದೆ ಎಂದು ತಿಳಿಸಿದರು. ಛಾಯಾಗ್ರಾಹಕ ತಾಲೂಕ ಉಪಾಧ್ಯಕ್ಷ ಶಾಮರಾವ ಭುತ್ತಾಳೆ ಮಾತನಾಡಿ, ಸಂಘಟನೆಯಲ್ಲಿ ಶಕ್ತಿ ಅಡಗಿದೆ, ಛಾಯಾಗ್ರಹಣ ಕೇವಲ ಹವ್ಯಾಸವಲ್ಲ, ಅದು ವೃತ್ತಿ ಆಗಬಹುದು, ಆದಾಯದ ಮೂಲ ಆಗುತ್ತದೆ, ಒಂದು ಕ್ಯಾಮೆರಾ ಮತ್ತು ಸೃಜನಶೀಲ ಕಣ್ಣು ಇದ್ದರೆ, ನಾವು ಜೀವನದಲ್ಲಿ ಸ್ವಾವಲಂಬಿಯಾಗಿ ಬೆಳೆಯಬಹುದು. ಗ್ರಾಹಕರು ನಮ್ಮ ಕಷ್ಟಗಳನ್ನು ಅರಿತುಕೊಂಡು ನಮ್ಮ ಛಾಯಾಗ್ರಹಣ ವೃತ್ತಿ ಮಾಡುವರಿಗೆ ಸ್ಪಂದಿಸಬೇಕು ಎಂದು ನುಡಿದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಚಂದ್ರಕಾಂತ ಜಮಗಿ, ಗೌರವಾಧ್ಯಕ್ಷ ಗೌರೀಶ ಗೋಂಟಲ್, ಕಾರ್ಯದರ್ಶಿ ವಿನಾಯಕ ಚವ್ಹಾಣ, ಕೋಶಾಧ್ಯಕ್ಷ ಸಿದ್ದು ಮಡಿವಾಳ, ರಾಮಜೀ ಚವ್ಹಾಣ, ಚಂದ್ರಶೆಟ್ಟಿ ಐನಾಪುರ್, ವಿಜಯಕುಮಾರ್, ಸುಖೇಶ, ಅನೀಲ ಪಾಟೀಲ್, ರಾಜು ಪೂಜಾರಿ, ಹಣಮಂತ ಭೋವಿ, ಜಗನಾಥ ಐನಾಪುರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ತಾಲೂಕಾ ಮಟ್ಟದ ವಿಜ್ಞಾನ ಚಟುವಟಿಕೆಗಳ ಸ್ಪರ್ಧೆ





**(ವರದಿ. ಡಿ. ಕೆ. ಪ್ರಹ್ಲಾದ ಜಿ.)**
**ಮಲ್ಲಮ್ಮ ನುಡಿ ವಾರ್ತೆ**
**ಬಸವಕಲ್ಯಾಣ:**

ಸೆ 8 ತಾಲೂಕಿನ

ಸರ್ಕಾರಿ ಅನುದಾನಿತ ಅನುದಾನರಹಿತ ಪ್ರಾಢಶಾಲೆಯ ವಿಧ್ಯಾರ್ಥಿಗಳಿಗೆ ವಿಜ್ಞಾನ ವಿಚಾರ ಗೋಷ್ಠಿ ವಿಜ್ಞಾನ ನಾಟಕ ವಸ್ತು ಪ್ರದರ್ಶನ ಹಾಗೂ ಅಗಸ್ತ್ಯ ಪೌಂಢೇಶನ್ ವತಿಯಿಂದ ನಾವಿನ್ಯತೆ ಮೇಳವನ್ನು ಸರ್ಕಾರಿ ಬಾಲಕರ ಪ್ರೌಢ ಶಾಲೆಯಲ್ಲಿ ಅಯೋಜಿಸಲಾಗಿತು. ಉದ್ಘಾಟನೆ ಉಪ ಪ್ರಾಚಾರ್ಯರು ಅನಿತಾ ಸಾವಳಕರ್ ನೆರವೇರಿಸಿ ಮಾತನಾಡಿ ಜೈ ಜವಾನ್ ಜೈ, ಕಿಸಾನ್ ಜೈ, ವಿಜ್ಞಾನ" ಎಂಬ ಮಾತು ಅರ್ಥಪೂರ್ಣವಾದದ್ದು ಎಂದು ಹೇಳಿದರು . ಮುಖ್ಯ ಅತಿಥಿಗಳಾಗಿ ಉಪನ್ಯಾಸಕರಾದ ಜ್ಞಾನರಡ್ಡಿ ಬೊಗಲೆ ಕಿಟ್ಟಾ. ಬಿ. ಆರ್. ಪಿ. ಗಳಾದ ಪುಂಡಲೀಕ ಬಸನಾಯಕ. ಮಹೇಶ್ ಬೋವಿ. ಸಂಚಾಲಕರು ಅಗಸ್ತ್ಯ ಪೌಂಢೇಶನ್ ಪ್ರೌಢ ಶಾಲೆಯ ಶಿಕ್ಷಕರ ಸಂಘದ ಗೌರವ ಅದ್ಯಕ್ಷರಾದ ಉದ್ದವರಾವ ಉಪಾಸೆ. ಕಾರ್ಯಕ್ರಮದ ನೋಡಲ್ ಅಧಿಕಾರಿ ಶಾಲಿವಾನ್ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿ " ಧರ್ಮ ಜನರನ್ನು ಗುಂಪುಗಳಲ್ಲಿ ವಿಂಗಡಿಸಿದರೆ, ವಿಜ್ಞಾನ ಜನರನ್ನು ಒಂದು ಗೂಡಿಸುತ್ತದೆ " ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬಾಲಾಜಿ ವಾಗ್ದರೆ, ಸಂಜೀವಕುಮಾರ ನಡುಕರ್, ರಾಮ ಪಾಟೀಲ್, ಮಲ್ಲಿಕಾರ್ಜುನ ಪರತಾಪುರೆ, ಎಂಡಿ ಶರೀಫ್ ಹಾಗೂ ವಿವಿಧ ಶಾಲೆಗಳ ವಿಜ್ಞಾನ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸ್ವಾಗತ ಮತ್ತು ಸಂಚಾಲನೆ ಸಿ. ಆರ್. ಪಿ. ಗಳಾದ ಗಿರಿಧರ ಧಾನೂರೆ ನಡೆಸಿದರು.

# ರೇಕುಳಗಿ: ಸದ್ಗುರು ಶ್ರೀ ಶಂಭುಲಿಂಗೇಶ್ವರ, ಮಾತೆ ಬಸಮ್ಮ ತಾಯಿ ದರ್ಶನ ಪಡೆದ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್



**ಮಲ್ಲಮ್ಮ ನುಡಿ ವಾರ್ತೆ**
**ಚಿಟಗುಪ್ಪ:–**

ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು, ಸದ್ಗುರು ಶ್ರೀ ಶಂಭುಲಿಂಗೇಶ್ವರರ 90ನೇ ಪುಣ್ಯ ಸ್ಮರಣೆ ಕಾರ್ಯಕ್ರಮದ ನಿಮಿತ್ಯ ರವಿವಾರ ಸಂಜೆ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ರೇಕುಳಗಿ ಗ್ರಾಮದ ಮಹಾಯೋಗಿ ಸದ್ಗುರು ಶ್ರೀ ಶಂಭುಲಿಂಗೇಶ್ವರ ಹಾಗೂ ಮಹಾಭಕ್ತೆ ಶಿರೋಮಣಿ ಶ್ರೀ ಬಸಮ್ಮ ತಾಯಿ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸಜ್ಜದ್ ಸಾಹೇಬ್, ಮಲ್ಲಪ್ಪ ಮನ್ನಾಎಖೇಳ್ಳಿ, ಸಂಗಪ್ಪ ಪಾಟೀಲ್, ಪುಟ್ಟರಾಜ್ ರೇಕುಳಗಿ, ಫೀಜೋರ್ ಸಾಹೇಬ್, ಕ್ರಿಸ್ಟೋಫರ್, ಬಕ್ಕಪ್ಪ, ಅಶೋಕ್ ಜ ಮಾದಾರ್ ಸೇರಿದಂತೆ ಇತರರು ಇದ್ದರು.

# ಸಮುದಾಯ ಆರೋಗ್ಯ ಕೇಂದ್ರ ಅವ್ಯವಸ್ಥೆ ಸರಿಪಡಿಸಲು ಸಿಇಓಗೆ ಕನ್ನಡ ಸೇನೆ ಮನವಿ




**ಮಲ್ಲಮ್ಮ ನುಡಿ ವಾರ್ತೆ**
**ಚಿಟಗುಪ್ಪ:**

ಸಮುದಾಯ ಆರೋಗ್ಯ ಕೇಂದ್ರದಲ್ಲಿ ಅವ್ಯವಸ್ಥೆಯ ಆಗರವಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆಯ ತಾಲೂಕಾಧ್ಯಕ್ಷ ಪವನ ಪೂಜಾರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬರೆದ ಪತ್ರದಲ್ಲಿ ದೂರಿದ್ದಾರೆ. ಸಣ್ಣ ಪುಟ್ಟ ಕಾಯಿಲೆಗಳಿಗೂ ಕೂಡ ಜಿಲ್ಲಾ ಆಸ್ಪತ್ರೆಗಳಿಗೆ ಕಳುಹಿಸುತ್ತಿದ್ದಾರೆ ಹೃದಯ ಕಾಯಿಲೆಗಳ ತಪಾಸಣೆಗೆ ಉಪಕರಣಗಳು ಇಲ್ಲ ಎಂದು ದೂರಿದ್ದಾರೆ. ವೈದ್ಯರು ಆಸ್ಪತ್ರೆಗೆ ಸಕಾಲದಲ್ಲಿ ಬರುತ್ತಾಯಿಲ್ಲ, ಆಸ್ಪತ್ರೆಯಲ್ಲಿ ಔಷಧಿಗಳ ಕೊರತೆಗಳು ಕೂಡ ಇವೆ, ಔಷಧಿಗಳು ಹೊರಗಡೆ ತರಲು ಚೀಟಿ ಬರೆದು ಕೊಡುತ್ತಿದ್ದಾರೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬರೆದ ಮನವಿ ಪತ್ರ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಮನವಿ ಪತ್ರದಲ್ಲಿ ಸಲ್ಲಿಸಿದ್ದಾರೆ. ಈ ಬೇಡಿಕೆಗಳು ಬಗೆಹರಿಸದಿದ್ದರೆ ಉಗ್ರ ಹೋರಾಟ ಮಾಡಲು ಎಚ್ಚರಿಕೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ, ಜಿಲ್ಲಾಧ್ಯಕ್ಷ ಸುಭಾಷ ಕೆನಡೆ, ಲಿಂಗಪ್ಪ ಹಡಪದ, ರಮೇಶ ಪೂಜಾರಿ, ಹಮೀದಮಿಯ್ಯಾ, ಸತೀಶ ಗಂಜಿ, ನಾಗರಾಜ್ ಹುಡಗಿ, ಕಾಶಿನಾಥ್, ಶಿವರಾಜ ಫಾತ್ಮಪುರ್, ತಿಪ್ಪಣ್ಣ ಇಟಗಾ, ನಾಗೇಶ ಸ್ವಾಮಿ, ಸಿದ್ದು ಸೋನಾರ್, ಸೋಮನಾಥ್ ಮಡಿವಾಳ, ಚಿದಾನಂದ ಗುಳ್ಳಾ, ಪವನ ಪೂಜಾರಿ, ಮಹಾದೇವ ಪಾಟೀಲ್, ಹರ್ಷದ್, ಮೌಸಿನ್, ಅಂಬರೀಶ ವಳಖಿಂಡಿ, ಸಲಿಂ ಬೆಳಕೇರಾ, ಕಲ್ಲಪ್ಪ ಮನಾಖೇಳ್ಳಿ, ಕಾಶಿನಾಥ್ ರೇಕುಳಗಿ, ವಿಶಾಲ, ಉಮೇಶ ಧೂಮಳೆ, ಸೇರಿದಂತೆ ಕನ್ನಡ ಸೇನೆಯ ಪದಾಧಿಕಾರಿಗಳು ಇದ್ದರು.

# ನವೆಂಬರನಲ್ಲಿ ಚಾಲುಕ್ಯ ಉತ್ಸವ–ಸಚಿವ ತಿಮ್ಮಾಪೂರ



**ಮಲ್ಲಮ್ಮ ನುಡಿ ವಾರ್ತೆ**
**ಬಾಗಲಕೋಟೆ:**

ಸೆ.8–ನಾಡಿನ ಸಂಸ್ಕೃತಿ ಮತ್ತು ಪರಂಪರೆಯನ್ನು ಬಿಂಬಿಸುವ ಚಾಲುಕ್ಯ ಉತ್ಸವವನ್ನು ಇದೇ 2025 ರ ನವೆಂಬರ ತಿಂಗಳಲ್ಲಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಪ್ರಸಕ್ತ ಸಾಲಿನ ಚಾಲುಕ್ಯ ಉತ್ಸವ ಕಾರ್ಯಕ್ರಮ ಆಯೋಜನೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಐತಿಹಾಸಿಕ ನಗರಗಳಾದ ಬಾದಾಮಿ, ಪಟ್ಟದಕಲ್ಲ ಹಾಗೂ ಐಹೊಳೆಯಲ್ಲಿ ತಲಾ ಒಂದು ದಿನ ಸೇರಿ ಒಟ್ಟು ಮೂರು ದಿನಗಳ ಕಾಲ ಉತ್ಸವ ನಡೆಯಲಿದ್ದು, ನವೆಂಬರ ತಿಂಗಳಲ್ಲಿ ಮುಖ್ಯಮಂತ್ರಿಗಳು ಗೊತ್ತುಪಡಿಸಿದ ದಿನಾಂಕದಂದು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮ ಆಯೋಜನೆಗೆ ತಗಲುವ ಅಂದಾಜು ವೆಚ್ಚವನ್ನು ನಿರ್ಧರಿಸಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಂಟಿಯಾಗಿ ಸಭೆ ನಡೆಸಬೇಕೆಂದು ತಿಳಿಸಿದ ಸಚಿವರು, ಸರಕಾರ ಪ್ರಸಕ್ತ ಬಜೆಟ್‌ನಲ್ಲಿ ಚಾಲುಕ್ಯ ಉತ್ಸವವನ್ನು ನೃತ್ಯೋತ್ಸವ ರೂಪದಲ್ಲಿ ಆಯೋಜಿಸಲು 2 ಕೋಟಿ ರೂ.ಗಳ ಅನುದಾನ ಮೀಸಲಿಟ್ಟಿದೆ. ಸರಕಾರಕ್ಕೆ ಇನ್ನು ಹೆಚ್ಚುವರಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಬಿಡುಗಡೆಗೆ ಕ್ರಮವಹಿಸಲಾಗುತ್ತದೆ ಎಂದರು.

ಮೂರು ದಿನಗಳ ಕಾರ್ಯಕ್ರಮದ ಅಂದಾಜು ವೆಚ್ಚದ ಪಟ್ಟಿಯನ್ನು ತಯಾರಿಸಲು ತಿಳಿಸಿದ ಸಚಿವರು ವಿವಿಧ ಮೂಲಗಳಿಂದ ಸಂಪನ್ಮೂಲ ಕ್ರೋಡಿಕರಿಸುವ ಕಾರ್ಯವಾಗಬೇಕು. ಜಿಲ್ಲಾ ಪ್ರವಾಸೋದ್ಯಮ, ಚಾಲುಕ್ಯ ಅಭಿವೃದ್ದಿ ಪ್ರಾಧಿಕಾರದಿಂದ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕಾರ್ಯಕ್ರಮದ ರೂಪುರೇಷೆಗಳನ್ನು ಹಾಕಿಕೊಳ್ಳಲು ತಿಳಿಸಿದ ಆರ್.ಬಿ.ತಿಮ್ಮಾಪೂರ, ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಸಲು ವಿವಿಧ ಸಮಿತಿಗಳನ್ನು ರಚಿಸಲು ಸೂಚಿಸಿದರು. ಉತ್ಸವದಲ್ಲಿ ನಾಡಿನ ಕಲೆ, ಸಂಸ್ಕೃತಿಯನ್ನು ಬಿಂಬಿಸುವಂತಹ ಕಾರ್ಯಕ್ರಮಗಳನ್ನು ಆಯೋಜನೆ ಮಾಡಬೇಕು. ಸ್ಥಳೀಯ ಕಲಾವಿದರಿಗೆ ಶೇ.50 ಹಾಗೂ ಬೇರೆ ರಾಜ್ಯ, ರಾಷ್ಟ್ರದ ಕಲಾವಿದರಿಗೆ ಶೇ.50 ರಷ್ಟು ಅವಕಾಶ ಕಲ್ಪಿಸುವ ರೀತಿಯಲ್ಲಿ ಕಾರ್ಯಕ್ರಮ ಆಯೋಜನೆ ಮಾಡಬೇಕೆಂದರು.

ಅಂತರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಗಳಿಸಿರುವ ಚಾಲುಕ್ಯರ ಐತಿಹಾಸಿಕ ಪರಂಪರೆ, ಕಲೆ, ಸಾಹಿತ್ಯ, ಸಂಸ್ಕೃತಿಯನ್ನು ಮೆಲಕು ಹಾಕುವ ಈ ಮೂರು ದಿನಗಳ ಸಂಗೀತ ನೃತ್ಯೋತ್ಸವಕ್ಕೆ ರಾಷ್ಟ್ರ–ಅಂತರಾಷ್ಟ್ರೀಯ ಮಟ್ಟದ ಖ್ಯಾತ ಕಲಾವಿದರು, ಸಂಗೀತಗಾರರು, ನೃತ್ಯ ತಂಡಗಳನ್ನು ಕರೆಯಿಸುವದಲ್ಲದೇ ಚಾಲುಕ್ಯರ ನಾಡಿನ ಐತಿಹಾಸಿಕ ಪರಂಪರೆ ಕುರಿತ ವಿಚಾರಗೋಷ್ಠಿ, ಗ್ರಾಮೀಣ ಕ್ರೀಡಾಕೂಟಗಳನ್ನು ಆಯೋಜಿಸಲು ಸೂಚಿಸಿದರು. ಅಲ್ಲದೇ ಮೂರು ಕಡೆಗಳಲ್ಲಿ ಪ್ರತ್ಯೇಕ ಕಾರ್ಯಕ್ರಮಗಳನ್ನು ರೂಪಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಬಾಗಲಕೋಟೆ ಶಾಸಕ ಎಚ್.ವಾಯ್.ಮೇಟಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೈನಿಕರ ಸೇವೆ ಅವಿಸ್ಮರಣೀಯ–ಗಾಯಕವಾಡ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,ಸೆ.8–

ದೇಶ ರಕ್ಷಣೆಯ ಜವಾಬ್ದಾರಿ ನಿಭಾಯಿಸುತ್ತಿರುವ ಯೋಧರ ಸೇವೆ, ತ್ಯಾಗ ಸ್ಮರಣೀಯವಾದುದು ಎಂದು ರಬಕವಿ–ಬನಹಟ್ಟಿಯ ಸಾಮಾಜಿಕ ಕಾರ್ಯಕರ್ತ ಶಿವಾನಂದ ಗಾಯಕವಾಡ ಹೇಳಿದರು.

ತಾಲೂಕಿನ ಶಿರೂರ ಪಟ್ಟಣದ ವೀರಸಾವರಕರ ಹಿಂದೂ ಮಹಾಗಣಪತಿ ವಿಸರ್ಜನೆಯ ಸಂದರ್ಭದಲ್ಲಿ ಜರುಗಿದ ಧರ್ಮಸಭೆಯಲ್ಲಿ ಮಾತನಾಡಿದ ಅವರು, ಇಂದಿನ ಯುವಕರು ಸಹ ದೇಶದ ಬಗ್ಗೆ ಅಭಿಮಾನ ಹೊಂದಿ ಸಾಮಾಜಿಕ ಜವಾಬ್ದಾರಿ ನಿಭಾಯಿಸಲು ಮುಂದಾಗಬೇಕು ಎಂದರು.

ಪ್ರತಿಯೊಬ್ಬ ಯುವಕರು ರಾಷ್ಟ್ರಭಕ್ತಿ ಬೆಳೆಸಿಕೊಂಡು ಸಂಸ್ಕಾರವಂತರಾಗಿ ನಮ್ಮ ಸಂಸ್ಕೃತಿ, ಪರಂಪರೆಯನ್ನು ಉಳಿಸಿ ಮುಂದುವರೆಸಿಕೊಂಡು ಹೋಗಬೇಕು ಎಂದ ಗಾಯಕವಾಡ, ದೇಶಭಕ್ತ ಯೋಧರನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.


ಸಾನಿಧ್ಯ ವಹಿಸಿದ್ದ ಸ್ಥಳೀಯ ಶಿವಯೋಗಾಶ್ರಮದ ಮರಿಮಹಾಂತ ಚನ್ನವೀರ ದೇವರು ಮಾತನಾಡಿ, ವಿವಿಧತೆಯಲ್ಲಿ ಏಕತೆಯನ್ನು ಹೊಂದಿದ ನಮ್ಮ ದೇಶದ ಇತಿಹಾಸವನ್ನು ಯುವ ಜನಾಂಗ ಅರಿತು ಜವಾಬ್ದಾರಿಯುತ ನಾಗರಿಕರಾಗಿ ಬದುಕಬೇಕು ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಯೋಧರು ಹಾಗೂ ಆಪರೇಷನ್ ಸಿಂಧೂರದಲ್ಲಿ ಭಾಗವಹಿಸಿದ್ದ ಯೋಧರನ್ನು ಸನ್ಮಾನಿಸಲಾಯಿತು. ಸೇಡಂ ಷಡಕ್ಷರಿ ದೇವರು, ಮಾಜಿ ಯೋಧ ಹನಮಂತ ರೋಣಿಹಾಳ ಇದ್ದರು.


# ಹೆಸರು ಬದಲಾವಣೆ

ನಾನು ನಾಗಯ್ಯ ತಂದೆ ಶಿವಕುಮಾರ ಕೋರಿಕಾಂತಿ ಮಠ ಹುಡಗಿ ಹಿರೇಮಠದ ಪೀಠಾಧಿಪತಿಯಾಗಿ ನೂತನ ಉತ್ತರಾಧಿಕಾರಿಗಳಾಗಿ ಸೇವೆ ಸಲ್ಲಿಸುತ್ತಿದ್ದು, ರಂಭಾಪುರಿ ಶ್ರೀಗಳ ನನ್ನ ಗುರುಗಳ ಹಾಗೂ ಊರಿನ ಭಕ್ತಾಧಿಗಳ ಇಚ್ಛೆಯಂತೆ ನಾನು ಈಗ ನನ್ನ ಹೆಸರು ಷ.ಬ್ರ.ಸೋಮೇಶ್ವರ ಶಿವಾಚಾರ್ಯ ಪೀಠಾಧಿಪತಿಯಾಗಿ ನನ್ನ ಹೆಸರು ಬದಲಾವಣೆ ಮಾಡಿಕೊಂಡಿರುತ್ತೇನೆ ಎಂದು ತಿಳಿಸಿರುತ್ತಾರೆ.

# ಮಾನಸಿಕ ಸಮತೋಲಕ್ಕಾಗಿ ಪಠ್ಯದ ಜೊತೆಗೆ ಆಟ ಅಗತ್ಯ:ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.8:ಸರ್ವಾಂಗೀಣವಿಕಾಸಕ್ಕಾಗಿ ಮತ್ತು ಮಾನಸಿಕ ಸಮತೋಲಕ್ಕಾಗಿ ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಆಟಗಳಲ್ಲಿ ಭಾಗವಹಿಸುವುದು ಅಗತ್ಯ ಎಂದು ಅರಣ್ಯ,ಪರಿಸರ ಜೀವಿಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಟಪದಲ್ಲಿ ಶಾಲಾ ಶಿಕ್ಷಣ ಇಲಾಖೆ ಪದವಿ ಪೂರ್ವ ಬೀದರ,ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿ ಹಾಗೂ ಶ್ರೀ ಸಂಗಮೇಶ್ವರ ಪಪೂ ಕಾಲೇಜು ಭಾಲ್ಕಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ 2025–26ನೇ ಸಾಲಿನ ತಾಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳ ಕ್ರೀಡಾ–ಕೂಟ ಉದ್ಘಾಟಿಸಿ ಮಾತನಾಡಿದರು.

ಅಂದಿನ ಕಾಲಕ್ಕಿಂತ ಇಂದಿನ ಕಾಲದಲ್ಲಿ ಕ್ರೀಡೆಗಳಿಗೆ ಹೆಚ್ಚಿನ ಮಹತ್ವ ದೊರೆಯುತ್ತಿದೆ.ಕೃತ್ರಿಮ ಬುದ್ದಿಮತೆ (ಎಆಯ್)ಓದುವಿಕೆ ಕುಗ್ಗಿಸುತ್ತಿದೆ. ಯುವ ಶಕ್ತಿ ಅಣು ಶಕ್ತಿಗಿಂತ ಬಲಿಷ್ಠವಾಗಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿ ದೇಶದ ಕೀರ್ತಿ ಹೆಚ್ಚಿಸಲು ಯುವಕರು ವಿವಿಧ ಕ್ರೀಡೆಗಳಲ್ಲಿ ಆಸಕ್ತಿಯಿಂದಭಾಗವಹಿಸಬೇಕು.ಸೋಲೇ ಗೆಲುವಿನ ಸೋಪಾನವಾಗಿರುತ್ತದೆ. ಯುವಕರುದುಶ್ಚಟ–ದುರ್ಗುಣಗಳಿಂದ ದೂರವಿದ್ದು ಆದರ್ಶ ಜೀವನ ರೂಪಿಸಿಕೊಳ್ಳಬೇಕು. ಪರಿಸರ ಮಾಲಿನ್ಯ ತಡಗಟ್ಟಲು ಗಿಡ–ಮರ ಬೆಳೆಸುವುದು ಅಗತ್ಯ ಎಂದು ಹೇಳಿದರು.ಶ್ರೀ ಮಹಾಲಿಂಗ ದೇವರು ಸಾನಿಧ್ಯ ವಹಿಸಿದ್ದರು.ಡಿಡಿಪಿಯು ಚಂದ್ರಕಾಂತ ಶಾಹಾಬಾದಕರ್ ಕ್ರೀಡಾ ಧ್ವಜಾರೋಹಣ ನೆರವೇರಿಸಿದರು. ಹಿರೇಮಠವಿದ್ಯಾಪೀಠದಆಡಳಿತಾಧಿಕಾರಿ ಮೋಹನರೆಡ್ಡಿ ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ಪುರಸಭೆ ಅಧ್ಯಕ್ಷ ಶಶಿಕಲಾ ಅಶೋಕ ,ಉಪಾಧ್ಯಕ್ಷ ವಿಜಯಕುಮಾರ ರಾಜಭವನ,ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೊಡೆ, ತಾಲೂಕು ಅಧ್ಯಕ್ಷ ಹಣಮಂತರಾವ ಚವ್ಹಾಣ, ಡಿಎಸ್ಪಿ ಶಿವಾನಂದ ಪಾಡಶೆಟ್ಟಿ,ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಶಶಿಧರ ಕೋಸಂಬೆ,ಉದ್ಯಮಿ ವಿಲಾಸ ಬಕ್ಕಾ, ಧನರಾಜ ಬಂಬಳಗೆ,ಪ್ರಾಚಾರ್ಯರಾದ ಜೈಕಾಂತ ಗಂಗೋಜಿ,ಸುಖದೇವ ಬಿರಾದಾರ, ಬಾಲಾಜಿ ವಾಡೇಕರ್ ಸೇರಿದಂತೆ ಕ್ರೀಡಾಪಟುಗಳು ಉಪಸ್ಥಿತರಿದ್ದರು.

ಗುರುಕುಲ ಪಿಯು ಕಾಲೇಜು ಪ್ರಾಚಾರ್ಯ ಬಸವರಾಜ ಮೋಳಕಿರೆ ಪ್ರಾಸ್ತಾವಿಕ ಮಾತನಾಡಿದರು.

ಶ್ರೀ ಸಂಗಮೇಶ್ವರ ಪಪೂ ಕಾಲೇಜು ಪ್ರಾಚಾರ್ಯ ಪ್ರವೀಣ ಹಿರೇಮಠ ಸ್ವಾಗತಿಸಿದರು.

ಮದನಗಾಂವಕರ್ ನಿರೂಪಿಸಿದರು. ದೈಹಿಕ ಶಿಕ್ಷಕ ಅನೀಲ ಪಾಟೀಲ್ ವಂದಿಸಿದರು.

'ಕ್ರೀಡಾಪಟುಗಳಿಗೆ ಬೇಕಾಗುವ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸದಾ ಸಿದ್ಧ.ಭಾಲ್ಕಿ ಪಟ್ಟಣದ ಟೆಕಡಿ ಹತ್ತಿರ ರೂ.16 ಕೊ.ವೆಚ್ಚದಲ್ಲಿ 18 ಎಕರೆ ಭೂಮಿಯಲ್ಲಿ ಸಕಲ ಆಧುನಿಕ ಸೌಲಭ್ಯವುಳ್ಳ ಕ್ರೀಡಾಂಗಣ ನಿರ್ಮಿಸಿ ಒಂದು ವರ್ಷದಲ್ಲಿ ಲೋಕಾರ್ಪಣೆಗೊಳಿಸಲು ಈಗಾಗಲೇ ಭೂಮಿ ಪೂಜೆ ನೆರವೇರಿಸಲಾಗಿದೆ.

ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಬೀದರ.

# ವಿಶ್ವ ರೇಬೀಸ್ ದಿನ ಆಚರಣೆ




ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 08 :ಪ್ರಸ್ತುತ ವಿಷಯಕ್ಕೆ ಸಂಬಂಧಿಸಿದಂತೆ, ಬೀದರನ ಪಶುವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,ಬೀದರ ಇವುಗಳ ಸಂಯುಕ್ತಾಶ್ರದಲ್ಲಿ ದಿನಾಂಕ 08–09–2025ರಂದು ನಂದಿನಗರ ಆವರಣದ ಹೆಲ್ತ್ ಸೆಂಟರ್‌ನಲ್ಲಿ ವಿಶ್ವ ರೇಬೀಸ್ ದಿನಾಚರಣೆಯ ಅಂಗವಾಗಿ "ಉಚಿತ ರೇಬೀಸ್ ಲಸಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಯಿತು.ಡಾ.ಎಮ್.ಕೆ. ತಾಂದಳೆ,ಡೀನ್,ಪಶುವೈದ್ಯಕೀಯ ಮಹಾವಿದ್ಯಾಲಯ,ಬೀದರ ಇವರು ಪ್ರಥಮ ಹಂತದ ಉಚಿತ ರೇಬೀಸ್ ಲಸಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಅಹ್ಮದ್ದೊದ್ದೀನ್,ಡಾ. ಇಮಾನ್ಯುಲ್ ಕೊಡ್ಡಿಕರ್ ಮತ್ತು ಡಾ. ಅಂಬದಾಸ್ ಇವರು ಕಾರ್ಯಕ್ರಮದಲ್ಲಿ ಹಾಜರಾಗಿ, ಸ್ನಾತಕ ಮತ್ತು ಸ್ನಾತ–ಕೋತ್ತರ 126 ವಿದ್ಯಾರ್ಥಿಗಳಿಗೆ ಮತ್ತು 10 ಸಿಬ್ಬಂದಿಗಳಿಗೆ ಉಚಿತ ರೇಬೀಸ್ ಲಸಿಕೆಗಳನ್ನು (Pre Exposure Prophylaxis) ನೀಡಲಾಯಿತು. ಅಲ್ಲದೇ ದಿನಾಂಕ 15–09–2025 ಮತ್ತು 22–09–2025 ಅನುಕ್ರಮವಾಗಿ ಎರಡನೇ ಮತ್ತು ಮೂರನೇ ಹಂತದ ಉಚಿತ ರೇಬೀಸ್ ಲಸಿಕಾ ಕಾರ್ಯಕ್ರಮಗಳು ಹಮ್ಮಿಕೊಳ್ಳಲು ನಿಶ್ಚಯಿಸಲಾಗಿದೆ. ಡಾ. ಭಗವಂತಪ್ಪ,ಡಾ. ಮಲ್ಲಿನಾಥ, ಡಾ. ಸವಿತಾ ಆರ್ ಕೆ ಕಾರ್ಯಕ್ರಮ ಆಯೋಜಿಸಿದರು,ಆವರಣದ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿಗಳು ಹಾಜರಾಗಿದ್ದರು.

# ಅತ್ಯಾಚಾರಿಗಳಿಗೆ ಗಲ್ಲು ಶಿಕ್ಷೆ ವಿಧಿಸಿ



ಬೀದರ. ಸೆ. 08 : ಜಿಲ್ಲೆಯಲ್ಲಿ ಅಪ್ರಾಪ್ತ ಬಾಲಕಿಯರ ಮೇಲೆ ಅತ್ಯಾಚಾರ ಎಸಗಿದ ಆರೋಪಿಗಳಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಎಂದು ನಮ್ಮ ಕರ್ನಾಟಕ ಸೇನೆಯ ಜಿಲ್ಲಾ ಘಟಕ ಒತ್ತಾಯಿಸಿದೆ.

ಸೇನೆಯ ಪದಾಧಿಕಾರಿಗಳು ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಅವರ ನೇತೃತ್ವದಲ್ಲಿ ನಗರದಲ್ಲಿ ಸೋಮವಾರ ರಾಷ್ಟ್ರಪತಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿ ಕಚೇರಿ ಅಧಿಕಾರಿಗೆ ಸಲ್ಲಿಸಿದರು.

ಅಪ್ರಾಪ್ತರ ಮೇಲಿನ ಅತ್ಯಾಚಾರ ಘಟನೆಗಳು ಕಳವಳಕಾರಿಯಾಗಿವೆ ಎಂದು ಗಣೇಶ ಪಾಟೀಲ ಹೇಳಿದರು.

ಅತ್ಯಾಚಾರಿಗಳನ್ನು ಗಲ್ಲು ಶಿಕ್ಷೆಗೆ ಗುರಿಪಡಿಸಬೇಕು. ಭವಿಷ್ಯದಲ್ಲಿ ಇಂಥ ಘಟನೆಗಳು ನಡೆಯದಂತೆ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಸೇನೆಯ ಜಿಲ್ಲಾ ಘಟಕದ ಉಪಾಧ್ಯಕ್ಷ ರಾಜಕುಮಾರ ಪಾಟೀಲ, ಪ್ರಧಾನ ಕಾರ್ಯದರ್ಶಿ ಸಂಜು ಯಾದವ್, ಪ್ರಧಾನ ಸಂಚಾಲಕ ಸುಧಾಕರ್ ರಾಠೋಡ್, ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ಅನಿಲ್ ರಾಜ–ಗೀರಾ, ನಗರ ಘಟಕದ ಅಧ್ಯಕ್ಷ ಸಂತೋಷ್ ಪಾಟೀಲ,ಪ್ರಮುಖರಾದ ರಾಜಕುಮಾರ ಸ್ವಾಮಿ, ಸಂತೋಷ ಮಳಚಾಪುರೆ, ಸುದೀಪ್ ತೂಗಾವೆ, ಶಶಿಕಾಂತ ಅಷ್ಟೂರೆ, ಸಾಯಿ ಕಿರಣ, ಸಂದೀಪ್ ಪಾಟೀಲ, ಬಸವರಾಜ ದಾನಾ ಮತ್ತಿತರರು ಇದ್ದರು.

# ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸೋಣ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಬೀದರ,ಸೆ.08:ಪ್ರತಿ ವರ್ಷದಂತೆ ಈ ವರ್ಷವು ಸೆಪ್ಟೆಂಬರ್ 17ರಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಎಲ್ಲರೂ ಸೇರಿ ಅರ್ಥಪೂರ್ಣವಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಹಿಸಿದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದರು. ಸೆಪ್ಟೆಂಬರ್ 17 ಬೆಳಿಗ್ಗೆ 7:45 ಗಂಟೆಗೆ ಎಲ್ಲಾ ಸರಕಾರಿ ಹಾಗೂ ಅರೆ ಸರಕಾರಿ ಕಛೇರಿ ಮತ್ತು ಶಾಲಾ– ಕಾಲೇಜುಗಳಲ್ಲಿ ಧ್ವಜಾರೋಹಣ ನೆರವೇರಿಸಬೇಕು. 8:15 ಗಂಟೆಗೆ ಬಸವೇಶ್ವರ ವೃತ್ತದಿಂದ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಭಾವಚಿತ್ರದೊಂದಿಗೆ ಮೆರವಣಿಗೆಯು ಭಗತ್ ಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಜನರಲ್ ಕಾರಿಯಪ್ಪ ವೃತ್ತದಿಂದ ನಗರದ ಜಿಲ್ಲಾ ನೆಹರು ಕ್ರೀಡಾಂಗಣ ಬಂದು ಸೇರಿ 9 ಗಂಟೆಗೆ ಕ್ರೀಡಾಂಗಣದಲ್ಲಿ ಧ್ವಜಾರೋಹಣ ಇರುತ್ತದೆ.ಸೆಪ್ಟೆಂಬರ್ 16 ಮತ್ತು 17 ರಂದು ಎಲ್ಲಾ ಸರಕಾರಿ ಕಛೇರಿಗಳ ಮೇಲೆ ದೀಪಾಲಂಕಾರ ಮಾಡಬೇಕೆಂದು ಹೇಳಿದರು.

ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸಲು ಅದಕ್ಕಾಗಿ ಒಂದು ಸಮಿತಿಯನ್ನು ರಚಿಸಲಾಗಿದೆ. ಲೋಕೋಪಯೋಗಿ ಇಲಾಖೆಯವರು ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಮಳೆಯಿಂದ ಸಮಸ್ಯೆ ಆಗದಂತೆ ಮತ್ತು ವೇದಿಕೆಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದರು. ನಗರಸಭೆ ವತಿಯಿಂದ ಸ್ವಚ್ಚತೆ ಮತ್ತು ಮೂಲಭೂತ ಸೌಕರ್ಯಗಳು ಇರುವಂತೆ ನೋಡಿಕೊಳ್ಳಬೇಕು. ಶಿಕ್ಷಣ ಇಲಾಖೆ ವತಿಯಿಂದ ಕಲ್ಯಾಣ ಕರ್ನಾಟಕ ವಿಮೋಚನೆಗೆ ಸಂಬಂಧಿಸಿದಂತೆ ಪ್ರಬಂಧ, ನಿಬಂಧ, ಭಾಷಣ, ವೇಷಭೂಷಣ ಸ್ಪರ್ದೆಗಳನ್ನು ಶಾಲಾ–ಕಾಲೇಜುಗಳಲ್ಲಿ ಏರ್ಪಡಿಸುವುದರ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡಬೇಕೆಂದು ಹೇಳಿದರು.

ಪ್ರೊ. ಜಗನ್ನಾಥ ಹೆಬ್ಬಾಳೆ ಹಾಗೂ ವಿವಿಧ ಸಂಘಸಂಸ್ಥೆಗಳ ಪದಾಧಿಕಾರಿಗಳು ದಿನಾಚರಣೆಗೆ ಸಂಬಂಧಿಸಿದಂತೆ ವಿವಿಧ ಸಲಹೆಗಳನ್ನು ನೀಡಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ.ಕರಾಳೆ, ಬೀದರ ಸಹಾಯಕ ಆಯುಕ್ತ ಎಂ.ಡಿ.ಶಕೀಲ್ , ನಗರಸಭೆ ಆಯುಕ್ತ ಶಿವರಾಜ ರಾಥೋಡ್, ಡಿ.ಯ್.ಎಸ್.ಪಿ ಶಿವನಗೌಡ ಪಾಟೀಲ, ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಸೇರಿದಂತೆ ಇತರೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಶಿಕ್ಷಕರ ದಿನಾಚರಣೆ- ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ



ಕಲಬುರಗಿ:ಸೆ.8:ಶಿಕ್ಷಣವು ಹಲವರ ಬದುಕು,ಕುಟುಂಬಗಳು,ಸಮಾಜಗಳು ಹಾಗೂ ರಾಷ್ಟ್ರಗಳನ್ನು ಬದಲಿಸಿದೆ. ಶಿಕ್ಷಣ ಹಾಗೂ ಗುಣಮಟ್ಟದ ಸಮಯ ನಾವು ಮಕ್ಕಳಿಗೆ ಕೊಡಬಹುದಾದ ಶ್ರೇಷ್ಠ ಸಂಪತ್ತಾಗಿವೆ' ಎಂದು ನಗರ ಪೊಲೀಸ್ ಕಮಿಷನರ್ ಶರಣಪ್ಪ ಎಸ್.ಡಿ ಹೇಳಿದರು.

ನಗರದ ಎಂಆರ್‌ಎಂಸಿ ಸ್ಯಾಕ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಾಧ್ಯಮಿಕ ಶಿಕ್ಷಕರ ಸಂಘ ಬೆಂಗಳೂರು ಹಾಗೂ ಕಲಬುರಗಿ ಜಿಲ್ಲಾ ಘಟಕದಿಂದ ಹಮ್ಮಿಕೊಂಡಿದ್ದ ಶಿಕ್ಷಕರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರಸಕ್ತ ಸಮಾಜದಲ್ಲಿ ಮಕ್ಕಳು ಹಲವು ಬಗೆಗೆ ಚಿತ್ತಭಂಗಗಳನ್ನು ಎದು–ರಿಸುತ್ತಿದ್ದಾರೆ. ಮೊಬೈಲ್ ಫೋನ್,ಗೆಳೆಯರ ಒತ್ತಡ, ಪಾಲಕರ ಒತ್ತಡ, ಶಿಕ್ಷಣ ಸಂಸ್ಥೆಗಳ ಒತ್ತಡ ಹಾಗೂ ಪಾಲಕರು–ಶೈಕ್ಷಣಿಕ ಸಂಸ್ಥೆಗಳ ಎಂದೂ ಮುಗಿಯದ ಬೇಡಿಕೆ–ನಿರೀಕ್ಷೆಗಳ ವರ್ತುಲದಲ್ಲಿ ಸಿಲುಕಿದ್ದಾರೆ. ಅಂಕಗಳು ಹಾಗೂ ಪದವಿಗಳು ಯಾರೊಬ್ಬರ ನಿರ್ಧರಿತ ಭವಿಷ್ಯ ರೂಪಿಸಲಾರವು.

ಶಿಕ್ಷಣ ಅಂದರೆ ಬರೀ ಅಂಕಗಳಲ್ಲ. ಅದು ವ್ಯಕ್ತಿಯೊಬ್ಬರ ಸಮಗ್ರ ಅಭಿವೃ–ದ್ಧಿಯಾಗಿದೆ. ಒಬ್ಬರಲ್ಲಿ ಧೈರ್ಯ ಬೆಳೆಸಿ, ಆತ್ಮವಿಶ್ವಾಸ ವೃದ್ಧಿಸಿ, ವ್ಯಕ್ತಿತ್ವ ನಿರ್ಮಿಸಿ ಸಮಾಜಕ್ಕಾಗಿ ಅವರನ್ನು ಸಜ್ಜುಗೊಳಿ–ಸುವುದೇ ಶಿಕ್ಷಣವಾಗಿದೆ. ಶಿಸ್ತು ಹಾಗೂ ಪ್ರಾಮಾಣಿಕತೆ ಯಶಸ್ಸು ತಂದುಕೊಡಬಲ್ಲ ಸಾಧನಗಳು' ಎಂದು ಪ್ರತಿಪಾದಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಆಗಲಿ, ಎಪಿಜೆ ಅಬ್ದುಲ್ ಕಲಾಂ ಅವರಾಗಲಿ ನಮ್ಮ ನಿಮ್ಮಂತೆಯೇ ಬದುಕಿದವರು. ಆದರೆ, ಶಿಕ್ಷಣ ಅವರನ್ನು ಅಮರರ–ನ್ನಾಗಿಸಿದೆ. ಸಮಾಜಕ್ಕೆ ಸತ್ಪಜೆಗಳನ್ನು ರೂಪಿಸುವಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾದದ್ದು. ಪ್ರತಿಯೊಬ್ಬರು ಶಿಕ್ಷಕರೂ ನಡೆ–ನುಡಿ, ಬೋಧನೆ–ಜ್ಞಾನದ ಮೂಲಕ ಮಕ್ಕಳ ಮೇಲೆ ಶಾಶ್ವತವಾದ ಪ್ರಭಾವಬೀರುತ್ತಾರೆ ಎಂದರು.

ಹಲವು ವರ್ಷ ಗಳಿಂದ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳು ಕೊನೆಯ ಸ್ಥಾನಗಳಲ್ಲೇ ಇರುತ್ತವೆ. ಅದನ್ನು ಯಾರು ಬದಲಿಸಬೇಕು? ಶಿಕ್ಷಕರು, ಶಿಕ್ಷಣ ಸಂಸ್ಥೆಗಳು, ಪಾಲಕರು ಹಾಗೂ ವಿದ್ಯಾರ್ಥಿಗಳು... ಎಲ್ಲರೂ ಸೇರಿ ಕೈಜೋಡಿಸಿದಾಗ ಫಲಿತಾಂಶ ಬದಲಿಸುವುದು ಅಸಾಧ್ಯವಲ್ಲ' ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಮಾತನಾಡಿದರು. ಪ್ರತಿಭಾನ್ವಿತ ವಿದ್ಯಾ–ರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಾಯಿತು. ಯಡ್ರಾಮಿಯ ಸಿದ್ದಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಕರ್ನಾಟಕ ಕೇಂದ್ರೀಯ ವಿ.ವಿ ಸಹ ಪ್ರಾಧ್ಯಾಪಕ ಗಣಪತಿ ಸಿನ್ನೂರ ಉಪನ್ಯಾಸ ನೀಡಿದ ಅವರು ವಿದ್ಯಾರ್ಥಿಗಳು ಅಂಕದ ಬೆನ್ನು ಹತ್ತದೇ ಜ್ಞಾನದ ಬೆನ್ನು ಹತ್ತಬೇಕು ದೊಡ್ಡ ಕಂಪನಿಯಲ್ಲಿ ಸಿಗುವ ಉದ್ಯೋಗವನ್ನು ಯಶಸ್ವಿಯಾಗಿ ನಿಭಾಯಿಸಲು ಮಕ್ಕಳು ಬಹುಆಯಾಮದಲ್ಲಿ ಬೆಳೆಯಬೇಕಿದೆ' ಎಂದು ಹೇಳಿದರು.

ಅಂಕಗಳೊಂದಿಗೆ ಮೌಲ್ಯಾಧಾರಿತ ಶಿಕ್ಷಣಕ್ಕೆ ಒತ್ತು ನೀಡಬೇಕಿದೆ. ಸಾಧಿಸುವ ಛಲದಲ್ಲಿ ಶಾರ್ಟ್‌ಕಟ್ (ಅಡ್ಡದಾರಿ) ಬಳಸಿದರೆ, ಅದು ಪತನಕ್ಕೆ ಕಾರಣವಾಗುತ್ತದೆ. ಉದ್ಯೋಗ ಆಧಾರಿತ ಶಿಕ್ಷಣಕ್ಕಿಂತಲೂ ವ್ಯಕ್ತಿತ್ವ ರೂಪಿಸುವಂಥ ಶಿಕ್ಷಣಬೇಕಿದೆ. ಬದುಕಿನಲ್ಲಿ ಎದುರಾಗುವ ಸಮಸ್ಯೆ–ಸವಾಲುಗಳನ್ನು ಮೆಟ್ಟಿನಿಲ್ಲುವಂಥ ವ್ಯಕ್ತಿತ್ವವನ್ನು ಮಕ್ಕಳಲ್ಲಿ ಬೆಳೆಸಬೇಕಿದೆ.

ಪ್ರತಿಭಾನ್ವಿತ್ವ ವಿದ್ಯಾರ್ಥಿಗಳು ಬೆಳೆದು ಮೆಡಿಷಿನ್ ಕ್ಷೇತ್ರದಲ್ಲಿ ಭಾರತಕ್ಕೆ ನೊಬಲ್ ಪ್ರಶಸ್ತಿ ತರಲಿ ಎಂದು ಆಶಿಸಿದರು.

ಈಸಂದರ್ಭದಲ್ಲಿ ಎಬಿಎಆರ್‌ಎಸ್‌ಎಂ ಸಿಯುಕೆ ಘಟಕದ ಅಧ್ಯಕ್ಷ ಪ್ರೊ. ಚನ್ನವೀರ ಆರ್. ಎಂ., ಕರ್ನಾಟಕ ಮಾಧ್ಯಮಿಕ ಶಿಕ್ಷಕ ಸಂಘದ ರಾಜ್ಯ ಕಾರ್ಯದರ್ಶಿ ಮಹೇಶ ಬಸರ–ಕೋಡ, ಕಲಬುರಗಿ ವಿಭಾಗೀಯ ಪ್ರಮುಖ ಚಂದ್ರಶೇಖರ ಪಾಟೀಲ, ಸಂಘದ ಜಿಲ್ಲಾಧ್ಯಕ್ಷ ಸಂಜೀವಕುಮಾರ ಪಾಟೀಲ ಇದ್ದರು.

# ಪತ್ರಕರ್ತರ ತರಬೇತಿಗಾಗಿ ಇನ್‌ಫೋಸಿಸ್ ಸ್ಪಿಂಗ್‌ಬೋರ್ಡ್ ಕರ್ನಾಟಕ ಮಾಧ್ಯಮ ಅಕಾಡೆಮಿ ಒಡಂಬಡಿಕೆ



ಕಲಬುರಗಿ: ಸೆ. 8:ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ದೇಶದಲ್ಲಿಯೇ ಮೊದಲ ಬಾರಿಗೆ ಜಾಗತಿಕಮಟ್ಟದಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದ ದಿಗ್ಗಜ ಇನ್‌ಫೋಸಿಸ್‌ನ ಸ್ಪಿಂಗ್‌ಬೋರ್ಡ್ ಸಿಎಸ್‌ಆರ್ ಕಾರ್ಯಕ್ರಮದಡಿ ಸಹಭಾಗಿತ್ವಕ್ಕಾಗಿ ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರ ತರಬೇತಿಗಾಗಿ ಒಡಂಬಡಿಕೆ ಮಾಡಿಕೊಂಡಿದೆ.

ಪತ್ರಕರ್ತರ ಸಾಫ್ಟ್‌ಸ್ಕಿಲ್ ತರಬೇತಿಯ ಉದ್ದೇಶಕ್ಕಾಗಿ ಮಾಡಿಕೊಳ್ಳುತ್ತಿರುವ ಈ ಒಡಂಬಡಿಕೆಯು ಸಿ.ಎಸ್. ಆರ್. ಅಡಿ ಕರ್ನಾಟಕ ಮಾಧ್ಯಮ ಅಕಾಡೆಮಿ ಕೈಗೆತ್ತಿಕೊಂಡ ಮೊದಲ ಕಾರ್ಯಕ್ರಮವಾಗಿದೆ.

ಇನ್ಫೋಸಿಸ್ ಅಖಖ ಯೋಜನೆಯ "ಸ್ಪಿಂಗ್‌ಬೋರ್ಡ್"ಪ್ಲಾಟ್‌ಫಾರ್ಮ್ ಮೂಲಕ ಪತ್ರಕರ್ತರ ಡಿಜಿಟಲ್ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸಾಮರ್ಥ್ಯ ನಿರ್ಮಾಣ ಈ ಒಡಂಬಡಿಕೆಯ ಉದ್ದೇಶವಾಗಿದೆ.

"ಇನ್‌ಫೋಸಿಸ್ ಸ್ಪಿಂಗ್‌ಬೋರ್ಡ್ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಹಭಾಗಿತ್ವವು ಬದಲಾಗುತ್ತಿರುವ ಹೊಸ ಮಾಧ್ಯಮಕ್ಕೆ ಹೊಂದಿಕೊಳ್ಳುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ವಿನೂತನ ಪ್ಲಾಟ್‌ಫಾರಂ ಮಾಧ್ಯಮ ವೃತ್ತಿಪರರ ಕೌಶಲ್ಯ ಉನ್ನತೀಕರಣಕ್ಕೆ, ಅದರಲ್ಲೂ ವಿಶೇಷವಾಗಿ ಪತ್ರಕರ್ತರಿಗೆ ವೇಗವಾಗಿ ಬದಲಾಗುತ್ತಿರುವ ಸನ್ನಿವೇಶಗಳಿಗೆ ಅನುಗುಣವಾಗಿ ತಾಂತ್ರಿಕ ಪರಿಣತಿ ಹಾಗೂ ಸುದ್ದಿಯನ್ನು ಪ್ರಸ್ತುತಪಡಿಸುವ ಕೌಶಲವನ್ನು ಒದಗಿಸಲಿದೆ" ಎಂಬ ಆಶಯವನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಶ್ರೀಮತಿ ಆಯೇಶಾ ಖಾನಂ ಅವರು ವ್ಯಕ್ತಪಡಿಸಿದ್ದಾರೆ.

"ಇನ್‌ಫೋಸಿಸ್ ಸ್ಪಿಂಗ್‌ಬೋರ್ಡ್ ಶಿಕ್ಷಣ ಕುರಿತ ಸಿಎಸ್‌ಆರ್ ಕಾರ್ಯಕ್ರಮವಾಗಿದೆ. ಇಂದು ಇನ್‌ಫೋಸಿಸ್ ಸ್ಪಿಂಗ್‌ಬೋರ್ಡ್ ಮಾಧ್ಯಮ ಅಕಾಡೆಮಿಯೊಂದಿಗೆ ಒಡಂಬಡಿಕೆಗೆ ಸಹಿ ಹಾಕಿದೆ. ಮಾಧ್ಯಮ ಅಕಾಡೆಮಿಗೆ ಸ್ಪಿಂಗ್‌ಬೋರ್ಡ್‌ನ ಡಿಜಿಟಲ್ ವಿಷಯಗಳಿಗೆ ಪ್ರವೇಶ ಲಭಿಸಲಿದೆ ಮತ್ತು ಅವರು ಸಾಫ್ಟ್ ಸ್ಕಿಲ್ ಗಳು, ವ್ಯಕ್ತಿತ್ವ ವಿಕಾಸ ಹಾಗೂ ಕೃತಕ ಬುದ್ಧಿಮತ್ತೆ (ಂಖ) ಸೇರಿದಂತೆ ಇತ್ತೀಚಿನ ತಂತ್ರಜ್ಞಾನಗಳ ಅವಲೋಕನ ಕುರಿತ ವಿಷಯಗಳಿಂದ ಪ್ರಯೋಜನ ಪಡೆಯಬಹುದು. ಇದು ವಿಶೇಷವಾಗಿ 2ನೇ ಹಾಗೂ 3ನೇ ಹಂತದ ನಗರಗಳ ಪತ್ರಕರ್ತರಿಗೆ ಖಂಡಿತವಾಗಿಯೂ ಸಹಾಯಕವಾಗಲಿದೆ" ಎಂದು ಇನ್ಫೋಸಿಸ್ ನ ಹಿರಿಯ ಉಪಾಧ್ಯಕ್ಷ (ಇ ಟಿ ಎ) ಶ್ರೀ ಸತೀಶ ಬಿ. ನಂಜಪ್ಪ ಅವರು ಅಭಿಪ್ರಾಯ ಪಟ್ಟಿದ್ದಾರೆ.

ತರಬೇತಿ: ಇನ್‌ಫೋಸಿಸ್ ಸ್ಪಿಂಗ್‌ಬೋರ್ಡ್ ಕಾರ್ಯಕ್ರಮದಡಿ ಪತ್ರಕರ್ತರಿಗೆ ಮೂರು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಇದರಲ್ಲಿ ಡಿಜಿಟಲ್ ಮಾಧ್ಯಮಕ್ಕೆ ಅಗತ್ಯ ಕೌಶಲ್ಯಗಳು, ಕೃತಕ ಬುದ್ಧಿಮತ್ತೆಯ ಬಳಕೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಿಸಿದಂತೆ ತರಬೇತಿ ನೀಡಲಾಗುವುದು.

ಈ ವರ್ಷದಲ್ಲಿ ಒಟ್ಟು ಮೂರು ಕಾರ್ಯಕ್ರಮಗಳ ಮೂಲಕ ಒಟ್ಟು 150 ಪತ್ರಕರ್ತರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಇದರಲ್ಲಿ ವಿಶೇಷವಾಗಿ ಒಂದು ಬ್ಯಾಚ್‌ನಲ್ಲಿ ಮಹಿಳಾ ಆಯವ್ಯಯದಡಿ ಪತ್ರಕರ್ತೆಯರಿಗೆ ತರಬೇತಿ ನೀಡಲು ಉದ್ದೇಶಿಸಿದೆ.

ಜಿಲ್ಲಾ ಮಟ್ಟದ ಪತ್ರಕರ್ತರಿಗೆ ಈ ತರಬೇತಿಯಲ್ಲಿ ಆದ್ಯತೆ ನೀಡಲಾಗುವುದು.

ಇನ್ಫೋಸಿಸ್ ಸಂಸ್ಥೆಯು ಪ್ಲಾಟ್‌ಫಾರ್ಮ್ ಮತ್ತು ಪರಿಣತಿ ಒದಗಿಸಲಿದೆ. ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರು ಹಾಗೂ ಶಿಕ್ಷಕರ ಭಾಗವಹಿಸುವಿಕೆ ಸಮನ್ವಯಗೊಳಿಸಲಿದೆ.

ಪತ್ರಿಕೋದ್ಯಮಕ್ಷೇತ್ರದಲ್ಲಿ ಗುಣಮಟ್ಟದ ಸುಧಾರಣೆಯ ನಿಟ್ಟಿನಲ್ಲಿ ಇದೊಂದು ಮಹತ್ವದ ಉಪಕ್ರಮವಾಗಿದೆ. ಹೆಚ್ಚು ಪತ್ರಕರ್ತರಿಗೆ ತರಬೇತಿ ನೀಡುವ ಆಶಯದೊಂದಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿಯು ಮುಂದಡಿಯಿಟ್ಟಿದೆ.

ಮಾಧ್ಯಮ ಅಕಾಡೆಮಿ ಅಧ್ಯ–ಕ್ಷೆ ಆಯೇಶಾ ಖಾನಂ, ಸದಸ್ಯ ಹೆಚ್.ವಿ. ಕಿರಣ್ ಇನ್‌ಫೋಸಿಸ್ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಸತೀಶ ಬಿ. ನಂಜಪ್ಪ, ಹಿರಿಯ ಅಧಿಕಾರಿಗಳಾದ ಸಂತೋಷ್ ಅನಂತಪುರ, ಬಿಳಿಗಿರಿ ರಂಗ ಮೊದಲಾದವರು ಉಪಸ್ಥಿತರಿದ್ದರು.

# ಕಲಬುರಗಿ ಜಿಲ್ಲೆಯಲ್ಲಿ ಬೆಳೆಹಾನಿ-ಸಮೀಕ್ಷೆ ನಡೆಸಿ ವರದಿ ನೀಡಲು ಮುಖ್ಯಮಂತ್ರಿ ಸೂಚನೆ



ಕಲಬುರಗಿ, ಸೆ 08: ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿಗಳ ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಜಿಲ್ಲೆಗಳಲ್ಲಿ ಅತಿವೃಷ್ಠಿಯಿಂದ ಹಾನಿಯಾಗಿರುವ ಬೆಳೆ ನಷ್ಟ ಸೇರಿದಂತೆ ಇತರೆ ನಷ್ಟಗಳ ಅಂದಾಜನ್ನು ಸಮೀಕ್ಷೆ ಮಾಡಿ 10 ದಿನಗಳಲ್ಲಿ ವರದಿ ಸಲ್ಲಿಸುವಂತೆ ಸೂಚಿಸಿದರು.

ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಕಲಬುರಗಿ ಜಿಲ್ಲೆಗೆ ಸಂಬಂಧಿಸಿದಂತೆ 2025ರ ಮುಂಗಾರು ಅವಧಿಯಲ್ಲಿ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಆಗಿರುವ ಹಾನಿ ಹಾಗೂ ತೆಗೆದುಕೊಂಡ ಕ್ರಮಗಳ ಕುರಿತು ಸಭೆಗೆ ಮಾಹಿತಿ ನೀಡಿದರು.

ಬೆಂಗಳೂರಿನ ಮುಖ್ಯಮಂತ್ರಿಗಳ ಕಚೇರಿಯಲ್ಲಿ ಮುಖ್ಯಮಂತ್ರಿಯವರೊಂದಿಗೆ ಸಭೆಯಲ್ಲಿ ಉಪಸ್ಥಿತರಿದ್ದ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಮಾತನಾಡಿ, ಕಲಬುರಗಿ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದಾಗಿರುವ ನಷ್ಟವನ್ನು ಸಮೀಕ್ಷೆ ಮಾಡಲು ತಕ್ಷಣದ ಕ್ರಮ ಕೈಗೊಳ್ಳುವಂತೆ ಕಲಬುರಗಿ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮುಂದುವರೆದು ಮಾತನಾಡಿದ ಸಚಿವರು ಕಲಬುರಗಿ ಜಿಲ್ಲೆಯಲ್ಲಿ ಈಗಾಗಲೆ ಪ್ರಾಥಮಿಕ ಜಂಟಿ ಸಮೀಕ್ಷೆ ಕಾರ್ಯ ಕೈಗೊಂಡಿ–ದ್ದು 2025ರ ಜನವರಿ ದಿಂದ ಆಗಸ್ಟ್‌ವರೆಗೆ 698.4 ಮೀ.ಮಿ. ಮಳೆ ಆಗಿದ್ದು, ಇದು ವಾಡಿಕೆ ಶೇ.49ರಷ್ಟು ಹೆಚ್ಚುವರಿ ಮಳೆ ಸುರಿದಿರುವುದು ವರದಿಯಾಗಿದೆ ಎಂದು ಸಭೆಯ ಗಮನಕ್ಕೆ ಮಾಹಿತಿ ನೀಡಿದರು.

ಆಗಸ್ಟ್ ಮಾಹೆಯಲ್ಲಿ ಜಿಲ್ಲೆಯಲ್ಲಿ ಶೇ.69ರಷ್ಟು ಹೆಚ್ಚಿನ ಮಳೆಯಾಗಿದ್ದು, ಇದರಿಂದ ಜಿಲ್ಲೆಯಾದ್ಯಂತ 1,05,967 ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಹಾಗೂ ತೆ–ೋಟಗಾರಿಕಾ ಬೆಳೆನಷ್ಟವುಂಟಾಗಿರುವ ಬಗ್ಗೆ ಪ್ರಾಥಮಿಕ ವರದಿ ತಿಳಿಸಿವೆ. ಪೂರ್ವ ಮುಂಗಾರಿನಲ್ಲಿ ಜಿಲ್ಲೆಯಲ್ಲಿ ಒಳ್ಳೆಯ ಮಳೆ ಆಗಿರುವ ಕಾರಣ ಹೆಸರು ಹಾಗೂ ಉದ್ದು ಹೆಚ್ಚಿನ ಪ್ರದೇಶದಲ್ಲಿ ಬಿತ್ತನೆಯಾಗಿದ್ದು, ಆಗಸ್ಟ್ ಮಾಹೆಯಲ್ಲಿ ಹೆಚ್ಚುವರಿ ಮಳೆಯಿಂದಾಗಿ ಕಟಾವಿನ ಸಂದರ್ಭದಲ್ಲಿ ಈ ಬೆಳೆಗಳಿಗೆ ಹಾನಿಯಾದ ಬಗ್ಗೆ ವರದಿಗಳು ಬರುತ್ತಿವೆ. ಬೆಳೆನಷ್ಟದ ನಿಖರ ಮಾಹಿತಿ ಜಿಲ್ಲಾಧಿಕಾರಿಗಳ ವರದಿಯ ನಂತರವಷ್ಟೇ ನಿಖರ ಮಾಹಿತಿ ತಿಳಿಯುತ್ತದೆ ಎಂದು ಹೇಳಿದರು.

ನಂತರ ಜಿಲ್ಲಾಧಿಕಾರಿಗಳು ಮಾತನಾಡಿ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಆಗಿರುವ ಬೆಳೆ ಹಾನಿ ಸಮೀಕ್ಷೆಯನ್ನು ಪೂರ್ಣಗೊಳಿಸಿ, ಅಂತಿಮ ವರದಿಯನ್ನು ಈಗಾಗಲೇ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಕಲಬುರಗಿ ಜಿಲ್ಲೆಯಲ್ಲಿ ಸಿಡಿಲು ಬಡಿದು ನಾಲ್ವರು ರೈತರು ಹಾಗೂ ಮನೆ ಬಿದ್ದು ಇಬ್ಬರು ಮೃತರಾಗಿದ್ದಾರೆ, ಮಳೆಯಿಂದಾಗಿ ಜಿಲ್ಲೆಯಲ್ಲಿ 696 ಮನೆಗಳು ಬಿದಿದ್ದು, 103 ಜಾನುವಾರುಗಳು ಮೃತಪಟ್ಟಿರುತ್ತವೆ ಎಂದು ಮಾಹಿತಿ ನೀಡಿದರು. ಪ್ರಾಣಹಾನಿ ಹಾಗೂ ಮಳೆಯಿಂದಾಗಿ ಸಂಭವಿಸಿದ ಜಾನುವಾರು ಹಾನಿ, ಮನೆ ಹಾನಿಗೆ ಸಂಬಂಧಿಸಿದಂತೆ ಈಗಾಗಲೆ ಜಿಲ್ಲಾ ಆಡಳಿತದ ವತಿಯಿಂದ 18 ಲಕ್ಷ ರೂ. ಪರಿಹಾರ ವಿತರಿಸಲಾಗಿದೆ ಎಂದು ಹೇಳಿದರು.

ಈ ಕುರಿತಂತೆ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ ಅವರು ಜಿಲ್ಲಾಧಿಕಾರಿಗಳಿಂದ ವರದಿ ಬಂದ ನಂತರ ಅಗತ್ಯ ಕ್ರಮವಹಿಸಲಾಗುವುದು ಮತ್ತು ಬೆಳೆನಷ್ಟವನ್ನು ಶೀಘ್ರದಲ್ಲಿ ರೈತರಿಗೆ ವಿತರಿಸಲಾಗುವುದು ಎಂದು ಹೇಳಿದರು. ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ಕಲಬುರಗಿ ಜಿಲ್ಲೆಯಿಂದ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತರಾದ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ಸಹಾಯಕ ಆಯುಕ್ತೆ ಸಾಹಿತ್ಯ, ಸೇಡಂ ಸಹಾಯಕ ಆಯುಕ್ತರಾದ ಪ್ರಭುರಡ್ಡಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಸಮ್ಮದ್ ಪಟೇಲ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಮಾಪನೆಗೊಂಡ ಸಹಕಾರ ಸಂಘ 2025ರ ಮಾರ್ಚ್ 31ಕ್ಕೆ ಇರುವಂತೆ ರದ್ದತಿಗೆ ಸೂಚನೆ

**ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ :**

ಸೆಪ್ಟೆಂಬರ್ 08,: ಜಿಲ್ಲೆಯಲ್ಲಿರುವ ಸಮಾಪನೆಗೊಂಡ ಸಹಕಾರ ಸಂಘಗಳನ್ನು 2025ರ ಮಾರ್ಚ್ 31ಕ್ಕೆ ಇರುವಂತೆ ರದ್ದತಿ ಮಾಡಲು ಪ್ರಕಟಿಸಿದೆ ಎಂದು ಯಾದಗಿರಿ ಸಹಕಾರ ಸಂಘಗಳ ಉಪನಿಬಂಧಕರು ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಈ ಕೆಳಕಂಡ ಸಹಕಾರ ಸಂಘಗಳ ಸದಸ್ಯರುಗಳಿಗೆ ಮತ್ತು ಸಾರ್ವಜನಿಕರ ಗಮನಕ್ಕೆ 2025ರ ಮಾರ್ಚ್ 31ಕ್ಕೆ ಇದ್ದಂತೆ ಒಟ್ಟು 32 ವಿವಿಧ ರೀತಿಯ ಸಹಕಾರ ಸಂಘಗಳು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರಅಡಿಯಲ್ಲಿ ನೊಂದಣಿಗೊಂಡು ಸಂಘದ ಬೈಲಾ ರಿಚಿತಚಿ ಕಾರ್ಯನಿರ್ವಹಿಸದೆ ಸ್ಥಗಿತಗೊಂಡು, ಪ್ರಸ್ತುತ ಸಮಾಪನೆಯಲ್ಲಿರುತ್ತವೆ. ಸದರಿ ಸಮಾಪನೆಗೊಂಡ ಸಹಕಾರ ಸಂಘಗಳನ್ನು ನೊಂದಣಿರದ್ದು ಮಾಡಲು ಕ್ರಮವಿಡಲಾಗುತ್ತಿದೆ. ಈ ಬಗ್ಗೆ ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಸಹಕಾರ ಸಂಘಗಳ ಉಪ ನಿಬಂಧಕರು ಯಾದಗಿರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ಯಾದಗಿರಿ ಇಲ್ಲಿ ದಾಖಲಾತಿಗಳೊಂದಿಗೆ ಈ ಪ್ರಕಟಣೆ ಹೊರಡಿಸಿದ 15 ದಿನ ಒಳಗೆ ಸಲ್ಲಿಸಬೇಕು.

ಯಾದಗಿರ ತಾಲ್ಲೂಕ 1.ಜಿಲ್ಲಾ ಮಹಿಳಾ ಪತ್ತಿನ ಸಹಕಾರ ಸಂಘ ನಿ ಯಾದಗಿರ 2.ಪ್ರಾಥಮಿಕ ಶಿಕ್ಷಕರ ಪತ್ತಿನ ಸಹಕಾರ ಸಂಘ ನಿ ಯಾದಗಿರ 3.ಅಗ್ರಿಕಲ್ಚರ್‌ಕೋ-ಅಪ್ ಅಸೋಶಿಯೇಶನ್ ನಿ.ಯಾದಗಿರ 4. ಯಾದಗಿರ ತಾಲ್ಲೂಕ ಅಲ್ಪಸಂಖ್ಯಾತರ ವಿವಿದೋದ್ಧೆಶ ಸಹಕಾರ ಸಂಘ ನಿ ಯಾದಗಿರ 5. ಯಾದಗಿರ ತಾಲ್ಲೂಕ ಹಿಂದುಳಿದ ವರ್ಗಗಳ ಮಹಿಳಾ ವಿವಿದೋದ್ಧೆಶ ಸಹಕಾರ ಸಂಘ ನಿ ಯಾದಗಿರ 6. ಎಸ್.ಸಿ.ಎಸ್ ತುಮಕುರ 7. ಅಕ್ಕನಬಳಗ ಹಿಂದುಳಿದ ವರ್ಗಗಳ ವಿವಿದೋದ್ಧೇಶ ಸಹಕಾರ ಸಂಘ ನಿ ಯಾದಗಿರ 8. ಹಾಲು ಉತ್ಪಾದಕರ ಸಹಕಾರ ಸಂಘ ನಿ ಕಣೆಕಲ್ 9.ಹಾಲು ಉತ್ಪಾದಕರ ಸಹಕಾರ ಸಂಘ ನಿ ರಾಮಸಮುದ್ರ 10.ಹಾಲು ಉತ್ಪಾದಕರ ಸಹಕಾರ ಸಂಘ ನಿ ಆಸರ ಮೋಹಲ್ಲಾ ಯಾದಗಿರ ಈ ಸಮಾಪನೆಗೊಂಡ ಸಹಕಾರ ಸಂಘಗಳನ್ನು 2025ರ ಮಾರ್ಚ್ 31ಕ್ಕೆ ಇರುವಂತೆ ರದ್ದತಿ ಇರುತ್ತದೆ. ಗುರುಮಠಕಲ್ ತಾಲ್ಲೂಕ 1.ಹಾಲು ಉತ್ಪಾದಕರ ಸಹಕಾರ ಸಂಘ ನಿ ಚೆಪೆಟ್ಲಾ 2.ಹಾಲು ಉತ್ಪಾದಕರ ಸಹಕಾರ ಸಂಘ ನಿ ಇಮ್ಲಾಪೂರ ಇವೆ.

ಶಹಾಪೂರ ತಾಲ್ಲೂಕ 1.ಶ್ರೀ ಬಿರಲಿಂಗೆಶ್ವರ ಪತ್ತಿನ ಸಹಕಾರ ಸಂಘ ನಿ ಶಹಾಪೂರ 2.ಹಾಲು ಉತ್ಪಾದಕರ ಸಹಕಾರ ಸಂಘ ನಿ ದೋರನಳ್ಳಿ 3.ತಾಲ್ಲೂಕ ಗ್ರಾಮಿಣ ಉದ್ಯೋಗ ಕೈಗಾರಿಕ ಸಹಕಾರ ಸಂಘ ನಿ ಶಹಾಪೂರ 4. ಬಾಪೂಜಿ ಅಗರ ಬತ್ತಿ ಉತ್ಪಾದಕರ ಸಹಕಾರ ಸಂಘ ನಿ ಹಾರಣಗೇರಾ 5.ಶಹಾಪೂರ ತಾಲ್ಲೂಕ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಗೃಹ ನಿರ್ಮಾಣ ಸಹಕಾರ ಸಂಘ ನಿ ಶಹಪೂರ 6.ಜಗದ್ಗುರು ರೇಣುಕಾಚಾರ್ಯ ವಿವಿದೊದ್ದೇಶ ಸಹಕಾರ ಸಂಘ ನಿ ಶಹಾಪೂರ 7.ಶ್ರೀ ರೇವಣಸಿದ್ದೇಶ್ವರ ವಿವಿದೋದ್ದೇಶ ಸಹಕಾರ ಸಂಘ ನಿ ಶಹಾಪುರ 8.ಶ್ರೀ ಸೇವಾಲಾಲ ವಿವಿದೋದ್ದೇಶ ಸಹಕಾರ ಸಂಘ ಮತ್ತು ಗ್ರಾಮಿಣಾಭಿವೃದ್ದಿ ಸಹಕಾರ ಸಂಘ ನಿ ಹಾರಣಗೇರಾ 9.ಶ್ರೀ ಸ್ವಾಮಿ ವಿವೇಕಾನಂದ ವಿವಿದೋದ್ದೆಶ ಸಹಕಾರ ಸಂಘ ನಿ ವನದುರ್ಗಾ 10.ಕೃಷ್ಣ ರೈತರಟ್ರಾಕ್ಟರ್ ಮಾಲಿಕರ ಸಹಕಾರ ಸಂಘ ನಿ ಬೀಮರಾಯನಗುಡಿ.

ವಡಗೇರಾ ತಾಲ್ಲೂಕ 1.ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ ತಡಿಬಿಡಿ. ಇದೆ. ಸುರಪೂರ ತಾಲ್ಲೂಕ 1. ಕೆಂಭಾವಿ ಪಟ್ಟಣ ಪತ್ತಿನ ಸಹಕಾರ ಸಂಘ ನಿ.ಕೆಂಭಾವಿ, 2.ತಾಲ್ಲೂಕ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ ನಿ ಸುರಪೂರ 3.ಹಾಲು ಉತ್ಪಾದಕರ ಸಹಕಾರ ಸಂಘ ನಿ.ಚೆನ್ನಪಟ್ಟಣ, 4.ತಾಲ್ಲೂಕ ಅಲೇಮಾರಿ ಜನಾಂಗದವರ ವಿವಿದೋದ್ದೆಶ ಸಹಕಾರ ಸಂಘ ನಿ ಸುರಪೂರ. 5.ಸೋಹಿಲ್ ಮಹಿಳೇಯರ ವಿವಿದೋದ್ದೆಶ ಸಹಕಾರ ಸಂಘ ನಿ.ರಂಗಂಪೇಠ. ಹುಣಸಗಿ ತಾಲ್ಲೂಕ 1.ಹಾಲು ಉತ್ಪಾದಕರ ಸಹಕಾರ ಸಂಘ ನಿ ಕನಗಂಡನಹಳ್ಳಿ 2.ಹಾಲು ಉತ್ಪಾದಕರ ಸಹಕಾರ ಸಂಘ ನಿ ಮಾರನಾಳ 3.ಹಾಲು ಉತ್ಪಾದಕರ ಸಹಕಾರ ಸಂಘ ನಿ ಮಾರನಾಳ ತಾಂಡ ಈ ಪ್ರಕಟಣೆ ಹೊರಡಿಸಿದ 15 ದಿನ ಒಳಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಭೆ ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನವಾಗಲಿ: ಪಾಮಯ್ಯ ಮುರಾರಿ



**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಸೆಪ್ಟೆಂಬರ್ 08– ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರ ಅಧ್ಯಕ್ಷತೆಯಲ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದಿಂದ ವಿವಿಧ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯು ಸೆಪ್ಟೆಂಬರ್ 08ರಂದು ನಗರದ ಜಿಲ್ಲಾ ಪಂಚಾಯಿತಿಯ ಜಲ ನಿರ್ಮಲ ಸಭಾಂಗಣದಲ್ಲಿ ನಡೆಯಿತು.

ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಹಾಗೂ ಯುವನಿಧಿ ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನದ ಬಗ್ಗೆ ಪ್ರಾಧಿಕಾರದ ಅಧ್ಯಕ್ಷರು ಮತ್ತು ಎಲ್ಲ ಸದಸ್ಯರು ಸಮಗ್ರ ಪರಿಶೀಲಿಸಿದರು.

ಸಾರಿಗೆ ವ್ಯವಸ್ಥೆಯ ಬಗ್ಗೆ ಪರಿಶೀಲಿಸಿದ ಸದಸ್ಯರು, ಶಾಲಾ–ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಬೇಡಿಕೆಗನುಸಾರ ಮಾರ್ಗಗಳ ಹೊಂದಾಣಿಕೆ ಮಾಡುವಂತೆ ಸೂಚಿಸಿದರು.

ಸಭೆಯಲ್ಲಿ, ಗೃಹಜ್ಯೋತಿ ಯೋಜನೆ ಪ್ರಗತಿ ಕುರಿತು ಚರ್ಚಿಸಲಾಯಿತು. ಜನತೆಗೆ ಈ ಯೋಜನೆಯ ಮಾಹಿತಿ ಕೊರತೆಯಿದ್ದು, ಜಾಗೃತಿ ಕಾರ್ಯಕ್ರಮ ನಡೆಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.

ಗೃಹಲಕ್ಷ್ಮಿಯ ಎಲ್ಲ ಅರ್ಹ ಫಲಾನುಭವಿಗಳಿಗೆ ಕಾಲಕಾಲಕ್ಕೆ 2 ಸಾವಿರ ರೂ. ಜಮೆ ಮಾಡಬೇಕು. ತಾಂತ್ರಿಕ ತೊಂದರೆ ಕಂಡುಬಂದಲ್ಲಿ ಕೂಡಲೇ ಮೇಲಧಿಕಾರಿಗಳ ಗಮನಕ್ಕೆ ತಂದು ಹಂತಹಂತವಾಗಿ ಸರಿಪಡಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

ಯುವನಿಧಿ ಯೋಜನೆಗೆ ವಿದ್ಯಾರ್ಥಿಗಳ ನೋಂದಣಿಗಾಗಿ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಅಭಿಯಾನ ಕೈಗೊಂಡು ನೋಂದಣಿ ಮಾಡಲಾಗುತ್ತಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ ಅವರು ಸಭೆಗೆ ಮಾಹಿತಿ ನೀಡಿದರು.

ಸರ್ಕಾರ ಜಾರಿ ತಂದಿರುವ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದಲ್ಲಿ ಸಮಿತಿಯ ಎಲ್ಲಾ ಸದಸ್ಯರ ಪಾತ್ರವು ಸಹ ಇದ್ದು ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಈ ಯೋಜನೆಗಳ ಅನುಷ್ಠಾನದಿಂದ ಸಾರ್ವಜನಿಕರಿಗೆ ಅನುಕೂಲವಾದ ಯಶೋಗಾಥೆಗಳ ಬಗ್ಗೆ ತಿಳಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಸಲಹೆ ಮಾಡಿದರು.

ಗ್ಯಾರಂಟಿ ಶಿಬಿರ ನಡೆಸಲು ಸೂಚನೆ: ರಾಜ್ಯದ ಜನರನ್ನು ಸಾಮಾಜಿಕವಾಗಿ ಸದೃಢಗೊಳಿಸಲು ಮತ್ತು ಆರ್ಥಿಕವಾಗಿ ಸಬಲೀಕರಣಗೊಳಿಸುವ ಸದುದ್ದೇಶದಿಂದ ರಾಜ್ಯ ಸರ್ಕಾರ ಜಾರಿ ತಂದಿರುವ ಗ್ಯಾರಂಟಿ ಯೋಜನೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಜಾರಿ ಮಾಡಿದ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ತಿಳಿವಳಿಕೆ ಮೂಡಿಸಲು ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಗ್ಯಾರಂಟಿ ಯೋಜನಗಳ ಶಿಬಿರ ಕಾರ್ಯಕ್ರಮ ಏರ್ಪಡಿಸಿ ಫಲಾನುಭವಿಗಳೊಂದಿಗೆ ಮುಕ್ತ ಸಂವಾದ ನಡೆಸಬೇಕು. ಯೋಜನೆಗಳ ಪ್ರಯೋಜನೆ ಪಡೆಯುವಲ್ಲಿ ಏನಾದರು ತೊಂದರೆಗಳಿದ್ದಲ್ಲಿ ತಕ್ಷಣ ಸ್ಪಂದಿಸುವ ಕುರಿತು ಚರ್ಚೆ ನಡೆಸಲು ಕ್ರಮವಹಿಸಬೇಕು ಎಂದು ಪಾಮಯ್ಯ ಮುರಾರಿ ಅವರು ಸಲಹೆ ಮಾಡಿದರು.

ಯೋಜನೆಗಳ ಪ್ರಗತಿ: 2025ರ ಫೆಬ್ರವರಿ ಮಾಹೆಯಿಂದ ಜಿಲ್ಲೆಯ ಪಡಿತರ ಚೀಟಿದಾರರಿಗೆ ಹಣದ ಬದಲು ಹೆಚ್ಚುವರಿಯಾಗಿ 5 ಕೆಜಿ ಅಕ್ಕಿಯನ್ನು ವಿತರಣೆ ಮಾಡಲಾಗುತ್ತಿದೆ. ಗೃಹಲಕ್ಷ್ಮೀ ಯೋಜನೆಯಡಿ 2025ರ ಜೂನ್ ತಿಂಗಳವರೆಗೆ 4,46,138 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,42,276 ಫಲಾನುಭವಿಗಳಿಗೆ 335.11 ಕೋಟಿ ರೂ. ವೆಚ್ಚ ಭರಿಸಲಾಗಿದೆ. ಶಕ್ತಿ ಯೋಜನೆಯಡಿ ಇದುವರೆಗೆ 379.00 ಕೋಟಿ ರೂ. ವೆಚ್ಚ ಭರಿಸಲಾಗಿದೆ. ಯುವನಿಧಿ ಯೋಜನೆಯಡಿ ಜಿಲ್ಲೆಯಾದ್ಯಂತ ಒಟ್ಟು 1,20,455 ಪದವಿ ಹಾಗೂ 1083 ಡಿಪ್ಲೋಮಾ ಪೂರ್ಣಗೊಳಿಸಿದ ನೋಂದಾಯಿತ ಫಲಾನುಭವಿಗಳು ಯೋಜನೆಯ ಲಾಭ ಪಡೆಯುತ್ತಿದ್ದಾರೆ ಎಂದು ಆಯಾ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಪ್ರಾಧಿಕಾರದ ಜಿಲ್ಲಾಮಟ್ಟದ ಉಪಾಧ್ಯಕ್ಷರಾದ ನಾಗೇಂದ್ರ, ಗಫೂರ್ ಸಾಬ್, ಹನುಮಂತ ಜಾಲಿಬೇಂಚಿ, ಶೇಖರ್ ಗೌಡ ತುರುವಿಹಾಳ, ಸದಸ್ಯರಾದ ಎಚ್.ಪಿ ಬಸವರಾಜ ಬಿ,ಕೆ.ಅಮರೇಶ, ಪವನ ಪಾಟೀಲ್, ಲಕ್ಷ್ಮಣ ಜ್ಯೋತಿ, ಮಹೆಬೂಬ್ ಸಾಬ್, ವೆಂಕಟರಾವ್, ಜಾಫರ್ ಅಲಿ, ವೆಂಕಟೇಶ್, ಎಚ್.ಬಸವರಾಜ ಗೋನವಾರ, ಶೇಖರಪ್ಪ ಯಾದವ್, ನಜೀರ ಪಂಜಾಬಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಡಾ.ಟಿ.ರೋಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್, ಜಿಲ್ಲಾ ಅಗ್ರಗಣ್ಯ ಬ್ಯಾಂಕ್ ಮುಖ್ಯಸ್ಥರಾದ ಪಾಂಡಪ್ಪ ಲಂಬಾಣಿ, ಜೆಸ್ಕಾಂ ಇಲಾಖೆಯ ಚಂದ್ರಶೇಖರ ದೇಸಾಯಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಭಾರಿ ಉಪ ನಿರ್ದೇಶಕರಾದ ನಜೀರ್ ಅಹಮದ್, ಜಿಲ್ಲಾ ಉದ್ಯೋಗಾಧಿಕಾರಿಗಳಾದ ನವೀನಕುಮಾರ್ ಸಂಗೇಪಾಗ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಂ.ಎಸ್ ಸೇರಿದಂತೆ ತಾಲೂಕು ಪಂಚಾಯತ್ ಇಒಗಳು, ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಇದ್ದರು.

# ವಿಶೇಷ ಚೇತನರ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಿ : ಮಂಜುನಾಥ



**ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :**

ಜಿಲ್ಲೆಯಲ್ಲಿ ವಿಶೇಷ ಚೇತನರರಿಗೆ 5% ಅನುಧಾನವನ್ನು ಸರಕಾರ ಸೌಲಭ್ಯಗಳನ್ನು ಒದಗಿಸುವಲ್ಲಿ ಪ್ರಮಾಣಿಕ ಪ್ರಯತ್ನ ನೆಡೆಯುತ್ತದೆ ಎಂದು ಕೊಪ್ಪಳ ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ಅಧಿಕಾರಿ ಮಂಜುನಾಥ ಹೇಳಿದರು

ಅವರು ಕೊಪ್ಪಳ ತಾಲೂಕ ಪಂಚಾಯತ ಆವರಣದಲ್ಲಿ ನಿರ್ಮಾಣವಾದ ಜಿಲ್ಲಾ ತರಬೇತಿ ಸಂಪನ್ಮೂಲ ಕೇಂದ್ರದಲ್ಲಿ ಸೋಮವಾರ ಅಬ್ದುಲ್ ನಜೀರಸಾಬ್ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಮೈಸೂರ, ಜಿಲ್ಲ ಪಂಚಾಯತ ಕೊಪ್ಪಳ ,ಜಿಲ್ಲಾ ತರಬೇತಿ ಸಂಪನ್ಮೂಲ ಕೇಂದ್ರ ಕೊಪ್ಪಳ,ಸಂಯುಕ್ತಾಶ್ರಯದಲ್ಲಿ ಜರಗಿದ ದರ್ಶಿನಿ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ಮಟ್ಟದ ತರಬೇತಿದಾರರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತಮಾಡಿದರು .

ರಾಜ್ಯ ದಲ್ಲಿ 5888 ಗ್ರಾಮ ಪಂಚಾಯತಗಳಲ್ಲಿ ಸರಕಾರದ ವತಿಯಿಂದ ದರ್ಶಿನಿ ಕಾರ್ಯಕ್ರಮ ದಡಿಯಲ್ಲಿ ಒದಗಿಸಲಾಗಿರುವ ಸಹಾಯಕ ಸಾಧನಗಳ ಬಳಕೆ,ಹಾಗೂ ನಿರ್ವಹಣೆ ಕುರಿತಂತೆ ಜಿಲ್ಲಾ ಮಟ್ಟದಲ್ಲಿ ತರಬೇತಿ ದಾರರ ತರಬೇತಿ ಹಮ್ಮಿಕೊಂಡಿದ್ದು ತಾಲೂಕು ಮಟ್ಟದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷಗೆ,ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ,ಗ್ರಾಂಥಾಲಯ ಮೇಲ್ವಿಚಾರಕ ರಿಗೆ ಪ್ರಮಾಣಿಕವಾಗಿ ತರಬೇತಿ ನೀಡಿ ಕಾರ್ಯಕ್ರಮ ಯಶಸ್ವಿ ಗೊಳಿಸಬೇಕು ವಿಶೇಷ ಚೇತನರು ತಮ್ಮಗೆ ಬೇಡಿಕೆಗಳನ್ನು ಮನವಿ ಸರಕಾರಕ್ಕೆ ಸಲ್ಲಿಸಿದರೆ ನಾವುಗಳು ಕ್ರೀಯಾ ಯೋಜನೆ ಮಾಡಿ ಸರಕಾರಕ್ಕೆ ಸಲ್ಲಿಸುತ್ತೆವೆ ಅವರು ಸರಕಾರದ ಸೌಲಭ್ಯ ಪಡೆಯಬೇಕು ಎಂದರು

ಕಾರ್ಯಕ್ರಮ ದಲ್ಲಿ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾಗಿ ಜಿಲ್ಲಾ ವಿಶೇಷ ಚೇತನರ ಕಲ್ಯಾಣ ಅಧಿಕಾರಿ ವೆಂಕಟೇಶ, ಸಂಪನ್ಮೂಲ ವ್ಯಕ್ತಿ ವಿರೇಶ ತಾಲೂಕ ಪಂಚಾಯತ ಯೋಜನಾಧಿಕರಿ ನದಾಪ್, , ಡಿಟಿಸಿ ಬೀಮಣ್ಣ ಹವಳಿ, ಹಾಗೂ ಹಾಲೂರಪ್ಪ ಹೊನ್ನುಣಸಿ ಜಿಲ್ಲಾ ತರಬೇತಿ ಸಂಪನ್ಮೂಲ ಕೇಂದ್ರದ ನೋಡಲ್ ಅಧಿಕಾರಿ ಬಸವರಾಜ, ಮತ್ತು ಅರಿವು ಕೇಂದ್ರದ ಸಂಪನ್ಮೂಲ ವ್ಯಕ್ತಿ ಗಳು, ಎಲ್ಲಾ ತಾಲೂಕ ಗ್ರಾಮೀಣ ಪುರ್ನವಸತಿ ಕೇಂದ್ರದ ಕಾರ್ಯ ಕರ್ತರು , ಮತ್ತಿತರರು ಉಪಸ್ಥಿತಿ ವಹಿಸಿಸಿದ್ದರು.

# ಕೊಟ್ಟೂರು ಶ್ರೀಗಳಿಂದ, ಪ್ರವಾದಿಯವರ ಬದುಕು ಮತ್ತು ಸಂದೇಶಗಳ ಪುಸ್ತಕ ಬಿಡುಗಡೆ



**ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :**

ಸೀರತ್ ಅಭಿಯಾನದ ಪ್ರಯುಕ್ತ ಶಾಂತಿ ಪ್ರಕಾಶನ ಪ್ರಕಟಿಸಿರುವ ಪ್ರವಾದಿಯವರ ಬದುಕು ಮತ್ತು ಸಂದೇಶಗಳ ಬಗ್ಗೆ ಬೆಳಕು ಚೆಲ್ಲುವ ಎರಡು ಹೊಸ ಪುಸ್ತಕಗಳನ್ನು ಶ್ರೀ ಕೊಟ್ಟೂರು ಬಸವಲಿಂಗ ಮಹಾ ಸ್ವಾಮಿಗಳು ಕೊಟ್ಟುರು ಸ್ವಾಮಿ ಸಂಸ್ಥಾನ ಮಠ ಹೊಸಪೇಟೆ ಇವರಿಂದ ಇದೇ ದಿ. 08ರಂದು ಬಿಡುಗಡೆಗೊಳಿಸಲಾಯಿತು.

ನಂತರ ವಿಜಯನಗರ ಜಿಲ್ಲೆ ಜಮಾಅತೆ ಇಸ್ಲಾಮಿ ಹಿಂದ್ ಜಿಲ್ಲಾ ಸಂಚಾಲಕರಾದ ಜನಾಬ್ ಕಲೀಮುಲ್ಲಾ ಖಾನ್ ಮನ್ಸೂರಿ ಮಾತನಾಡಿ ಪ್ರವಾದಿ ಮುಹಮ್ಮದ್ (ಸ) ರವರು ಅರೆಬಿಕ್ ಕ್ಯಾಲೆಂಡರ್ ಪ್ರಕಾರ ರಬೀವುಲ್ ಅವ್ವಲ್ ತಿಂಗಳಿನಲ್ಲಿ ಜನಿಸಿದರು, ಅವರ ಸಾರ್ವಕಾಲಿಕ ಬೋಧನೆಗಳನ್ನು ಜನತೆಗೆ ತಿಳಿಯಪಡಿಸಲು ಜಮಾಅತೆ ಇಸ್ಲಾಮಿ ಹಿಂದ್, ಕರ್ನಾಟಕದ ವತಿಯಿಂದ ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್ (ಸ) ಶೀರ್ಷಿಕೆಯಡಿ ಸೆಪ್ಟೆಂಬರ್ 3 ರಿಂದ 14ರ ವರೆಗೆ ರಾಜ್ಯಾದ್ಯಂತ ಸೀರತ್ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರವಾದಿ ಮುಹಮ್ಮದ್ (ಸ)ರ ನ್ಯಾಯ ಮತ್ತು ಮಾನವೀಯತೆಯ ಸಂದೇಶಗಳನ್ನು ನಾಡಿನ ಜನತೆಗೆ ತಲುಪಿಸುವುದು ಮತ್ತು ಪ್ರವಾದಿಯವರ ಬಗೆಗಿನ ತಪ್ಪು ಕಲ್ಪನೆಗಳನ್ನು ಹೋಗಲಾಡಿಸುವುದು ಹಾಗೂ ವಿವಿಧ ಧರ್ಮಿಯರ ನಡುವಿನ ಪರಸ್ಪರ ಸಂಬಂಧಗಳನ್ನು ಬಲಪಡಿಸುವುದು ಈ ಅಭಿಯಾನದ ಉದ್ದೇಶವಾಗಿದೆ ಎಂದರು.

ಈ ಸಂದರ್ಭದಲ್ಲಿ ಡಾ ಚಂದ್ರಶೇಖರ ಶಾಸ್ತ್ರಿ, ನಿವೃತ್ತ ಇತಿಹಾಸ ಪ್ರಾಧ್ಯಾಪಕರು ವಿಜಯನಗರ ಕಾಲೇಜ್ ಹೊಸಪೇಟೆ, ಜನಾಬ್ ಕಲೀಮುಲ್ಲಾ ಖಾನ್ ಮನ್ಸೂರಿ, ಜಿಲ್ಲಾ ಸಂಚಾಲಕರು, ಜಮಾಅತೆ ಇಸ್ಲಾಮಿ ಹಿಂದ್, ವಿಜಯನಗರ ಜಿಲ್ಲೆ, ಜಮಾಅತೆ ಇಸ್ಲಾಮಿ ಹಿಂದ್ ಹೊಸಪೇಟೆ ಅಧ್ಯಕ್ಷರು ಮುಹಮ್ಮದ್ ಅಝೀರುಘ್ ಮುಲ್ಲಾ ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಶಿಕ್ಷಕ ಎನ್ನುವ ಸ್ಥಾನಕ್ಕೆ ಸರಿಸಾಟಿ ಯಾವುದು ಇಲ್ಲಾ: ಡಾ.ಹನಸಿ




**ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :**

ಶಿಕ್ಷಕರ ದಿನಾಚರಣೆ

ಭಾರತದ ಎರಡನೇ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನವಾದ ಸೆಪ್ಟೆಂಬರ್ 5, 1888 ಅನ್ನು 1962 ರಿಂದ ಶಿಕ್ಷಕರ ದಿನವನ್ನಾಗಿ ಆಚರಿಸಲಾಗುತ್ತಿದೆ. ಈ ದಿನದಂದು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಎಂದಿನಂತೆ ಶಾಲೆಗೆ ವರದಿ ಮಾಡುತ್ತಾರೆ ಆದರೆ ಸಾಮಾನ್ಯ ಚಟುವಟಿಕೆಗಳು ಮತ್ತು ತರಗತಿಗಳ ಬದಲಿಗೆ ಆಚರಣೆ, ಕೃತಜ್ಞತೆ ಮತ್ತು ಸ್ಮರಣಾರ್ಥ ಚಟುವಟಿಕೆಗಳನ್ನು ಆಚರಿಸಲಾಗುತ್ತದೆ ಎಂದು ಪ್ರಾಂಶುಪಾಲರಾದ ಡಾ.ಬಸವರಾಜ ಹನಸಿ ಹೇಳಿದರು.

ಗದಗ ರಸ್ತೆಯಲ್ಲಿರುವ ಶಿವಪ್ರೀಯಾ ಕಾನೂನು ಮಹಾವಿದ್ಯಾಲಯದಲ್ಲಿ ಜರುಗಿದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ವಿಶ್ವ ಶಿಕ್ಷಕರ ದಿನವನ್ನು ಆಚರಿಸಲು, ಯುನೆಸ್ಕೋ ಮತ್ತು ಶಿಕ್ಷಣ ಅಂತರರಾಷ್ಟ್ರೀಯ (ಇಐ) ಪ್ರತಿ ವರ್ಷ ಶಿಕ್ಷಕರ ಬಗ್ಗೆ ಮತ್ತು ವಿದ್ಯಾರ್ಥಿಗಳು ಮತ್ತು ಸಮಾಜದ ಅಭಿವೃದ್ಧಿಯಲ್ಲಿ ಅವರು ವಹಿಸುವ ಪಾತ್ರವನ್ನು ಜಗತ್ತಿಗೆ ಉತ್ತಮ ತಿಳುವಳಿಕೆ ನೀಡಲು ಸಹಾಯ ಮಾಡಲು ಅಭಿಯಾನವನ್ನು ಆಯೋಜಿಸುತ್ತದೆ. ಈ ಉದ್ದೇಶವನ್ನು ಸಾಧಿಸಲು ಅವರು ಮಾಧ್ಯಮ ಸಂಸ್ಥೆಗಳಂತಹ ಖಾಸಗಿ ವಲಯದೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುತ್ತಾರೆ. ಈ ಅಭಿಯಾನವು ಪ್ರತಿ ವರ್ಷ ವಿಭಿನ್ನ ವಿಷಯಗಳ ಮೇಲೆ ಕೇಂದ್ರೀಕರಿಸುತ್ತದೆ. ಉದಾಹರಣೆಗೆ, "ಶಿಕ್ಷಕರ ಸಬಲೀಕರಣ" ಎಂಬುದು 2017 ರ ವಿಷಯವಾಗಿದೆ. ಉನ್ನತ ಶಿಕ್ಷಣ ಬೋಧನಾ ಸಿಬ್ಬಂದಿಯ ಸ್ಥಿತಿಗೆ ಸಂಬಂಧಿಸಿದ 1997 ರ ಯುನೆಸ್ಕೋ ಶಿಫಾರಸಿನ 20 ನೇ ವಾರ್ಷಿಕೋತ್ಸವವನ್ನು ವಿಶ್ವ ಶಿಕ್ಷಕರ ದಿನವು ಸ್ಮರಿಸಿತು, ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲವೊಮ್ಮೆ ನಿರ್ಲಕ್ಷಿಸಲ್ಪಟ್ಟ ಬೋಧನಾ ಸಿಬ್ಬಂದಿಯ ಕ್ಷೇತ್ರವನ್ನು ಶಿಕ್ಷಕರ ಸ್ಥಿತಿಯ ಬಗ್ಗೆ ಸಂಭಾಷಣೆಗೆ ತರಲಾಯಿತು.

ಅದರಂತೆ ನಾವು ಇಂದು ಎಂತಹ ದೊಡ್ಡ ಮಟ್ಟದ ವ್ಯಕ್ತಿಗಳಾಗಿದ್ದರು ಸಹಿತ ಅದು ಗುರುವಿನಿಂದ ಬಂದಂತಹ ವಿದ್ಯೆಯಾಗಿರುತ್ತದೆ ಜೀವನದಲ್ಲಿ ಜನ್ಮ ನೀಡಿದ ತಂದೆ–ತಾಯಿ ಅದರಂತೆ ಗುರುಗಳಿಗೂ ಸಹಿತ ಗೌರವ ನೀಡುವ ಮನಸ್ಥಿತಿ ಎಲ್ಲಾ ವಿದ್ಯಾರ್ಥಿಗಳಿಗೆ ಬರಬೇಕು ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸಕಿ ರಜೀಯಾಬೇಗಂ ಸೇರಿದಂತೆ ಎಲ್ಲಾ ಉಪನ್ಯಾಸಕರು ಹಾಗೂ ಕಾನೂನು ವಿದ್ಯಾರ್ಥಿಗಳು ಹಾಜರಿದ್ದರು.

# ಸಂಜೀವಿನಿ ಯೋಜನೆಯ "ಗ್ರಾಮೀಣ ಸಮೃದ್ಧಿ ಸ್ಥಿತಿಸ್ಥಾಪಕತ್ವ ಯೋಜನೆ ತರಬೇತಿ ಕಾರ್ಯಾಗಾರಕ್ಕೆ ಚಾಲನೆ



**ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :**

ಗ್ರಾಮೀಣ ಸಮೃದ್ಧಿ ಸ್ಥಿತಿಸ್ಥಾಪಕತ್ವ ಯೋಜನೆ (ವಿ.ಪಿ.ಆರ್.ಪಿ)" ತರಬೇತಿ ಕಾರ್ಯಾಗಾರವನ್ನು ಸಸಿಗೆ ನೀರು ಹಾಕುವ ಮೂಲಕ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ದುಂಡಪ್ಪ ತುರಾದಿಯವರು ಉದ್ಘಾಟನೆ ಮಾಡಿ ಚಾಲನೆ ನೀಡಿದರು.

ಸದರಿ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದ ಮಾನ್ಯರು ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತಾಡುತ್ತಾ, ಗ್ರಾಮೀಣ ಭಾಗದಲ್ಲಿನ ಬಡತನ ನಿವಾರಣೆ ಮಾಡುವ ಸಲುವಾಗಿ ವಿವಿಧ ಇಲಾಖೆಗಳಡಿ ಇರುವ ಸೌಲಭ್ಯಗಳನ್ನು ಅರ್ಹವಿರುವ ಫಲಾನುಭವಿಗೆ ಮುಟ್ಟಿಸುವ ನಿಟ್ಟಿನಲ್ಲಿ ಬೇಡಿಕೆಯನ್ನು ಸಂಗ್ರಹಿಸಲಾಗುತ್ತಿದೆ.

ಅಲ್ಲದೇ ಸಮುದಾಯಕ್ಕೆ ಬೇಕಾದ ಅಗತ್ಯ ಕಾಮಗಾರಿಗಳನ್ನು ಮತ್ತು ಗ್ರಾಮದ ಅಭಿವೃದ್ಧಿಗಾಗಿ ಸಾಮಾಜಿಕ ಅಭಿವೃದ್ಧಿ ಯೋಜನೆಯ ಪ್ಲಾನ್ ಅನ್ನು ಮಾಡಲಾಗುತ್ತಿದೆ. ಇದರಿಂದ ಗ್ರಾಮದ ಅಬಿವೃದ್ದಿಗೂ ಕೂಡ ಸಹಕಾರಿಯಾಗಿದೆ. ಆದ್ದರಿಂದ ಎಲ್ಲಾರೂ ಪ್ರಮಾಣಿಕವಾದ ಬೇಡಿಕೆಯನ್ನು ಅರ್ಹರಿಂದ ಸಂಗ್ರಹಿಸಿ, ಅವುಗಳನ್ನು ಗ್ರಾಮ ಪಂಚಾಯತ್ ಗೆ ಯ ಉಕಆಕ ನಮ್ಮ ಗ್ರಾಮ ನಮ್ಮ ಯೋಜನೆಯಡಿ ಸೇರಿಸಿ "ಗ್ರಾಮೀಣ ಸಮೃದ್ಧಿ ಸ್ಥಿತಿಸ್ಥಾಪಕತ್ವ ಯೋಜನೆ (ವಿ.ಪಿ.ಆರ್.ಪಿ)" ಯನ್ನು ಅನುಷ್ಠಾನ ಮಾಡುವ ನಿಟ್ಟಿನಲ್ಲಿ ಎಲ್ಲಾರೂ ಕಾರ್ಯ ನಿರ್ವಹಿಸಬೇಕಿದೆ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಂಜೀವಿನಿ ಯೋಜನೆಯ ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕರಾದ ಸುನಿಲ್, ವಲಯ ಮೇಲ್ವಿಚಾರಕರಾದ ವಿದ್ಯಾಲಕ್ಷ್ಮೀ, ವೆಂಕಟೇಶ, ವಿರೇಶ, ಯುವ ವೃತ್ತಿ ಪರರಾದ ಮಂಜುನಾಥ, ಕೃಷಿಯೇತರ ತಾಲೂಕ ವ್ಯವಸ್ಥಾಪಕರಾದ ಕೊಟ್ರೇಶ, ಪಿ.ಆರ್.ಐ. ಸಿಬಿಓ ತಾಲೂಕ ಸಂಪನ್ಮೂಲ ವ್ಯಕ್ತಿಯಾದ ಶಿವಲೀಲಾ ಹಾಗೂ ಜಿಪಿಎಲ್.ಎಫ್ ಸಹಾಯಕ–ಗಣಕ ಯಂತ್ರ ನಿರ್ವಾಹಕರಾದ ನವೀನ ಹಾಗೂ ಶಿಬಿರಾರ್ಥಿಗಳಾದ ಸಮುದಾಯ ಸಂಪನ್ಮೂಲ ವ್ಯಕ್ತಿಗಳು, ಕೃಷಿ ಸಖಿ ಮತ್ತು ಪಶು ಸಖಿಯವರು ಹಾಜರಿದ್ದರು.

# ದಸರಾ ಕ್ರೀಡಾಕೂಟಕ್ಕೆ ಚಾಲನೆ ಮೈಸೂರಿನಲ್ಲಿ ಗೆದ್ದು ಜಿಲ್ಲೆಗೆ ಕೀರ್ತಿ ತನ್ನಿ–ತಿಮ್ಮಾಪೂರ



**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಸೆ.8–ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಎರಡು ದಿನಗಳ ಕಾಲ ನಡೆಯುವ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಸೋಮವಾರ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಕ್ರೀಡಾಕೂಟದಲ್ಲಿ ಮಾತನಾಡಿದ ಅವರು, ನಾಡಿದಾದ್ಯಂತ ದಸರಾ ಕ್ರೀಡಾಕೂಟಗಳು ಆರಂಭವಾಗಿದ್ದು, ತಾಲೂಕಾ ಹಂತದಲ್ಲಿ ವಿಜೇತರಾದವರು ಜಿಲ್ಲಾ ಮಟ್ಟದಲ್ಲಿ ಭಾಗವಹಿಸಿದ್ದಿರಿ. ಜಿಲ್ಲಾ ಮಟ್ಟದಲ್ಲಿ ಗೆದ್ದು ಮೈಸೂರಿನಲ್ಲಿ ನಡೆಯುವ ದಸರಾ ಕ್ರೀಡಾಕೂಟದಲ್ಲಿ ಪಾಲ್ಗೊಂಡು ಜಿಲ್ಲೆಗೆ ಹೆಸರು ತರಬೇಕು ಎಂದರು. ಕ್ರೀಡೆಗಳಲ್ಲಿ ಸೋಲು–ಗೆಲುವು ಮುಖ್ಯವಲ್ಲ. ಎರಡನ್ನೂ ಸಮಾನವಾಗಿ ಸ್ವೀಕರಿಸಿ ಸೋಲು ಗೆಲುವಿನ ಮಟ್ಟಿಲಾಗಬೇಕು. ಜಿಲ್ಲೆಯ ಕುಸ್ತಿ ಪಟುಗಳು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಪ್ರತಿನಿಧಿಸಿ ವಿವಿಧ ಇಲಾಖೆಯಲ್ಲಿ ನೌಕರಿ ಪಡೆದು–ಕೊಂಡಿದ್ದಾರೆ. ಕ್ರೀಡಾಪಟುಗಳು ಕೀರ್ತಿ ಪತಾಕೆ ಹಾರಿಸಿದನ್ನು ನೋಡಿದರೆ ಖುಷಿ ಪಡುವ ಕೆಲಸವಾಗಿದ್ದು, ತಾವುಗಳು ಯಶಸ್ವಿ ಕ್ರೀಡಾಪಟುಗಳಾಗಿ ಹೊರಹೊಮ್ಮಬೇಕು ಎಂದು ಹೇಳಿದರು. ಬೀಳಗಿ ಶಾಸಕ ಜೆ.ಟಿ.ಪಾಟೀಲ ಮಾತನಾಡಿ, ಎಷ್ಟೇ ಆಸ್ತಿ ಇದ್ದರು ಅದನ್ನು ಅನುಭವಿಸಲು ದೈಹಿಕ ಸಂಪತ್ತು ಇಲ್ಲದಿದ್ದರೆ ಅದು ಶೂನ್ಯ. ವಿದ್ಯಾರ್ಥಿ ಜೀವನದಲ್ಲಿ ಪಾಠಕ್ಕೆ ಎಷ್ಟು ಮಹತ್ವವಿದೆ ಅದಕ್ಕೂ ಹೆಚ್ಚು ಕ್ರೀಡೆಗೆ ಇದೆ. ಆದ್ದರಿಂದ ಜಿಲ್ಲೆಯ ಕ್ರೀಡಾಪಟುಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಭಾಗವಹಿಸಿ ಜಯಶಾಲಿಯಾಗಬೇಕು. ಸೈಕ್ಲಿಂಗ್ ಮತ್ತು ಕುಸ್ತಿ ಜಿಲ್ಲೆಯಲ್ಲಿ ಹೆಚ್ಚಾಗಿದ್ದು, ಈ ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ದೊರೆಯಬೇಕಿದೆ ಎಂದರು.

ಪ್ರಾರಂಭದಲ್ಲಿ ಕ್ರೀಡಾಪಟುಗಳಿಗೆ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಎಚ್.ವಾಯ್.ಮೇಟಿ ವಹಿಸಿದ್ದರು. ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪತ್ರಕರ್ತರ ತರಬೇತಿಗಾಗಿ ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಕರ್ನಾಟಕ ಮಾಧ್ಯಮ ಅಕಾಡೆಮಿ ಒಡಂಬಡಿಕೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**

ಸೆ.08-ಮುಖ್ಯಮಂತ್ರಿಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ದೇಶದಲ್ಲಿಯೇ ಮೊದಲ ಬಾರಿಗೆ ಜಾಗತಿಕ ಮಟ್ಟದಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದ ದಿಗ್ಗಜ ಇನ್‌ಫೋಸಿಸ್‌ನ ಸ್ಪ್ರಿಂಗ್‌ಬೋರ್ಡ್ ಸಿಎಸ್‌ಆರ್ ಕಾರ್ಯಕ್ರಮದಡಿ ಸಹಭಾಗಿತ್ವಕ್ಕಾಗಿ ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರ ತರಬೇತಿಗಾಗಿ ಒಡಂಬಡಿಕೆ ಮಾಡಿಕೊಂಡಿದೆ.

ಪತ್ರಕರ್ತರ ಸಾಫ್ಟ್ ಸ್ಕಿಲ್ ತರಬೇತಿಯ ಉದ್ದೇಶಕ್ಕಾಗಿ ಮಾಡಿಕೊಳ್ಳುತ್ತಿರುವ ಈ ಒಡಂಬಡಿಕೆಯು ಸಿ.ಎಸ್. ಆರ್ ಅಡಿ ಕರ್ನಾಟಕ ಮಾಧ್ಯಮ ಅಕಾಡೆಮಿ ಕೈಗೆತ್ತಿಕೊಂಡ ಮೊದಲ ಕಾರ್ಯಕ್ರಮವಾಗಿದೆ.

ಇನ್ಫೋಸಿಸ್ ಸಿಎಸ್‌ಆರ್ ಯೋಜನೆಯ "ಸ್ಪ್ರಿಂಗ್‌ಬೋರ್ಡ್" ಪ್ಲಾಟ್‌ಫಾರ್ಮ್ ಮೂಲಕ ಪತ್ರಕರ್ತರ ಡಿಜಿಟಲ್ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸಾಮರ್ಥ್ಯ ನಿರ್ಮಾಣ ಈ ಒಡಂಬಡಿಕೆಯ ಉದ್ದೇಶವಾಗಿದೆ.

"ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಹಭಾಗಿತ್ವವು ಬದಲಾಗುತ್ತಿರುವ ಹೊಸ ಮಾಧ್ಯಮಕ್ಕೆ ಹೊಂದಿಕೊಳ್ಳುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ವಿನೂತನ ಪ್ಲಾಟ್‌ಫಾರಂ ಮಾಧ್ಯಮ ವೃತ್ತಿಪರರ ಕೌಶಲ್ಯ ಉನ್ನತೀಕರಣಕ್ಕೆ, ಅದರಲ್ಲೂ ವಿಶೇಷವಾಗಿ ಪತ್ರಕರ್ತರಿಗೆ ವೇಗವಾಗಿ ಬದಲಾಗುತ್ತಿರುವ ಸನ್ನಿವೇಶಗಳಿಗೆ ಅನುಗುಣವಾಗಿ ತಾಂತ್ರಿಕ ಪರಿಣತಿ ಹಾಗೂ ಸುದ್ದಿಯನ್ನು ಪ್ರಸ್ತುತಪಡಿಸುವ ಕೌಶಲವನ್ನು ಒದಗಿಸಲಿದೆ" ಎಂಬ ಆಶಯವನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯೇಶಾ ಖಾನಂ ಅವರು ವ್ಯಕ್ತಪಡಿಸಿದ್ದಾರೆ.

"ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಶಿಕ್ಷಣ ಕುರಿತ ಸಿಎಸ್‌ಆರ್ ಕಾರ್ಯಕ್ರಮವಾಗಿದೆ. ಇಂದು ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಮಾಧ್ಯಮ ಅಕಾಡೆಮಿಯೊಂದಿಗೆ ಒಡಂಬಡಿಕೆಗೆ ಸಹಿ ಹಾಕಿದೆ. ಮಾಧ್ಯಮ ಅಕಾಡೆಮಿಗೆ ಸ್ಪ್ರಿಂಗ್‌ಬೋರ್ಡ್ ನ ಡಿಜಿಟಲ್ ವಿಷಯಗಳಿಗೆ ಪ್ರವೇಶ ಲಭಿಸಲಿದೆ ಮತ್ತು ಅವರು ಸಾಫ್ಟ್ ಸ್ಕಿಲ್ ಗಳು, ವ್ಯಕ್ತಿತ್ವ ವಿಕಾಸ ಹಾಗೂ ಕೃತಕ ಬುದ್ಧಿಮತ್ತೆ ಸೇರಿದಂತೆ ಇತ್ತೀಚಿನ ತಂತ್ರಜ್ಞಾನಗಳ ಅವಲೋಕನ ಕುರಿತ ವಿಷಯಗಳಿಂದ ಪ್ರಯೋಜನ ಪಡೆಯಬಹುದು. ಇದು ವಿಶೇಷವಾಗಿ 2ನೇ ಹಾಗೂ 3ನೇ ಹಂತದ ನಗರಗಳ ಪತ್ರಕರ್ತರಿಗೆ ಖಂಡಿತವಾಗಿಯೂ ಸಹಾಯಕವಾಗಲಿದೆ" ಎಂದು ಇನ್ಫೋಸಿಸ್ ನ ಹಿರಿಯ ಉಪಾಧ್ಯಕ್ಷ (ಇಟಿಎ) ಸತೀಶ ಬಿ.ನಂಜಪ್ಪ ಅವರು ಅಭಿಪ್ರಾಯ ಪಟ್ಟಿದ್ದಾರೆ.

ತರಬೇತಿ ಇನ್‌ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಕಾರ್ಯಕ್ರಮದಡಿ ಪತ್ರಕರ್ತರಿಗೆ ಮೂರು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ಇದರಲ್ಲಿ ಡಿಜಿಟಲ್ ಮಾಧ್ಯಮಕ್ಕೆ ಅಗತ್ಯ ಕೌಶಲ್ಯಗಳು, ಕೃತಕ ಬುದ್ಧಿಮತ್ತೆಯ ಬಳಕೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಿಸಿದಂತೆ ತರಬೇತಿ ನೀಡಲಾಗುವುದು. ಈ ವರ್ಷದಲ್ಲಿ ಒಟ್ಟು ಮೂರು ಕಾರ್ಯಕ್ರಮಗಳ ಮೂಲಕ ಒಟ್ಟು 150 ಪತ್ರಕರ್ತರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಇದರಲ್ಲಿ ವಿಶೇಷವಾಗಿ ಒಂದು ಬ್ಯಾಚ್‌ನಲ್ಲಿ ಮಹಿಳಾ ಆಯವ್ಯಯದಡಿ ಪತ್ರಕರ್ತೆಯರಿಗೆ ತರಬೇತಿ ನೀಡಲು ಉದ್ದೇಶಿಸಿದೆ. ಜಿಲ್ಲಾ ಮಟ್ಟದ ಪತ್ರಕರ್ತರಿಗೆ ಈ ತರಬೇತಿಯಲ್ಲಿ ಆದ್ಯತೆ ನೀಡಲಾಗುವುದು.

ಇನ್ಫೋಸಿಸ್ ಸಂಸ್ಥೆಯು ಪ್ಲಾಟ್‌ಫಾರ್ಮ್ ಮತ್ತು ಪರಿಣತಿ ಒದಗಿಸಲಿದೆ. ಕರ್ನಾಟಕ ಮಾಧ್ಯಮ ಅಕಾಡೆಮಿಯು ಪತ್ರಕರ್ತರು ಹಾಗೂ ಶಿಕ್ಷಕರ ಭಾಗವಹಿಸುವಿಕೆ ಸಮನ್ವಯಗೊಳಿಸಲಿದೆ. ಪತ್ರಿಕೋದ್ಯಮ ಕ್ಷೇತ್ರದಲ್ಲಿ ಗುಣಮಟ್ಟದ ಸುಧಾರಣೆಯ ನಿಟ್ಟಿನಲ್ಲಿ ಇದೊಂದು ಮಹತ್ವದ ಉಪಕ್ರಮವಾಗಿದೆ. ಹೆಚ್ಚು ಪತ್ರಕರ್ತರಿಗೆ ತರಬೇತಿ ನೀಡುವ ಆಶಯದೊಂದಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿಯು ಮುಂದಡಿಯಿಟ್ಟಿದೆ.

ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ, ಸದಸ್ಯ ಹೆಚ್.ವಿ. ಕಿರಣ್ ಇನ್‌ಫೋಸಿಸ್ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಸತೀಶ ಬಿ. ನಂಜಪ್ಪ, ಹಿರಿಯ ಅಧಿಕಾರಿಗಳಾದ ಸಂತೋಷ್ ಅನಂತಪುರ, ಬಿಳಿಗಿರಿ ರಂಗ ಮೊದಲಾದವರು ಉಪಸ್ಥಿತರಿದ್ದರು.

# ಪಂಚ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿ: ಕೆ.ಇ.ಚಿದಾನಂದಪ್ಪ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**

ಕರ್ನಾಟಕ ರಾಜ್ಯದಲ್ಲಿ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ದೇಶದಲ್ಲಿಯೇ ಮಾದರಿ ಯೋಜನೆಗಳಾಗಿವೆ ಎಂದು ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

'ಗ್ಯಾರಂಟಿ ನಡೆ ಗ್ರಾಮ ಪಂಚಾಯತಿ ಕಡೆ' ಕಾರ್ಯಕ್ರಮದಡಿ ಕುರುಗೋಡು ತಾಲ್ಲೂಕಿನ ಸೋಮಸಮುದ್ರ ಗ್ರಾಮದ ಗ್ರಾಪಂನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಪಂಚ ಗ್ಯಾರಂಟಿ ಯೋಜನೆಗಳ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಜನಸಾಮಾನ್ಯರಿಗೆ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ತಲುಪಿಸಬೇಕು ಎಂಬ ಮಹಾದಾಸೆಯಾಗಿದ್ದು, ಅವರ ಆದೇಶದಂತೆ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಹೆಚ್.ಎಂ.ರೇವಣ್ಣ ಮತ್ತು ಉಪಾಧ್ಯಕ್ಷ ಮೆಹರೋಜ್ ಖಾನ್ ಅವರ ನಿರ್ದೇಶನ ಮೂಲಕ ಗ್ರಾಪಂ ಮಟ್ಟದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ತಲುಪಿಸುವಲ್ಲಿ ಆಗುವ ಲೋಪದೋಷಗಳ ಕುರಿತು ಚರ್ಚಿಸಲು ಗ್ಯಾರಂಟಿ ನಡೆ ಗ್ರಾಮ ಪಂಚಾಯತಿ ಕಡೆ ಎಂಬ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳಿಗೆ ಸಾಕಷ್ಟು ಅನುದಾನ ಖರ್ಚು ಮಾಡಿದ್ದರೂ ಅಭಿವೃದ್ಧಿ ಯೋಜನೆಗಳಿಗೆ ಹಣದ ಕೊರತೆ ಆಗದಂತೆ ಸರ್ಕಾರ ಕ್ರಮ ಕೈಗೊಂಡಿದೆ. ಇಂತಹ ಜನಪ್ರಿಯ ಕಾರ್ಯಕ್ರಮಗಳು ನಿರಂತರವಾಗಿ ನಡೆಯಲಿವೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾರ್ಯಕ್ರಮ ಮಾಡಿ ಗ್ಯಾರಂಟಿ ಯೋಜನೆಗಳ ಕುರಿತಾಗಿ ಅಲ್ಲಿಯ ಜನರ ದೂರು ಸ್ವೀಕರಿಸಿ, ಸ್ಥಳದಲ್ಲಿಯೇ ಸೂಕ್ತ ಪರಿಹಾರ ನೀಡಲು ಸರ್ಕಾರ ಮುತುವರ್ಜಿ ವಹಿಸಿದೆ. ಈ ಯೋಜನೆಗಳಡಿ ಕೇವಲ ಮಹಿಳೆಯರಷ್ಟೇ ಫಲಾನುಭವಿಗಳಾಗಿಲ್ಲ, ಪರೋಕ್ಷವಾಗಿ ಪುರುಷರೂ ಸಹ ಫಲಾನುಭವಿಗಳಾಗಿದ್ದಾರೆ ಎಂದರು.

ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪೈಕಿ ಗೃಹಲಕ್ಷ್ಮೀ ಶೇ.98., ಅನ್ನಭಾಗ್ಯ-ಶೇ.99., ಮತ್ತು ಶಕ್ತಿ, ಯುವನಿಧಿ, ಗೃಹಜ್ಯೋತಿ ಯೋಜನೆಗಳು ಶೇಕಡಾ ನೂರ-ಕ್ಕೆ ನೂರರಷ್ಟು ಪ್ರಗತಿ ಸಾಧಿಸಲು ಸಾಧ್ಯವಾಗಿದೆ ಎಂದು ತಿಳಿಸಿದರು.

ಕುರುಗೋಡು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಜಿ.ಬಸವನಗೌಡ ಅವರು ಮಾತನಾಡಿ, ಕುರುಗೋಡು ತಾಲ್ಲೂಕಿನಲ್ಲಿ ಶಕ್ತಿ ಯೋಜನೆಯಡಿ 219 ಕೋಟಿ ರೂ., ಅನ್ನಭಾಗ್ಯ ಯೋಜನೆಯಡಿ 26.07 ಕೋಟಿ ರೂ., ಗೃಹಗೃಹಲಕ್ಷ್ಮೀ ಯೋಜನೆಯಡಿ 294 ಕೋಟಿ ರೂ., ಗೃಹಜ್ಯೋತಿ ಯೋಜನೆಯಡಿ 340 ಕೋಟಿ ರೂ. ಮತ್ತು ಯುವನಿಧಿ ಯೋಜನೆಯಡಿ 95.35 ಲಕ್ಷ ರೂ. ಅನುದಾನ ಪಾವತಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪಂಚ ಗ್ಯಾರಂಟಿ ಯೋಜನೆ ಫಲಾನುಭವಿಗಳ ಕುಂದು-ಕೊರತೆ ಸಂವಾದ ನಡೆಸಲಾಯಿತು.

ಈ ಸಂದರ್ಭದಲ್ಲಿ ಕುರುಗೋಡು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಕಾರ್ಯದರ್ಶಿ ಹಾಗೂ ಕುರುಗೋಡು ತಾಪಂ ಇಒ ಕೆ.ವಿ.ನಿರ್ಮಲ, ಸೋಮಸಮುದ್ರ ಗ್ರಾಪಂ ಅಧ್ಯಕ್ಷರಾದ ರಾಜೇಶ್ವರಿ, ಉಪಾಧ್ಯಕ್ಷರಾದ ಗೃಹಲಕ್ಷ್ಮೀ, ಸದಸ್ಯರಾದ ಮಂಜುನಾಥ, ಬಸವರಾಜ ಗೊರವರ, ಶಕುಂತಲ ಹಾಗೂ ಇತರರು ಉಪಸ್ಥಿತರಿದ್ದರು.

# ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಕುರಿತು ಅರಿವು ಮೂಡಿಸಿ: ಪಿ.ಎಸ್.ಮಂಜುನಾಥ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**

ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಸ್ವಚ್ಛ ಭಾರತ್ ಯೋಜನೆಯ ಉದ್ದೇಶಗಳನ್ನು ಯಶಸ್ವಿಗೊಳಿಸಲು ತಮ್ಮೆಲ್ಲರ ಪಾತ್ರ ಅತೀ ಮುಖ್ಯವಾಗಿದೆ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ್ ಅವರು ಹೇಳಿದರು.

ನಗರಾಭಿವೃದ್ಧಿ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲೆಯ ಎಲ್ಲಾ ನಗರ, ಸ್ಥಳೀಯ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಸಾಮರ್ಥ್ಯ ಅಭಿವೃದ್ಧಿ ಘಟಕದಡಿ ಸಮಗ್ರ ಘನ ತ್ಯಾಜ್ಯ ವಸ್ತು ನಿರ್ವಹಣೆಯ ಕುರಿತು ನಗರದ ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಒಂದು ದಿನದ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆರೋಗ್ಯಕರ ಮತ್ತು ಸುಸ್ಥಿರ ಸಮುದಾಯಗಳನ್ನು ನಿರ್ಮಿಸಲು ತ್ಯಾಜ್ಯ ನಿರ್ವಹಣೆಯು ಅತ್ಯಗತ್ಯವಾಗಿದೆ. ತರಬೇತಿಯನ್ನು ಪಡೆದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಮತ್ತು ಕಮ್ಯುನಿಟಿ ಮೊಬೆಲೈಜರ್ ಗಳು ತಮ್ಮ-ತಮ್ಮ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕ್ರಿಯಾಶೀಲರಾಗಿ ಸ್ವಚ್ಛತೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಸ್ವಚ್ಛ ನಗರ, ಪಟ್ಟಣಗಳನ್ನಾಗಿ ಮಾರ್ಪಾಡಿಸಲು ಎಲ್ಲರ ಸಹಕಾರ ಮುಖ್ಯವಾಗಿದೆ ಎಂದು ಹೇಳಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಿ.ಅಬ್ದುಲ್ ರೆಹಮಾನ್ ಮಾತನಾಡಿ, ತರಬೇತಿ ಕಾರ್ಯಾಗಾರದ ಸದುಪಯೋಗ ಪಡೆದುಕೊಂಡು ಕಮ್ಯುನಿಟಿ ಮೊಬೆಲೈಜರ್ ಗಳು ಸೂಕ್ತ ಸಲಹೆ-ಸೂಚನೆಗಳನ್ನು ಅಳವಡಿಸಿಕೊಳ್ಳುವ ಮೂಲಕ ನಗರ, ಪಟ್ಟಣ, ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಅಭಿವೃದ್ಧಿಗೆ ಆದ್ಯತೆ ನೀಡಲು ಮುಂದಾಗಬೇಕು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿವೃತ್ತ ಮುಖ್ಯ ಪರಿಸರ ಅಧಿಕಾರಿ ರಮೇಶ್.ಬಿ.ಎನ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿ, ಕಸದ ಉತ್ಪಾದನೆಯನ್ನು ಕಡಿಮೆ ಮಾಡಲು, ಮರುಬಳಕೆ ಮತ್ತು ಅದನ್ನು ಗರಿಷ್ಠಗೊಳಿಸಲು ಹಾಗೂ ಪರಿಸರದ ಮೇಲಿನ ತ್ಯಾಜ್ಯದ ಪರಿಣಾಮವನ್ನು ಕಡಿಮೆ ಮಾಡಲು ಸಮಗ್ರ ತ್ಯಾಜ್ಯ ನಿರ್ವಹಣೆಯು ವಿಶಾಲವಾದ ಕಾರ್ಯಚಟುವಟಿಕೆಯಾಗಿದೆ ಎಂದು ತಿಳಿಸಿದರು.

ಸಮುದಾಯಗಳಲ್ಲಿ ಉತ್ಪಾದನೆಯಾಗುವ ಕಸ, ಕಸದ ಸಂಗ್ರಹ, ಸಾಗಣೆ, ವಿಂಗಡಣೆ, ಸಂಸ್ಕರಣೆ ಮತ್ತು ವಿಲೇವಾರಿ ಪ್ರಕ್ರಿಯೆಗಳನ್ನು ಸೂಕ್ತವಾಗಿ ಅರಿತುಕೊಳ್ಳಬೇಕು. ಆರೋಗ್ಯಕರ ಮತ್ತು ಸುಸ್ಥಿರ ಸಮುದಾಯಗಳನ್ನು ನಿರ್ಮಿಸಲು ತ್ಯಾಜ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದು ಪ್ರಮುಖ ಗು-ರಿಯಾಗಿದೆ ಎಂದರು.

ಸ್ವಚ್ಛತಾ ಕಾರ್ಯದ ಬಗೆ ಮನೆ-ಮನೆ ಕಸ ವಿಂಗಡಣೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು. ಈ ಕುರಿತು ಸಾರ್ವಜನಿಕರಿಗೆ ಸೂಚನೆಗಳನ್ನು ನೀಡಲು ಸಿಬ್ಬಂದಿಯವರಿಗೆ ಹ್ಯಾಂಡ್ ಮೈಕ್ ಗಳನ್ನು ವಿತರಿಸಬೇಕು ಎಂದರಲ್ಲದೇ, ಬಳಕೆಯ ಕುರಿತು ಮಾರ್ಗಸೂಚಿ ನೀಡಿದರು.

ಪೌರಕಾರ್ಮಿಕರಿಗೆ ಹಾಗೂ ಸಫಾಯಿ ಕರ್ಮಚಾರಿಗಳಿಗೆ ಸುರಕ್ಷತಾ ಸಾಧನಗಳ ಬಳಕೆ ಹಾಗೂ ನಿರ್ವಹಣೆಗಳ ಕುರಿತು ಹಾಗೂ ಪ್ರಥಮ ಚಿಕಿತ್ಸೆಯ ಕಿಟ್ ಬಳಕೆಯ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಪ್ರಕೃತಿ ಫೌಂಡೇಷನ್, ಬೆಂಗಳೂರು ಮತ್ತು ಲೇಟ್ ಬಿ ದ ಚೇಂಜ್ ಸಂಸ್ಥೆಯ ಪದಾಧಿಕಾರಿಗಳು, ಮೂಲ ಘನ ತ್ಯಾಜ್ಯ ನಿರ್ವಹಣೆ ಹಾಗೂ ಮೂಲ ವಿಂಗಡಣೆ ಮತ್ತು ಮನೆಯಲ್ಲಿಯೇ ಗೊಬ್ಬರ ತಯಾರಿಕೆಯ ಕುರಿತು ನೇರ ಸಂದರ್ಶನದ ಮೂಲಕ ತರಬೇತಿ ನೀಡಲಾಯಿತು.

ಸ್ವಚ್ಛ ಸರ್ವೇಕ್ಷಣೆ-2025 ರನ್ವಯ ಜಿಲ್ಲೆಯ ಫಲಿತಾಂಶ ಹಾಗೂ ಶ್ರೇಣಿಯ ಕುರಿತು ಪರಿಶೀಲನೆ ಮಾಡಿ, ಆಯಾ ಹಂತ, ಘಟಕದಲ್ಲಿ ಕಂಡುಬಂದ ಲೋಪ-ದೋಷಗಳ ನ್ಯೂನ್ಯತೆಗಳನ್ನು ಸರಿಪಡಿಸಿಕೊಳ್ಳುವ ಕುರಿತು ವಿಶ್ಲೇಷಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು, ಮುಖ್ಯಾಧಿಕಾರಿಗಳು, ಪರಿಸರ ಅಭಿಯಂತರರು, ಆರೋಗ್ಯ ನಿರೀಕ್ಷಕರು ಮತ್ತು ಕಮ್ಯುನಿಟಿ ಮೊಬೆಲೈಜರ್ ಗಳು ಹಾಗೂ ಇತರೆ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಅರಿವು ಶೈಕ್ಷಣಿಕ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**

ಸೆ.08-ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ ವತಿಯಿಂದ 2025-26ನೇ ಸಾಲಿನ ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಸಾಲ-ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹತೆ:

ಈ ಯೋಜನೆಯಲ್ಲಿ ಸಿ.ಇ.ಟಿ./ ಎನ್.ಇ.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸ್ ಹಾಗೂ ಪಿ.ಹೆಚ್.ಡಿ ಯಲ್ಲಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ ಒಂದು ರೂ. 1 ಲಕ್ಷ ಸಾಲವನ್ನು ಶೇ.2ರ ಬಡ್ಡಿದರದಲ್ಲಿ ಶೈಕ್ಷಣಿಕ ಸಾಲ ನೀಡಲಾಗುವುದು.

ವ್ಯಾಸಂಗ ಪೂರ್ಣಗೊಂಡ ನಂತರ 04 ತಿಂಗಳ ವಿರಾಮಾವಧಿ ಇರುತ್ತದೆ. ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು. ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದ ಒಳಗಿನವರಾಗಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.6 ಲಕ್ಷ ಮಿತಿಯೊಳಗಿರಬೇಕು.

ಸಾಮಾನ್ಯ ವರ್ಗದ ಆರ್ಯವೈಶ್ಯ ಸಮುದಾಯಕ್ಕೆ ಸೇರಿರಬೇಕು ಮತ್ತು ನಮೂನೆ-ಜಿ ಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರವಿರಬೇಕು.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಹ ಅರ್ಜಿದಾರರನ್ನು ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಶೇಷಚೇತನರಿಗೆ ಶೇ.5 ಮೀಸಲಾತಿ ಇದ್ದು, ಒಂದು ಕುಟುಂಬದಲ್ಲಿ ಇಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

ಅರ್ಜಿಗಳನ್ನು ಆನ್‌ಲೈನ್ ವೆಬ್‌ಸೈಟ್ ಃಣಣಠಿ://ಞಚಿಛಿಜಛಿ.ಞಚಿಡಿಟಿಚಿಣಚಿಞಚಿ.ರಠತ.ಟಿ ನಲ್ಲಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್ ನ ಆರ್ಯವೈಶ್ಯ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ 08392-267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಿಳಾ ಧ್ವನಿ ಸಂಸ್ಥೆಯ ವತಿಯಿಂದ ಶಿಕ್ಷಕರ ದಿನಾಚರಣೆ:

# 15 ಜನ ಶಿಕ್ಷಕಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ



**ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :**

ನಗರದ ಗೌರಿಶಂಕರ ದೇವಸ್ಥಾನದ ಆವರಣದಲ್ಲಿ ಕೊಪ್ಪಳದ ಮಹಿಳಾ ಧ್ವನಿ ಸಂಸ್ಥೆ ಮತ್ತು ಕವಿತಾ ಮೀಡಿಯಾ ಸೋರ್ಸ್ ಪ್ರೈ.ಲಿ ಇವರುಗಳ ಸಂಯುಕ್ತಾಶ್ರದಲ್ಲಿ ಶಿಕ್ಷಕರ ದಿನಾಚರಣೆ ಮತ್ತು ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಸಸಿಗೆ ನೀರಾಕುವ ಮೂಲಕ ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು. ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ನಿವೃತ್ತ ಶಿಕ್ಷಕರಾದ ಸೋಮಶೇಖರ್ ಹರ್ತಿ ಮಾತನಾಡಿ ಶಿಕ್ಷಕರು ಪಾಠಬೋಧನೆಯ ಜೊತೆಗೆ ಮಕ್ಕಳಲ್ಲಿರುವ ಕೌಶಲ್ಯ ಗುರುತಿಸಿ ಪ್ರೋತ್ಸಾಹಿಸಬೇಕು. ವಿದ್ಯಾರ್ಥಿಗಳ ಜೊತೆಗೆ ತಾವು ಕೂಡ ಪ್ರತಿದಿನವೂ ಹೊಸದನ್ನು ಕಲಿಯಬೇಕು. ಮಕ್ಕಳಿಗೆ ಶಿಸ್ತು, ಸಮಯ ಪ್ರಜ್ಞೆ ಮತ್ತು ಹಿರಿಯರಿಗೆ ಗೌರವಿಸುವ ಸಂಸ್ಕಾರವನ್ನು ನೀಡಬೇಕು. ಗುರುವಿನ ಸ್ಥಾನ ಪವಿತ್ರವಾದದ್ದು, ಶಿಕ್ಷಕರಿಗೆ ಸಮಾಜವನ್ನು ತಿದ್ದುವ ಮತ್ತು ಕಟ್ಟುವ ಶಕ್ತಿ ಇದೆ ಎಂದರು.

ಬೀರಪ್ಪ ಅಂಡಗಿ ಮಾತನಾಡಿ ಶಿಕ್ಷಕರು ಪ್ರತಿಯೊಬ್ಬರ ಜೀವನದಲ್ಲೂ ಬಹುಮುಖ್ಯ ಪಾತ್ರವಹಿಸುತ್ತಾರೆ. ವಿದ್ಯಾರ್ಥಿಗಳ ಬದುಕು ರೂಪಿಸುವುದರ ಜೊತೆಗೆ ಎಲೆಮರೆಯಾಗಿ ಸೇವೆ ಸಲ್ಲಿಸುತ್ತಾರೆ ಅವರ ಸೇವೆಯನ್ನು ಗುರುತಿಸಿ ಗೌರವಿಸಿದ್ದು ಹೆಮ್ಮೆಯ ಸಂಗತಿ.

ಸಂಘಟಕ ಬಿ.ಎನ್. ಹೊರಪೇಟಿ ಮಾತಮಾಡಿ ಸಮಾಜದ ಏಳ್ಗೆಯಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯವಾಗಿದ್ದು, ಮಕ್ಕಳು ಗುರುವಿನ ಮಾರ್ಗದರ್ಶನದಲ್ಲಿ ಬದುಕು ರೂಪಿಸಿಕೊಳ್ಳಬೇಕು, ಶಿಕ್ಷಕರ ಸೇವೆ ಬೆಲೆಕಟ್ಟಲಾಗದ್ದು ಅವರನ್ನು ಗೌರವಿಸುವುದು ನಮ್ಮ ಸೌಭಾಗ್ಯ ಎಂದರು. ಕಾರ್ಯಕ್ರಮದಲ್ಲಿ ಹನಮಂತಪ್ಪ ಚಲವಾದಿ, ವೀರಭದ್ರಯ್ಯ, ಗೀತಾ, ಶ್ರೀದೇವಿ, ಬಸವರಾಜ, ದೀಪಾ ಮೇಟಿ, ಬಸವನಗೌಡ, ಹುಸೇನಪಾಷಾ ಇಟಗಿ, ಉಮೇಶ ಕರಿಗಾರ, ಗೌರಿ, ವಾಣಿಶ್ರೀ, ಪರಮೇಶ್ವರಪ್ಪ, ಸುಮಂಗಲಾ, ಬೃಂದಾ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದ ನೆನಪಿಗಾಗಿ ಸಸಿ ನೆಡಲಾಯಿತು. ಇದೇ ವೇಳೆ ಪ್ರಿಯದರ್ಶಿನಿ ಮುಂಡರಗಿಮಠ, ಸೌಮ್ಯಶ್ರೀ, ಶರಣಪ್ಪ ಸಿಂಗನಾಳ, ಅರ್ಚಕರು ಶಿವಯ್ಯ ಹಿರೇಮಠ, ವೀರಭದ್ರಯ್ಯ ಹಾಗೂ ಮಹಿಳಾ ಮಂಡಳದ ಸದಸ್ಯರು, ಮಹಿಳಾ ಧ್ವನಿ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತಿ ಇದ್ದರು.

# ಬಳ್ಳಾರಿ: ಜೋಗ್ ಫಾಲ್ಸ್, ಗೋಕಾಕ್ ಫಾಲ್ಸ್‌ಗೆ ವಿಶೇಷ ಸಾರಿಗೆ ಬಸ್ ಕಾರ್ಯಾಚರಣೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ,**

ಸೆ.08-

ಬಳ್ಳಾರಿಯಿಂದ ಜೋಗ್ ಫಾಲ್ಸ್ ಮತ್ತು ಗೋಕಾಕ್ ಫಾಲ್ಸ್ ಪ್ರವಾಸಿ ತಾಣಗಳಿಗೆ ಹೋಗುವ ಪ್ರಯಾಣಿಕರ ಅನುಕೂಲಕ್ಕಾಗಿ ವಾರಾಂತ್ಯದ ದಿನಗಳಲ್ಲಿ ವಿಶೇಷ ವೇಗದೂತ ಸಾರಿಗೆ ಸೌಲಭ್ಯವನ್ನು ಬಳ್ಳಾರಿ ವಿಭಾಗದಿಂದ ಕಲ್ಪಿಸಲಾಗಿದೆ.

*ಬಳ್ಳಾರಿ-ಜೋಗ್ ಫಾಲ್ಸ್:*

ಬಳ್ಳಾರಿಯಿಂದ ಬೆಳಿಗ್ಗೆ 06 ಗಂಟೆಗೆ ಹೊರಟು, ಮಧ್ಯಾಹ್ನ 02 ಗಂಟೆಗೆ ಜೋಗ್ ಫಾಲ್ಸ್ ಗೆ ತಲುಪಲಿದೆ (ವಯಾ ಬಳ್ಳಾರಿ-ಚಳ್ಳಕೆರೆ-ಚಿತ್ರದುರ್ಗ-ಚನ್ನಗಿರಿ-ಶಿವಮೊಗ್ಗ-ಸಾಗರ-ಜೋಗ್ ಫಾಲ್ಸ್). ಜೋಗ್ ಫಾಲ್ಸ್ ನಿಂದ ರಾತ್ರಿ 08 ಗಂಟೆಗೆ ಅಲ್ಲಿಂದ ಹೊರಟು ಮರುದಿನ ಬೆಳಿಗ್ಗೆ 04 ಗಂಟೆಗೆ ಬಳ್ಳಾರಿಗೆ ತಲುಪಲಿದೆ. ಪ್ರಯಾಣ ದರ- ರೂ.570.

ಈ ಸಾರಿಗೆಯು ಸೆ.13 ರಿಂದ ಪ್ರತಿ ಶನಿವಾರ ಮತ್ತು ಪ್ರತಿ ರವಿವಾರ ಕಾರ್ಯಾಚರಣೆ ಮಾಡಲಾಗುವುದು.

*ಬಳ್ಳಾರಿ-ಗೋಕಾಕ್ ಫಾಲ್ಸ್:*

ಬಳ್ಳಾರಿಯಿಂದ ಬೆಳಿಗ್ಗೆ 06 ಗಂಟೆಗೆ ಹೊರಟು, ಮಧ್ಯಾಹ್ನ 01.15 ಕ್ಕೆ ಗೋಕಾಕ್ ಫಾಲ್ಸ್ ಗೆ ತಲುಪಲಿದೆ (ವಯಾ ಹೊಸಪೇಟೆ-ಕೊಪ್ಪಳ-ಗದಗ-ನವಲಗುಂದ-ನರಗುಂದ-ಹುಲಿಕಟ್ಟಿ-ಮನೊಳ್ಳಿ-ಯರಗಟ್ಟಿ-ಮಮದಾಪುರ). ಗೋಕಾಕ್ ಫಾಲ್ಸ್ ನಿಂದ ರಾತ್ರಿ 08 ಗಂಟೆಗೆ ಅಲ್ಲಿಂದ ಹೊರಟು ಮರುದಿನ ಬೆಳಿಗ್ಗೆ 04 ಗಂಟೆಗೆ ಬಳ್ಳಾರಿಗೆ ತಲುಪಲಿದೆ. ಪ್ರಯಾಣ ದರ- ರೂ.515.

ಈ ಸಾರಿಗೆಗೆ ತಿತಿತಿ.ಞsಡಿಣಛಿ.ಟಿ ಗೆ ಲಾಗ್-ಇನ್ ಆಗುವ ಮೂಲಕ ಆನ್ ಲೈನ್ ಮುಖಾಂತರ ಮುಂಗಡ ಆಸನಗಳನ್ನು ಕಾಯ್ದಿರಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.7760992163, 7760992164 ಮತ್ತು 7760992167 ಗೆ ಸಂಪರ್ಕಿಸಬಹುದು.


ಈ ವಿಶೇಷ ಸಾರಿಗೆ ಸೌಲಭ್ಯವನ್ನು ಸಾರ್ವಜನಿಕ ಪ್ರಯಾಣಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬಳ್ಳಾರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕಿನ ಪತ್ರಕರ್ತರಿಗೆ ಇಂದು ಉಚಿತ ಆರೋಗ್ಯ ತಪಾಸಣೆ

**ಮಲ್ಲಮ್ಮ ನುಡಿವಾರ್ತೆ ಲಿಂಗಸಗೂರು.**

-ಪತ್ರಕರ್ತರ ಆರೋಗ್ಯದ ಹಿತದೃಷ್ಟಿಯಿಂದ ಪತ್ರಕರ್ತ ರಿಗೆ ಹಾಗೂ ಅವರ ಕುಟುಂಬದವರಿಗೆ ನಾಳೆ ಪಟ್ಟಣದ ಪತ್ರಿಕಾ ಭವನದಲ್ಲಿ ಉಚಿತ ಆರೋಗ್ಯಾ ತಪಸಾಣೆ ಶಿಬಿರ ಆಯೋಜಿಸಲಾಗಿದೆ ಎಂದು ಸಾರ್ವಜನಿಕರ ಆಸ್ಪತ್ರೆಯ ಮುಖ್ಯವೈದ್ಯಾಧಿಕಾರಿ ಡಾ.ರುದ್ರಗೌಡ ಪಾಟೀಲ ತಿಳಿಸಿದ್ದಾರು.

ಈ ಕುರಿತು ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಸಾರ್ವಜನಿಕ



ಆಸ್ಪತ್ರೆ ಲಿಂಗಸುಗೂರು ಇ ವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿರುವ ಆರೋಗ್ಯ ತಪಾಸಣೆ ಶಿಬಿರದಲ್ಲಿ ಶಿಬಿರದಲ್ಲಿ ಹೃದಯ, ಕಣ್ಣು, ಎಲವು ಮತ್ತು ಕೀಲು ನೋವು ಸೇರಿದಂತೆ ತಜ್ಞವೈದ್ಯರು ಆರೋಗ್ಯ ತಪಾಸಣೆ ಮಾಡಿ ಉಚಿತ ಔಷಧಿಯನ್ನು ನೀಡಲಿದ್ದಾರೆ. ಇದರ ಸದುಪಯೋಗವನ್ನು ತಾಲೂಕಿನ ಪತ್ರಕರ್ತರು ಪಡೆಯಬೇಕೆಂದರು.

ಆರೋಗ್ಯ ತಪಾಸಣೆಗೆ ಆಗಮಿಸುವ ಪತ್ರಕರ್ತರು ಸಂಘದ ಗುರುತಿನ ಚೀಟಿ ಹಾಗೂ ಆಧಾರ ಕಾರ್ಡ ಕಡ್ಡಾಯವಾಗಿ ತರಬೇಕು. ಪತ್ರಕರ್ತರೆಲ್ಲೂರು ಈ ಉಚಿತ ಆರೋಗ್ಯ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಗುರುರಾಜ ಗೌಡೂರು ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ ಜಂಟಿ ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದರು.

# ಕೋಳಿ ಅಂಗಡಿ, ದುರ್ನಾಥಕ್ಕೆ ಬೇಸತ್ತ ಜನತೆ

**ಮಲ್ಲಮ್ಮ ನುಡಿವಾರ್ತೆ ಕೊಪ್ಪಳ :**

ತಾಲೂಕಿನ ಇಲಕಲ್ ಗಡ ಗ್ರಾಮದಲ್ಲಿ ಇರ್ಕಲ್ಗಡ ಕನಕಾಪುರ ರಸ್ತೆಯಲ್ಲಿ ಊರಿನ ಮಧ್ಯಭಾಗದಲ್ಲಿರುವ ಕೋಳಿ ಅಂಗಡಿಯ ದುರ್ನಾಥಕ್ಕೆ ನಿವಾಸಿಗಳು ಬೇಸತ್ತು ಹೋಗಿದ್ದಾರೆ ಸತ್ತ ಕೋಳಿಗಳನ್ನು ಅಲ್ಲಿಯೇ ಬಿಸಾಡಿ ಕೋಳಿಯ ಬಿಡಿ ಭಾಗಗಳನ್ನು ಎಲ್ಲೆಂದರಲ್ಲಿ ಬಿಸಾಡಿ ಗಬ್ಬು ನಾರುತ್ತಿದೆ ಅಂಗಡಿಯ ಸುತ್ತಮುತ್ತಲು ಸಾಕಷ್ಟು ಕುಟುಂಬಗಳು ವಾಸವಾಗಿವೆ .

ಈ ವಾಸನೆಗೆ ಕುಟುಂಬಸ್ಥರು ಹೈರಾಣವಾಗಿ ಹೋಗಿದ್ದಾರೆ ಸಾಕಷ್ಟು ಬಾರಿ ಸ್ಥಳೀಯ ಗ್ರಾಮ ಪಂಚಾಯಿತಿಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರು ಕ್ಯಾರಿ ಅನ್ನುತ್ತಿಲ್ಲ ಅಂಗಡಿಯವರಿಗೆ ಹೇಳಿದರು ನಾನು ಪಂಚಾಯಿತಿಗೆ ಟ್ಯಾಕ್ಸ್ ಕಟ್ಟುತ್ತೇನೆ ನೀವು ಏನು ಮಾಡುತ್ತೀರಾ ಮಾಡಿಕೊಳ್ಳಿ ಎಂದು ಅವಾಜ್ ಹಾಕುತ್ತಾನೆ ದಿನಬೆಳಗಾದರೆ ಶಾಲಾ-ಕಾಲೇಜುಗಳಿಗೆ ಸಣ್ಣ ಮಕ್ಕಳು ತಿರುಗಾಡುತ್ತವೆ ಅಂಗಡಿಯ ಮುಂದೆ ಸಾಕಷ್ಟು ಬೀದಿ ನಾಯಿಗಳು ಮಕ್ಕಳನ್ನು ಕಚ್ಚಲು ಬರುತ್ತವೆ ಸ್ಥಳೀಯರು ವರದಿಗಾರರ ಮುಂದೆ ತಮ್ಮ ಅಳಲನ್ನು ತೋಡಿ-ಕೊಂಡಿದ್ದಾರೆ ಈಗಲಾದರೂ ಎಚ್ಚೆತ್ತುಕೊಂಡು ಇಲ್ಲಿರುವ ಕೋಳಿ ಅಂಗಡಿಯನ್ನು ಸ್ಥಳಾಂತರ ಗೊಳಿಸಿ ನಮ್ಮ ಜೀವನ ಮತ್ತು ನಮ್ಮ ಮಕ್ಕಳ ಜೀವ ಉಳಿಸಿ ಎಂದು ಕೇಳಿಕೊಂಡರು ಜಿಲ್ಲೆಯಾದ್ಯಂತ ಈ ಹಿಂದೆ ಬೀದಿ ನಾಯಿಗಳ ಹಾವಳಿಗೆ ಸಾಕಷ್ಟು ಮಕ್ಕಳು ಕಡಿತಕ್ಕೊಳಗಾಗಿವೆ ವರದಿಗಾರರು ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಿದಾಗ ಇದು ನಮ್ಮ ಗಮನಕ್ಕೆ ಬಂದಿರುವುದಿಲ್ಲ ಈಗ ತಾವು ಗಮನಕ್ಕೆ ತಂದಿದ್ದೀರಿ ಆದಷ್ಟು ಬೇಗನೆ ಸ್ಥಳೀಯರಿಗೆ ಮತ್ತು ಅಲ್ಲಿ ವಾಸ ಮಾಡುವ ಕುಟುಂಬಸ್ಥರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಕೋಳಿ ಕಟಿಂಗ್ ಶಾಪ್ ಅನ್ನು ಸ್ಥಳಾಂತರ ಪಡಿಸಿ ಕ್ರಮವನ್ನು ಕೈಗೊಳ್ಳುತ್ತೇವೆ ಎಂದು ಹೇಳಿದರು.



# ಶಿಕ್ಷಣವೇ ಶಕ್ತಿ ಶಿಕ್ಷಣದಿಂದಲೇ ಪ್ರಗತಿ :ಸಚಿವ ಈಶ್ವರಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ


ಭಾಲ್ಕಿ:ಸೆ.8: ಶಿಕ್ಷಣವೇ ಶಕ್ತಿ, ಶಿಕ್ಷಣದಿಂದಲೇ ಪ್ರಗತಿ ಸಾಧ್ಯ, ಶಿಕ್ಷಕರಿಗೆ ಗೌರವಕೊಡುವ ಕಾರ್ಯ ನಮ್ಮಿಂದಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಪ್ರಯಾಗ ಫಂಕ್ಷನ್ ಹಾಲ್ ನಲ್ಲಿ ಸೋಮವಾರ ನಡೆದ ಬೀದರ ಜಿಲ್ಲಾ ಹಾಗು ಭಾಲ್ಕಿ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಕರಿಗೆ ಪಾರದರ್ಶಕತೆಯಿಂದ ಗೌರವ ಕೊಡುವ ಕಾರ್ಯವಾಗಬೇಕು. ಧಾರ್ಮಿಕ ಪ್ರಧಾನವಾದ ನಮ್ಮ ದೇಶದಲ್ಲಿ ಗುರುಕುಲ ಪದ್ಧತಿ ಎತ್ತಿ ಹಿಡಿಯಲಾಗಿದೆ. ಶಿಕ್ಷಕರ ವೃತ್ತಿ ಒಂದು ಸಾಮಾಜಿಕ ಸೇವೆಯಾಗಿದೆ. ಶಿಕ್ಷಕ ವೃತ್ತಿಯ ಪಾವಿತ್ರತೆ ಕಾಪಾಡಿಕೊಂಡು ಹೋಗುವುದು ಎಲ್ಲಾ ಶಿಕ್ಷಕರ ಕರ್ತವ್ಯವಾಗಿದೆ. ರಾಷ್ಟ್ರ ನಿರ್ಮಾಣ ಮಾಡುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ನಮ್ಮ ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡುತ್ತಿದೆ. ಕಲ್ಯಾಣ ಕರ್ನಾಟಕ ಭಾಗಕ್ಕೆ, ಪ್ರತಿವರ್ಷ ಶಿಕ್ಷಣಕ್ಕೆ ಹೆಚ್ಚುವರಿಯಾಗಿ ಶಿಕ್ಷಣ ಅವಿಸ್ಕಾರ ರೂಪದಲ್ಲಿ 125 ಕೋಟಿ ರೂ. ಅನುದಾನ ನೀಡಲಾಗುತ್ತಿದೆ. 3 ವರ್ಷಗಳ ಅವಧಿಯಲ್ಲಿ ಬೀದರ ಜಿಲ್ಲೆಗೆ ಶಿಕ್ಷಣಕ್ಕಾಗಿ 4.5ಕೋಟಿ ರೂ. ಅನುದಾನ ಒದಗಿಸಲಾಗಿದೆ. ಜೂನ್ ತಿಂಗಳಿನಲ್ಲಿಯೇ ಶಿಕ್ಷಕರ ಕೊರತೆ ನೀಗಿಸುವ ನಿಟ್ಟಿನಲ್ಲಿ ಅತಿಥಿ ಶಿಕ್ಷಕರನ್ನು ನೇಮಿಸಕೊಳ್ಳಲಾಗಿದೆ. ಶಿಕ್ಷಕರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ, ಎಸ್.ಎಸ್.ಎಲ್.ಸಿ ಫಲಿತಾಂಶ ಉತ್ತಮ ಪಡಿಸುವ ಕಾರ್ಯಮಾಡಬೇಕು ಎಂದು ಹೇಳಿದರು. ಹಿರೇಮಠ ಸಂಸ್ಥಾನದ ಶ್ರೀ ಮಹಾಲಿಂಗಸ್ವಾಮೀಜಿ, ಅಣದೂರಿನ ವರಜ್ಯೋತಿ ಭಂತೆ, ಪ್ರೇರಣಾತಾಯಿ ಭೊಸ್ಲೆ ತೋರಣೆಕರ ಸಾನಿಧ್ಯವಹಿಸಿ ಮಾತನಾಡಿದರು. ಉಪನಿರ್ದೇಶಕ ಎಚ್.ಜಿ.ಸುರೇಶ ಪ್ರಾಸ್ತಾವಿಕವಾಗಿ ಮಾತನಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್, ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ದತ್ತಾತ್ರಿ ಕಾಟಕರ ಶಿಕ್ಷಕರ ಬಗ್ಗೆ ಮಾತನಾಡಿದರು. ಇದೇವೇಳೆ 2024–25ನೇ ಸಾಲಿನ 15 ಶಿಕ್ಷಕರಿಗೆ ಮತ್ತು 2025–26ನೇ ಸಾಲಿನ 14 ಶಿಕ್ಷಕರು ಸೇರಿದಂತೆ ಒಟ್ಟು 29 ಶಿಕ್ಷಕರಿಗೆ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಅಮೃತರಾವ ಚಿಮಕೋಡೆ, ಡಾ. ಗಿರೀಶ ಬದೋಲೆ, ಸೋಮಶೇಖರ ಬಿರಾದಾರ ಚಿದ್ರಿ, ರವೀಂದ್ರರೆಡ್ಡಿ ಮಾಲಿಪಾಟೀಲ, ಮಹಬೂಬ್ ಪಟೇಲ, ಶಶಿಕಲಾ ಸಿಂಧನಕೆರೆ, ವಿಜಯಕುಮಾರ ರಾಜಭವನ, ಹಣಮಂತರಾವ ಚವ್ಹಾಣ, ಶಿವಕುಮಾರ ಸದಾಫುಲೆ, ಪ್ರಶಾಂತ ರಾಗಾ, ಮನೋಹರ ಹೊಳಕರ, ಸೂರ್ಯಕಾಂತ ಪಾಟೀಲ, ಶಿವರಾಜ ಕಪಲಾಪುರೆ, ವೈಜಿನಾಥ ಸಾಗರ, ರಾಜಕುಮಾರ ಬಿರಾದಾರ, ಬಸವರಾಜ ಜಕ್ಕಾ, ಚಂದ್ರಶೇಖರ ಬನ್ನಾಳೆ, ರಾಜಕುಮಾರ ಜೋಳದಪಕೆ, ಅಶೋಕ ತಾಂಬೋಳೆ, ಹಣಮಂತ ಕಾರಾಮುಂಗೆ, ಭೀಮಣ್ಣಾ ಕೊಂಕಣೆ, ಉತ್ತಮ ಸಿಂಧೆ, ಸಂಜಯಕುಮಾರ ಬಿರಾದಾರ, ಗುರುಪ್ರಸಾದ, ಮಜಹರ ಹುಸೇನ, ಸಿದ್ದವೀರಯ್ಯಾ ರುದನೂರ, ಶಿವಕುಮಾರ ಪುಲಾರಿ, ಜಾಲಿಂದ್ರ ಮೇತ್ರೆ, ಮಲ್ಲಿಕಾರ್ಜುನ ಕನ್ನಾಳೆ, ಸಂತೋಷ ಸ್ವಾಮಿ, ಕುಸುಮಕುಮಾರಿ ರೆಡ್ಡಿ, ಚೈತನ್ಯಾ ಚನಶೆಟ್ಟಿ ಉಪಸ್ಥಿತರಿದ್ದರು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಮನೋಹರ ಹೊಳಕರ ವಂದಿಸಿದರು.

ನಮ್ಮ ಸರ್ಕಾರ ಎಲ್ಲಾ ಕ್ಷೇತ್ರಗಳಲ್ಲಿಯೂ ನುಡಿದಂತೆ ನಡೆದಿದ್ದೇವೆ. ಈ ಹಿಂದೆ ತಿಳಿಸಿದಹಾಗೆ ಎನ್‌ಪಿಎಸ್ ರದ್ದು ಗೊಳಿಸಿ ಓಪಿಎಸ್ ಜಾರಿ ಮಾಡುವಲ್ಲಿ ಸಚಿವ ಸಂಪುಟದಲ್ಲಿ ಚರ್ಚಿಸಿ ಆದಷ್ಟು ಬೇಗ ಕ್ರಮ ಕೈಗೊಳ್ಳಲಾಗುವುದು. ಅಲ್ಲದೇ ಭಾಲ್ಕಿಯಲ್ಲಿ ಉತ್ತಮವಾದ ನೂತನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ನಿರ್ಮಾಣ ಮಾಡಲು ವಿನ್ಯಾಸ ಕಲ್ಪಿಸಲಾಗಿದೆ. ಬರುವ ವರ್ಷದ ಒಳಗೆ ನೂತನ ಬಿಇಓ ಕಚೇರಿ ನಿರ್ಮಿಸಲಾಗುವುದು.

**ಈಶ್ವರ ಖಂಡ್ರೆ, ಜಿಲ್ಲಾ ಉಸ್ತುವಾರಿ ಸಚಿವರು.**

# ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ 250ಕ್ಕೂ ಹೆಚ್ಚು ಜನರು ಖಗ್ರಾಸ್ ಚಂದ್ರಗ್ರಹಣ ವೀಕ್ಷಣೆ





ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಆ.08–ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಸೆಪ್ಟೆಂಬರ್ 7 ಮತ್ತು 8 ರಂದು ದೂರದರ್ಶಕದ ಮೂಲಕ ಸಂಪೂರ್ಣ ಚಂದ್ರಗ್ರಹಣ ಅಥವಾ ಖಗ್ರಾಸ್ ಚಂದ್ರಗ್ರಹಣವನ್ನು ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿತ್ತು.

ಈ ಸಂದರ್ಭದಲ್ಲಿ ಸರಿಸುಮಾರು 250ಕ್ಕೂ ಸಾರ್ವಜನಿಕರು, ಪೋಷಕರು ತಮ್ಮ ಮಕ್ಕಳೊಂದಿಗೆ ಉತ್ಸಾಹದೊಂದಿಗೆ ಸುಮಾರು ರಾತ್ರಿ 9 ಗಂಟೆಯಿಂದ ಬೆಳಗಿನ 2.30 ಗಂಟೆಯವರೆಗೆ ಉಪಸ್ಥಿತರಿದ್ದು ಸಂಪೂರ್ಣ ಚಂದ್ರಗ್ರಹಣವನ್ನು ವೀಕ್ಷಿಸಿ ಹೆಚ್ಚಿನ ಜ್ಞಾನವನ್ನು ಪಡೆದುಕೊಂಡರು. ಚಂದ್ರನ ಪಕ್ಕದಲ್ಲಿರುವ ಶನಿಗ್ರಹವನ್ನು ಸಹ ದೂರದರ್ಶಕದ ಮೂಲಕ ಜನರಿಗೆ ವೀಕ್ಷಿಸಲು ಅವಕಾಶ ನೀಡಲಾಯಿತು.

ಕಾರ್ಯಕ್ರಮದಲ್ಲಿ ಜನರಲ್ಲಿ ವಿಜ್ಞಾನದ ಬಗ್ಗೆ ಆಸಕ್ತಿ ಮತ್ತು ಗ್ರಹಣಗಳ ಬಗ್ಗೆ ಹಿಂದಿರುವ ವೈಜ್ಞಾನಿಕ ಕಾರಣಗಳನ್ನು ಜನರಿಗೆ ತಿಳಿಸಲಾಯಿತು.

ಕಲಬುರಗಿ ಜಿಲ್ಲಾ ವಿಜ್ಞಾನ ಶೈಕ್ಷಣಿಕ ಅಧಿಕಾರಿ ಪೊನ್ನರಸನ, ಸೈನ್ಸ್ ಕಮ್ಯುನಿಕೇಟರ್ ಅಜಯ್ ಕಾಂಬಳೆ ಹಾಗೂ ಸಚಿನ್ ಕಂಟೆಗೋಳ ಅವರು ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಚಂದ್ರಗ್ರಹಣ ವೀಕ್ಷಣಾ ಕಾರ್ಯಕ್ರಮದ ಯಶಸ್ವಿಗೆ ಕಾರಣ–ರಾಗಿದ್ದಾರೆ.

# 25 ಕೋಟಿ ವೆಚ್ಚದಲ್ಲಿ ನೂತನ ಜಿಲ್ಲಾ ಕ್ರೀಡಾಂಗಣ ನಿರ್ಮಾಣ: ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಸೆ.08 : 25 ಕೋಟಿ ವೆಚ್ಚದಲ್ಲಿ 10 ಎಕರೆ ಭೂಮಿಯಲ್ಲಿ ನೂತನ ಜಿಲ್ಲಾ ಕ್ರೀಡಾಂಗಣ ನಿರ್ಮಾಣ ಮಾಡಲಾಗುವುದು ಎಂದು ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ತಿಳಿಸಿದರು.

ಅವರು ಸೋಮವಾರ ನಗರದ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ದಸರಾ ಸಿ.ಎಂ. ಕಪ್ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಬೀದರ ನಗರದದಲ್ಲಿ ರಾಷ್ಟ್ರ ಮಟ್ಟದ ಕ್ರೀಡಾಂಗಣದ ಬೇಡಿಕೆಯಿದೆ. ಈ ಹಿನ್ನೆಲೆಯಲ್ಲಿ 10 ಎಕರೆ ಭೂಮಿಯನ್ನು ಗುರುತಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು. 25 ಕೋಟಿ ವೆಚ್ಚದಲ್ಲಿ ಭವ್ಯವಾದ ಕ್ರೀಡಾಂಗಣ ನಿರ್ಮಾಣ ಮಾಡಲಾಗುವುದು ಹಾಗೂ ಪ್ರತಿ ತಾಲೂಕಿನಲ್ಲಿ ಕ್ರೀಡಾಂಗಣ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದರು.

ವಿಶ್ವವಿಖ್ಯಾತ ನಾಡ ಹಬ್ಬ ದಸರಾ ಪ್ರಯುಕ್ತವಾಗಿ ದಸರಾ ಸಿ.ಎಂ ಕಪ್ ಕ್ರೀಡಾಕೂಟ ಆಯೋಜಿಸಲಾಗಿದ್ದು, ಎಲ್ಲಾ ಮಕ್ಕಳು ಭಾಗವಹಿಸಿದ್ದು ಸಂತೋಷದ ವಿಷಯ ಎಂದರು. ಪಾಠದ ಜೊತೆಗೆ ಕ್ರೀಡೆಯು ಬಹಳ ಮುಖ್ಯವಾಗಿದೆ. ಕ್ರೀಡೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ಉತ್ತಮಗೊಳ್ಳುತ್ತದೆ. ಕ್ರೀಡೆಯಲ್ಲಿ ಅನೇಕರು ಸಾಧನೆ ಮಾಡಿದ್ದಾರೆ. ಮೇಜರ್ ಧ್ಯಾನಚಂದ್, ಸಚಿನ್ ತೆಂಡೂಲ್ಕರ್, ರಾಹುಲ್ ದ್ರಾವಿಡ್, ಮೇರಿ ಕೊಮ್, ಪಿ.ವಿ. ಸಿಂಧು ಮುಂತಾದವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದ್ದಾರೆ ಎಂದರು. ಕ್ರೀಡೆ ಶಿಸ್ತಿನ, ಶ್ರಮದ ಮತ್ತು ಆತ್ಮವಿಶ್ವಾಸದ ಪಾಠವನ್ನು ಕಲಿಸುವ ಅತ್ಯುತ್ತಮ ವೇದಿಕೆ.

ಯುವಜನರು ತಮ್ಮಲ್ಲಿರುವ ಕೌಶಲ್ಯ, ಸಾಮರ್ಥ್ಯ ಮತ್ತು ಪ್ರತಿಭೆಯನ್ನು ಹೊರತರುವುದಕ್ಕೆ ಇಂತಹ ಕ್ರೀಡಾಕೂಟಗಳು ದೊಡ್ಡ ಅವಕಾಶ. ದಸರಾ ಸಿ.ಎಂ. ಕಪ್ ಕ್ರೀಡಾಕೂಟವು ಗ್ರಾಮೀಣ ಹಾಗೂ ನಗರ ಪ್ರದೇಶಗಳ ಪ್ರತಿಭಾನ್ವಿತ ಕ್ರೀಡಾಪಟುಗಳನ್ನು ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟಕ್ಕೆ ತಲುಪಿಸಲು ಸೇತುವೆಯಾಗಲಿದೆ ಎಂದರು.

ಈ ಸಂದರ್ಭದಲ್ಲಿ

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಗಿರೀಶ್ ಬದೋಲೆ ,

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಮಂಜುಳಾ ಎಸ್ ಸೇರಿದಂತೆ ಇತರೆ ಅಧಿಕಾರಿಗಳು, ದೈಹಿಕ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜಿಲ್ಲೆಯಲ್ಲಿ 49827 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿ ಅತಿವೃಷ್ಟಿ: ಬೆಳೆ ಹಾನಿ ವೀಕ್ಷಿಸಿದ ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.8–ತಾಲೂಕಿನ ಕಲಾದಗಿ ಹೋಬಳಿ ವ್ಯಾಪ್ತಿಯಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಈರುಳ್ಳಿ ಬೆಳೆಯನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಸೋಮವಾರ ವೀಕ್ಷಣೆ ಮಾಡಿದರು.

ಬೆಳೆ ಹಾನಿ ಕುರಿತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಜ್ಞಾನಿಗಳ ಜೊತೆ ಚರ್ಚಿಸಿದರು. ಈರುಳ್ಳಿ ಬಹಳ ಸೂಕ್ಷ್ಮ ಬೆಳೆಯಾಗಿದ್ದು, ಜಿಲ್ಲೆಯಲ್ಲಿ ಆಗಸ್ಟ ಮಾಹೆಯಲ್ಲಿ ಸಾಮಾನ್ಯ ಮಳೆಗಿಂತ ಶೇ.112 ರಷ್ಟು ಹೆಚ್ಚಿನ ಪ್ರಮಾಣದಲ್ಲಿ ಮಳೆ ಆಗಿರುವದರಿಂದ ಈರುಳ್ಳಿ ಬೆಳೆಯ ಬೇರುಗಳು ಕಂದು ಬಣ್ಣಕ್ಕೆ ತಿರುಗಿ ನೀರು ಮತ್ತು ಪೋಷಕಾಂಶಗಳನ್ನು ಹೀರಿಕೊಳ್ಳಲು ಸಾಧ್ಯವಾಗದೇ ಸಣ್ಣ ಗಾತ್ರದ ಈರುಳ್ಳಿ ಕ್ಷೇತ್ರದಲ್ಲಿ ಕಾಣುತ್ತದೆ. ಇದೇ ರೀತಿ ಮಳೆ ಇನ್ನೂ ಮುಂದುವರೆದರೆ ಹೆಚ್ಚಿನ ಹಾನಿ ಉಂಟಾಗಬಹುದು ಎಂದು ವಿಜ್ಞಾನಿಗಳು ಅಭಿಪ್ರಾಯಪಟ್ಟರು.

ಅಧಿಕಾರಿಗಳು ವಿಜ್ಞಾನಿಗಳು ಇಲಾಖೆ ಅಧಿಕಾರಿಗಳ ಜೊತೆ ಚರ್ಚಿಸಿ ಸೂಕ್ತ ರೀತಿಯಲ್ಲಿ ಬೆಳೆಯನ್ನು ವೀಕ್ಷಿಸಿ ಮುಂಬರುವ ದಿನಗಳಲ್ಲಿ ರೈತರಿಗೆ ಅವಶ್ಯವಿರುವ ಮಾಹಿತಿಯನ್ನು ನೀಡಿ ಹಾನಿಗೊಳಗಾದ ಬೆಳೆಗಳ ಕುರಿತು ತಕ್ಷಣವೇ ಸರ್ವೆ ಕಾರ್ಯ ಕೈಗೊಂಡು ಸೂಕ್ತ ವರದಿಯನ್ನು ತಯಾರಿಸಬೇಕೆಂದು ಸಚಿವ ತಿಮ್ಮಾಪೂರ ಅಧಿಕಾರಿಗಳಿಗೆ ಸೂಚಿಸಿದರು. ಕಲಾದಗಿ ಗ್ರಾಮದ ರೇಣವ್ವ ಮಾದರ ಮತ್ತು ಹಣಮಂತ ಸಂಕ್ರಿ ಅವರ ಜಮೀನಿನಲ್ಲಿ ಬೆಳೆಯಲಾದ ಈರುಳ್ಳಿ ಬೆಳೆ ಹಾನಿ ವೀಕ್ಷಣೆ ಮಾಡಿದರು.

ಬೆಳೆ ಹಾನಿ ವೀಕ್ಷಣೆಯ ನಂತರ ಪತ್ರಿಕಾಗೋಷ್ಠಿ ನಡೆಸಿದ ಸಚಿವರು, ಮುಂಗಾರು ಅವಧಿಯಲ್ಲಿ 3.39 ಲಕ್ಷ ಹೆಕ್ಟೆರ್ ಕ್ಷೇತ್ರದಲ್ಲಿ ವಿವಿಧ ಬೆಳೆಗಳು ಬಿತ್ತನೆಯಾಗಿದ್ದು, ಹೆಚ್ಚಿನ ಪ್ರಮಾಣದಲ್ಲಿ ಮಳೆ ಆಗಿದ್ದರಿಂದ ಪ್ರಾಥಮಿಕ ವರದಿಯನ್ವಯ 25259 ಹೆಕ್ಟೆರ್ ಕ್ಷೇತ್ರ ಹಾನಿಯಾಗಿದೆ. ತೆ–ೋಟಗಾರಿಕೆ ಬೆಳೆಗಳಲ್ಲಿ 75719 ಹೆಕ್ಟೆರ ಕ್ಷೇತ್ರದಲ್ಲಿ ಬಿತ್ತನೆಯಾಗಿದ್ದು, ಈ ಪೈಕಿ 24575 ಹೆಕ್ಟೆರ್ ಕ್ಷೇತ್ರ ಹಾನಿಯಾಗಿದೆ. ಒಟ್ಟಾರೆಯಾಗಿ ಕೃಷಿ ಮತ್ತು ತೋಟಗಾರಿಕೆ ಬೆಳೆ ಸೇರಿ ಒಟ್ಟು 49827.72 ಹೆಕ್ಟೆರ್ ಕ್ಷೇತ್ರದಲ್ಲಿ ಬೆಳೆ ಹಾನಿಯಾಗಿರುತ್ತದೆ. ಪ್ರಮುಖವಾಗಿ ಹೆಸರು, ಸೂರ್ಯಕ್ರಾಂತಿ, ತೊಗರಿ, ಈರುಳ್ಳಿ, ಮೆಣಸಿನಕಾಯಿ ಬೆಳೆ ಹಾನಿಯಾಗಿರುತ್ತದೆ ಎಂದರು.

ಮೂಲಭೂತ ಸೌಕರ್ಯಗಳ ಪ್ರಾಥಮಿಕ ಹಾನಿ ವಿವರ ತಿಳಿಸಿದ ಅವರು 223 ಶಾಲಾ ಕಟ್ಟಡ ಹಾನಿಯಾಗಿದ್ದು, 446 ಲಕ್ಷ ಅನುದಾನ ಅವಶ್ಯವಿದೆ. 105 ಅಂಗನವಾಡಿ ಕಟ್ಟಡಗಳು ಸಹ ಹಾನಿಯಾಗಿದ್ದು, ದುರಸ್ಥಿಗೆ 176 ಲಕ್ಷ ರೂಗಳ ಅನುದಾನ ಅಂದಾಜಿಸಲಾಗಿದೆ. ಹೆಸ್ಕಾಂಗೆ ಸಂಬಂಧಿಸಿದ 316 ಕಂಬಗಳು, 18 ಟಿಸಿ, 6.98 ಕಿ.ಮೀ ವಿದ್ಯುತ್ ತಂತಿ ಹಾನಿಯಾಗಿದೆ. ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ 3.90 ಕಿ.ಮೀ ಜಿಲ್ಲಾ ಮುಖ್ಯ ರಸ್ತೆ, 10 ಸೇತುವೆಗಳು ಹಾನಿಯಾಗಿದ್ದು, ತುರ್ತು ದುರಸ್ಥಿ ಕಾಮಗಾರಿ ಕೈಗೊಳ್ಳಲಾಗಿದೆ. ಅಂದು ಒಟ್ಟು 114 ಲಕ್ಷ ಹಾನಿಯಾಗಿರುವುದಾಗಿ ತಿಳಿಸಿದರು.

ಗ್ರಾಮೀಣ ರಸ್ತೆಗಳು ಸಹ ಹಾನಿಗೀಡಾಗಿದ್ದು, 854.50 ಕಿ.ಮೀ ಹಾನಿಯಾಗಿದ್ದು, ದುರಸ್ಥಿಗಾಗಿ 854 ಲಕ್ಷ ರೂ.ಗಳ ಅನುದಾನ ಬೇಕಾಗುತ್ತದೆ. ಒಟ್ಟಾರೆಯಾಗಿ ಪ್ರಾಥಮಿಕ ವರದಿಯನ್ವಯ 1856.69 ಲಕ್ಷ ರೂ.ಗಳ ಮೂಲಭೂತ ಸೌಲಭ್ಯ ಮತ್ತು 6650 ಲಕ್ಷ ರೂ. ಹಾಗೂ ಕೃಷಿ ಮತ್ತು ತೋಟಗಾರಿಕೆ ಬೆಳೆ ಹಾನಿ ಸೇರಿ ಒಟ್ಟು 8506 ಲಕ್ಷಗಳ ಹಾನಿಯಾಗಿರುತ್ತದೆ ಎಂದು ತಿಳಿಸಿದರು.

ಪೂರ್ವ ಮುಂಗಾರು ಮತ್ತು ಮುಂಗಾರು ಅವಧಿಯಲ್ಲಿ 3 ಜೀವ ಹಾನಿ ಸಂಭವಿಸಿದೆ. ಸದ್ಯ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ 3578 ಲಕ್ಷ ಹಾಗೂ ತಹಶೀಲ್ದಾರರ ಪಿಡಿ ಖಾತೆಯಲ್ಲಿ 339.89 ಲಕ್ಷ ರೂ.ಗಳ ಅನುದಾನ ಲಭ್ಯವಿರುವುದಾಗಿ ಸಚಿವರು ತಿಳಿಸಿದರು.

ಬೀಳಗಿ ಶಾಸಕ ಜೆ.ಟಿ.ಪಾಟೀಲ, ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ, ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ, ತೋವಿವಿಯ ಪ್ರಾಧ್ಯಾಪಕ ಡಾ.ವಸಂತ ಗಾಣಿಗೇರ, ತಹಶೀಲ್ದಾರ ವಾಸುದೇವಸ್ವಾಮಿ ಸೇರಿದಂತೆ ಇತರರು ಇದ್ದರು.

# ಅಭಿವೃದ್ಧಿ ಕೆಲಸಗಳಲ್ಲಿ ಬೇದಭಾವ ಮಾಡಬಾರದು: ಸಚಿವ ರಹೀಂಖಾನ್



ಕಲಬುರಗಿ, ಸೆ 08 : ಜನ ನಾಯಕರಾದವರು ಅಭಿವೃದ್ಧಿ ಕೆಲಸಗಳಲ್ಲಿ ಬೇದಭಾವ ಮಾಡಬಾರದು, ಬಸವಣ್ಣ ಹಾಗೂ ಬಾಬಸಾಹೇಬರು ಹೇಳಿದಂತೆ ಎಲ್ಲರನ್ನೂ ಸಮಾನವಾಗಿ ಕಾಣಬೇಕು. ನಮ್ಮ ಧರ್ಮಗಳು ನಮ್ಮ ಮನೆ ಒಳಗಿರಲಿ ಹೊರಗೆ ಬಂದಾಗ ನಾವೆಲ್ಲ ಸಮಾನರು ಎಂದು ರಾಜ್ಯದ ಪೌರಾಡಳಿತ ಮತ್ತು ಹಜ್ ಇಲಾಖೆ ಸಚಿವರಾದ ರಹೀಂಖಾನ್ ಅವರು ಹೇಳಿದರು.

ಇಂದು ಆಳಂದ ಪಟ್ಟಣದ ಹೊರ ವಲಯದಲ್ಲಿ ಹೊಸದಾಗಿ ನಿರ್ಮಿಸಲಾಗಿರುವ ಘನತ್ಯಾಜ್ಯವಸ್ತು ನಿರ್ವಹಣೆ ಘಟಕದಲ್ಲಿ ಪಾರಂಪರಿಕ ತ್ಯಾಜ್ಯವಸ್ತು ನಿರ್ವಹಣೆಯನುಸಾರ ಅಭಿವೃದ್ಧಿ ಪಡಿಸಲಾಗಿರುವ ನೂತನ ಘಟಕ, ಸ್ವಚ್ಛ ಭಾರತ ಮಿಷನ್ ಅಡಿಯಲ್ಲಿ ಖರೀದಿಸಿರುವ ನೂತನ ವಾಹನಗಳು ಹಾಗೂ ಎಸ್‌ಬಿಎಮ್ 2.0 ಯೋಜನೆಯಡಿ ದರ್ಗಾದ ಬೇಸ್ ಹತ್ತಿರ ನಿರ್ಮಿಸಿರುವ ಶೌಚಾಲಯ ಮತ್ತು ಶ್ರೀರಾಮ್ ಮಾರ್ಕೆಟ್ ಆವರಣದಲ್ಲಿ ನಿರ್ಮಾಣ ಮಾಡಿರುವ ನೂತನ ಇಂದಿರಾ ಕ್ಯಾಂಟಿನ್‌ಗೆ ಚಾಲನೆ ನೀಡಿ ಮಾತನಾಡಿದರು.

ನಗರದ ನಡುವೆ ಇರುವ ಇಂದು ಉದ್ಘಾಟನೆಗೊಂಡ ಇಂದಿರಾ ಕ್ಯಾಂಟಿನ್‌ವು ಮಾರುಕಟ್ಟೆಗೆ ಬರುವ ಎಲ್ಲಾ ಬಡವರಿಗೂ, ವ್ಯಾಪಾರಸ್ಥರಿಗೂ ಸಹಾಯವಾಗಲಿದ್ದು, ಇಲ್ಲಿ ಬಡವರು ಹೊಟ್ಟೆ ತುಂಬಿಸಿಕೊಳ್ಳಲು ಅತ್ಯಂತ ಕಡಿಮೆ ಬೆಲೆ ಐದು ರೂ ಗಳನ್ನು ನಿಗದಿಪಡಿಸಲಾಗಿದೆ ಎಂದರು.

ಆಳಂದ ನಗರದ ನಿಜಾಮರ ಕಾಲದ ಪುರಸಭೆ ಕಟ್ಟಡ ಇನ್ನೂ ಗಟ್ಟಿಯಾಗಿದೆ, ಸ್ಥಳೀಯ ಮುಖಂಡರ ಬೇಡಿಕೆ–ಯಂತೆ ಹೊಸ ಕಟ್ಟಡಕ್ಕೆ ಅನುದಾನ ಬಿಡುಗಡೆ ಮಾಡಲಾಗುವುದು. ರಸ್ತೆ ಅಗಲೀಕರಣ, ಮಾರುಕಟ್ಟೆ ಅಭಿವೃದ್ಧಿ ಸೇರಿದಂತೆ ಸ್ಥಳೀಯ ಬೇಡಿಕೆಗಳಿಗೆ ತುರ್ತಾಗಿ ಸ್ಪಂದಿಸಲಾಗುವುದು ಎಂದು ಹೇಳಿದರು.

ಪುರಸಭೆಯನ್ನು ಮೇಲ್ದರ್ಜೆಗೇರಿಸಲು ಕ್ರಮಕೈಗೊಳ್ಳಲಾಗುವುದು. ಸಿಎಮ್‌ಸಿ ಅಪ್‌ಗ್ರೇಡೇಷನ್ ಮಾಡಲಾಗುವುದು. ಈಗಾಗಲೇ ಸಲ್ಲಿಸಿರುವ ವರದಿಯನ್ನು ಪರಿಶೀಲಿಸಲಾಗುವುದು. ನಂತರ ಸರ್ಕಾರದ ಗಮನಕ್ಕೆ ತಂದು ಶೀಘ್ರದಲ್ಲಿ ಮೇಲ್ದರ್ಜೆಗೇರಿಸಲಾಗುವುದು ಎಂದು ಭರವಸೆ ನೀಡಿದರು.

ನಾನು ಜನರಿಗಾಗಿ ಇರುತ್ತೇನೆ. ಕಲ್ಯಾಣ ಕರ್ನಾಟಕ ಭಾಗದವರಿಗೆ 371 ಜೆ ಮತ್ತು ಪಂಚಗ್ಯಾರಂಟಿಗಳ ಬಗ್ಗೆ ಅನೇಕ ಬಡ ಮಹಿಳೆಯರು ಗೌರವ ಸಲ್ಲಿಸಿರುವ ಅನೇಕ ಘಟನೆಗಳನ್ನು ನೋಡಿದ್ದೇನೆ. ಯಾವುದೇ ಪಕ್ಷ ಬೇದವಿಲ್ಲದೆ ಎಲ್ಲರಿಗೂ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಎಂದರು.

ಸರ್ಕಾರದ ಅಭಿವೃದ್ಧಿ ಕಾರ್ಯಗಳ ಜೊತೆ ಸಮಾಜದ ಶಾಂತಿ ಕಾಪಾಡುವ ಕೆಲಸ ಮುಖ್ಯವೆಂದು ಮಾನ್ಯ ಮುಖ್ಯ ಮಂತ್ರಿಗಳ ಸಲಹೆಯಂತೆ ಸಮಾಜದ ದುಷ್ಟಶಕ್ತಿಗಳನ್ನು ಸಹ ಹಿಮ್ಮೆಟ್ಟಿಸುವ ಕಾರ್ಯವನ್ನು ಸರ್ಕಾರ ಮಾಡುತ್ತಿದೆ.

ಸ್ಥಳೀಯವಾಗಿ ಅಭಿವೃದ್ಧಿ ಪಡಿಸಲಾಗಿರುವ ಘನತ್ಯಾಜ್ಯ ಘಟಕ ಜಿಲ್ಲೆಯಲ್ಲಿಯೇ ಮಾದರಿಯಾಗಿದ್ದು, ಇಂತಹ ಚಿಕ್ಕ ತಾಲ್ಲೂಕಿನಲ್ಲಿ ಈ ಘಟಕ ಸ್ಥಾಪನೆಗೆ ಶ್ರಮವಹಿಸಿದ ಮತ್ತು ಕಸದಿಂದ ರಸ ತೆಗೆದ ಸ್ಥಳೀಯ ಅಧಿಕಾರಿಗಳನ್ನು ಬೆಂಗಳೂರಿಗೆ ಕರೆಸಿ ಸನ್ಮಾನಿಸಲಾಗುವುದು. ಒಂದು ರೂ ಗೆ ಒಂದು ಕೆಜಿ ಸಾವಯವ ಗೊಬ್ಬರ ನೀಡಲಾಗುತ್ತಿದೆ. ಇದ–ರಿಂದ ಭೂಮಿ ಹಾಳಾಗುವುದಿಲ್ಲ. ಈ ಗೊಬ್ಬರದಿಂದ ಭೂಮಿಯ ಆರೋಗ್ಯಕ್ಕೆ ಸಹಾಯವಾಗಲಿದೆ, ರೈತರು ಈ ಗೊಬ್ಬರವನ್ನು ಹೆಚ್ಚಾಗಿ ಬಳಸುವಂತೆ ಕರೆ ನೀಡಿದರು.

ಆಳಂದ ಶಾಸಕರು ಹಾಗೂ ಕರ್ನಾಟಕ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ ಆರ್ ಪಾಟೀಲ್ ಅವರು ಮಾತನಾಡಿ, ಸಚಿವರು ಕಸ ವಿಲೇವಾರಿ ಘಟಕ ಉದ್ಘಾಟಿಸಿದರು, ಈ ತರಹದ ಕಲಬುರಗಿ ಜಿಲ್ಲೆಯಲ್ಲಿ ಎಲ್ಲೂ ಆಗಿಲ್ಲ, ಆಳಂದದ ಕಸ ಗೊಬ್ಬರ ಮಾಡಿ ಇಂದಿನಿಂದ ಮಾರಾಟಕ್ಕೆ ಇಡಲಾಗುತ್ತಿದೆ. ಇದೊಂದು ಉತ್ತಮವಾದ ಗೊಬ್ಬರವಾಗಿದೆ. ರಸಾಯನಿಕ ಗೊಬ್ಬರ ಕ್ಕಿಂತ ಉತ್ತಮವಾದ ಗೊಬ್ಬರವಾಗಿದೆ. ಗೊಬ್ಬರ ಮಾಡಲಾಗದ ಕಸವನ್ನು ಸಿಮೆಂಟ್ ಫ್ಯಾಕ್ಟರಿಗಳಿಗೆ ನೀಡಲಾಗುತ್ತಿದೆ ಎಂದು ಹೇಳಿದರು.

ಆಳಂದ ನಗರದ ರಸ್ತೆಗಳನ್ನು ಶೀಘ್ರದಲ್ಲಿ 15 ಕೋ ರೂ ವೆಚ್ಚದಲ್ಲಿ ಅಗಲೀಕರಣ ಮಾಡಲಾಗುವುದು ಎಂದು ಭರವಸೆ ನೀಡಿದ ಶಾಸಕರು ನಗರದ ಅಭಿವೃದ್ಧಿ ಕಾರ್ಯಗಳಿಗಾಗಿ ಯಾವುದೇ ಒತ್ತಡಕ್ಕೂ ಮಣಿಯುವುದಿಲ್ಲ ಮತ್ತು ಯಾವುದೇ ಕಾರಣಕ್ಕೂ ಹಿಂದಕ್ಕೆ ಸರಿಯುವುದಿಲ್ಲ ಎಂದರು.

ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, 69 ಕೋ ರೂ ವೆಚ್ಚದಲ್ಲಿ ಇನ್ನೂ ಆರು ತಿಂಗಳಲ್ಲಿ ಮನೆ ಮನೆಗೆ ನೀರು ತರಲಾಗುವುದು. ನಿಜಾಮರ ಕಾಲದ ಕಟ್ಟಡಗಳಂತೆ ಗಟ್ಟಿಮುಟ್ಟಾದ ಪುರಸಭೆ ಕಟ್ಟಡವನ್ನು ಕಟ್ಟಲು ಅನುದಾನ ಒದಗಿಸುವಂತೆ ಸಚಿವರಲ್ಲಿ ಬೇಡಿಕೆ ಸಲ್ಲಿಸಿದರು.

ಶೀಘ್ರದಲ್ಲಿ ನಗರದ ಶ್ರೀರಾಮ ಮಾರ್ಕೆಟ್ ನಲ್ಲಿ ಇರುವ 65 ಸಣ್ಣಪುಟ್ಟ ಅಂಗಡಿಗಳನ್ನು ಒಡೆದು ಹೊಸ ಅನುದಾನದಲ್ಲಿ ಹೊಸ ಮಾರುಕಟ್ಟೆಯನ್ನು ಕಟ್ಟಲಾಗುವುದು. 7.5 ಕೋಟಿ ರೂ ವೆಚ್ಚದಲ್ಲಿ ಈಗಾಗಲೇ ಹೊಸ ಬಸ್ ನಿಲ್ದಾಣಕ್ಕೆ ಅಡಿಗಲ್ಲು ಹಾಕಲಾಗಿದೆ.

ವ್ಯಾಪಾರ ಉದ್ದಿಮೆ ನಡೆದಲ್ಲಿ ನಗರ ಅಭಿವೃದ್ಧಿಯಾಗುತ್ತದೆ. ವಾರದ ಸಂತೆ ನಡೆಯುವ ಸ್ಥಳದ ಅಭಿವೃದ್ಧಿ ಮತ್ತು ಅಗತ್ಯ ವಿಸ್ತರಣೆಗಾಗಿ ಅನುದಾನ ಕೋರಲಾಗಿದೆ. ಇಂದಿರಾ ಕ್ಯಾಂಟಿನ್ ಮೂಲಕ ಇಲ್ಲಿನ ಮಾರುಕಟ್ಟೆಯಲ್ಲಿ ಕೆಲಸ ಮಾಡುವವರಿಗೆ ಸಹಾಯವಾಗಲಿದೆ. ಅತ್ಯಂತ ಕಡಿಮೆ ಬೆಲೆಯಲ್ಲಿ ಆಹಾರ ದೊರಕಲಿದೆ.

ಕೂಲಿಕಾರರು ಸಹ ಸ್ವಲ್ಪ ರೆಸ್ಟ್ ತೆಗೆದುಕೊಳ್ಳಲಿ, ಸರ್ಕಾರದ ಯೋಜನೆಗಳಿಂದ ಬಡವರಿಗೆ ಸಹಾಯವಾಗಲಿದೆ. ಸರ್ಕಾರಿ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಿ ಎಂದು ಮನವಿ ಮಾಡಿದರು. ಸಾರ್ವಜನಿಕರ ಸ್ಥಳೀಯ ಸಮಸ್ಯೆಗಳಿಗೆ ಸ್ಪಂದಿಸಲಾಗುವುದು, ಸ್ಥಳೀಯ ಪುರಸಭೆ ಸದಸ್ಯರ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ರೈತರಿಗೆ ಸಾವಯವ ರಸಗೊಬ್ಬರ, ಬೀದಿಬದಿ ವ್ಯಾಪಾರಿಗಳಿಗೆ ಡಿಜಿಟಲ್ ಐಡಿ ಕಾರ್ಡ್, ಹತ್ತನೆ ತರಗತಿ ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್, ಪ್ರತಿಭಾನ್ವಿತ ಇಂಜಿನೀಯರಿಂಗ್ ಮತ್ತು ಮೆಡಿಕಲ್ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ ಚಂದ್ರಿಕಾ ಪರಮೇಶ್ವರ, ಆಳಂದ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಶಿವಪುತ್ರಪ್ಪ ಪಾಟೀಲ್, ಆಳಂದ ಪುರಸಭೆ ಅಧ್ಯಕ್ಷ ಫಿರ್ದೋಸ್ ಅನ್ಸಾರಿ, ಜಿಲ್ಲಾ ಯೋಜನಾ ನಿರ್ದೇಶಕ ಮುನಾವರ ದೌಲಾ, ತಹಸೀಲ್ದಾರ ಅಣ್ಣಾರಾವ್ ಪಾಟೀಲ್, ತಾಪಂ ಕಾರ್ಯನಿರ್ವಾಹಕಾಧಿಕಾರಿ ಮಾನಪ್ಪ ಕಟ್ಟಿಮನಿ ಮತ್ತು ಪುರಸಭೆ ಮುಖ್ಯಾಧಿಕಾರಿ ಸಂಗಮೇಶ್ ಪನಶೆಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಕಲಬುರಗಿ,ಸೆ.08:ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಹೈದ್ರಾಬಾದ್‌ದಿಂದ ರಸ್ತೆ ಮೂಲಕ ಸೆಪ್ಟೆಂಬರ್ 9 ರಂದು ಮಂಗಳವಾರ ರಾತ್ರಿ 10.15 ಗಂಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು. ಸೆಪ್ಟೆಂಬರ್ 10 ರಂದು ಬುಧವಾರ ಕಲಬುರಗಿಯಲ್ಲಿ ನಿಗದಿತ ಕಾಂರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 3 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಹೈದ್ರಾಬಾದಿಗೆ ಪ್ರಯಾಣಿಸುವರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.